ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 14 ಮಂಗಳವಾರ 2026

ಸಂಪುಟ: 46 | ಸಂಚಿಕೆ: 353 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4





ಮುಂದಿನ ಎರಡು ವರ್ಷಗಳಲ್ಲಿ ಮೈಸೂರು ಜಯದೇವದಲ್ಲಿ 600 ಹಾಸಿಗೆಗಳ ಸೇವೆ ಲಭ್ಯ

●ಸಂಸ್ಥೆಯ ನಿರ್ದೇಶಕ ಡಾ.ಬಿ.ದಿನೇಶ್ ವಿಶ್ವಾಸ ●ಮಕ್ಕಳ ಹೃದ್ರೋಗ ವಿಭಾಗ ಆರಂಭಿಸಲು ನಿರ್ಧಾರ

ಮೈಸೂರು,ಏ.13(ಎಂಕೆ)–ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿರುವ ಜಯದೇವ ಹೃದ್ರೋಗ ಆಸ್ಪತ್ರೆಯು ಮಕ್ಕಳ ಹೃದ್ರೋಗ ವಿಭಾಗದ ಜೊತೆಗೆ 600 ಹಾಸಿಗೆಗಳ ಸಾಮರ್ಥ್ಯ ಹೊಂದಲಿದೆ ಎಂದು ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಬಿ.ದಿನೇಶ್ ತಿಳಿಸಿದ್ದಾರೆ.

ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಗೆ ಸೋಮವಾರ ಭೇಟಿ ನೀಡಿದ ವೇಳೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿದ ಅವರು, ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಯ ಜನರು ಸೇರಿದಂತೆ ಹೊರ ರಾಜ್ಯದ ಜನರಿಗೂ ಗುಣಮಟ್ಟದ ಹೃದ್ರೋಗ ಚಿಕಿತ್ಸೆ ನೀಡುತ್ತಿರುವ ಆಸ್ಪತ್ರೆಯ ಸಾಮರ್ಥ್ಯ ಇನ್ನು ಹೆಚ್ಚಿಸಲಾಗುವುದು ಎಂದರು.

ರಾಜ್ಯ ಸರ್ಕಾರ ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ 180 ಕೋಟಿ ರೂ.ಅನುದಾನ ಘೋಷಣೆ ಮಾಡಿದ್ದು, 400 ಹಾಸಿಗೆಗಳಿಂದ 600 ಹಾಸಿಗೆಗಳಿಗೆ ವಿಸ್ತರಿಸುವ ಕಾರ್ಯವನ್ನು ಸರ್ಕಾರಿ ಆದೇಶ ಬಂದ ತಕ್ಷಣ ಕೈಗೆತ್ತಿಕೊಳ್ಳಲಾಗುವುದು. ಹೊಸದಾಗಿ 200 ಹಾಸಿಗೆಗಳ ಜೊತೆಗೆ 25 ಹೆಚ್ಚುವರಿ ಹಾಸಿಗೆಗಳ ಸೌಲಭ್ಯ ನೀಡಬೇಕು. ಜೊತೆಗೆ ನವಜಾತ ಶಿಶುಗಳ ಹೃದಯ ಶಸ್ತ್ರಚಿಕಿತ್ಸೆಗಾಗಿ ಮಕ್ಕಳ ವಿಭಾಗವನ್ನು ನಿರ್ಮಾಣ ಮಾಡಬೇಕು ಎಂಬ ಆಲೋಚನೆ ಇದೆ ಎಂದರು.

ಸರ್ಕಾರದಿಂದ ಅನುದಾನ ಬಂದ ಕೂಡಲೇ ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ, ಅವರ ಸಲಹೆಗಳನ್ನು ಪಡೆದು ರೂಪುರೇಷೆ ನಿರ್ಧರಿಸಲಾಗುವುದು. ಮುಂದಿನ 24 ತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸಿ, ಸಾರ್ವಜನಿಕರ ಸೇವೆಗೆ ನೀಡಬೇಕೆನ್ನುವ ಉದ್ದೇಶ ಹೊಂದಿದ್ದೇವೆ ಎಂದು ಹೇಳಿದರು.



ಮೈಸೂರಿನ ಕೆ.ಆರ್.ಎಸ್ ರಸ್ತೆಯಲ್ಲಿರುವ ಜಯದೇವ ಹೃದ್ರೋಗ ಆಸ್ಪತ್ರೆಗೆ ಭೇಟಿ ನೀಡಿದ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಬಿ.ದಿನೇಶ್, ಪರಿಶೀಲನೆ ನಡೆಸಿದರು. ಈ ವೇಳೆ ಜಯದೇವ ಹೃದ್ರೋಗ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ ಮತ್ತಿತರರಿದ್ದರು.

ವಿಸ್ತರಣೆಗೆ ಮನವಿ: ಕರ್ನಾಟಕದ ಕರಾವಳಿ ಭಾಗ ಹಾಗೂ ದಾವಣಗೆರೆ, ಚಿತ್ರದುರ್ಗ ಜಿಲ್ಲೆಗಳಲ್ಲಿ ಜಯದೇವ ಆಸ್ಪತ್ರೆಗಳನ್ನು ಸ್ಥಾಪಿಸುವ ಕುರಿತು ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಅಲ್ಲಿಯೂ ಜಯದೇವ ಆಸ್ಪತ್ರೆಗಳನ್ನು ನಿರ್ಮಾಣ ಮಾಡುವುದರಿಂದ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ. ವಿಮಾ ಕಂಪನಿಗಳೊಂದಿಗೆ ಮೊದಲ ಸುತ್ತಿನ ಮಾತುಕತೆ ನಡೆಸಿದ್ದು, ಇನ್ಶೂರೆನ್ಸ್ ಸಂಬಂಧಿತ ಸಮಸ್ಯೆಗಳನ್ನು ಬಗೆಹರಿಸಲಾಗುವುದು ಎಂದು ಡಾ.ಬಿ.ದಿನೇಶ್ ವಿಶ್ವಾಸ ವ್ಯಕ್ತಪಡಿಸಿದರು.

ಪರಿಶೀಲನೆ: ಇದಕ್ಕೂ ಮುನ್ನ ಜಯದೇವ ಆಸ್ಪತ್ರೆ ವಾರ್ಡ್‌ಗಳು, ಕ್ಯಾಂಟಿನ್, ಪಾರ್ಕಿಂಗ್ ವ್ಯವಸ್ಥೆ ಹಾಗೂ ಹೊರರೋಗಿಗಳ ಸಂಬಂಧಿಕರ ವಿಶ್ರಾಂತಿಗಾಗಿ ನಿರ್ಮಾಣಗೊಳ್ಳುತ್ತಿರುವ ಕಟ್ಟಡ ಕಾಮಗಾರಿ ಪರಿಶೀಲನೆ ನಡೆಸಿದ ಅವರು, ಒಳ ಹಾಗೂ ಹೊರ ರೋಗಿಗಳಿಗೆ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಸೌಕರ್ಯಗಳನ್ನು ಒದಗಿಸಬೇಕು. ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ–ಸೂಚನೆಗಳನ್ನು ನೀಡಿದರು. ಹಾಗೆಯೇ ಆಸ್ಪತ್ರೆಯ ವೈದ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿ, ಆಸ್ಪತ್ರೆಯಲ್ಲಿನ ಕುಂದು–ಕೊರತೆಗಳನ್ನು ಆಲಿಸಿದರು.

ಮೈಸೂರಿನ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ, ವೈದ್ಯರಾದ ಡಾ.ಸಂತೋಷ್, ಡಾ.ಹರ್ಷ ಬಸಪ್ಪ, ಡಾ.ಜಯಪ್ರಕಾಶ್, ಡಾ.ವೀಣಾ ನಂಜಪ್ಪ, ಡಾ.ಪಶುಪತಿ, ಪಿಆರ್‌ಒ ಪ್ರಿಯದರ್ಶಿನಿ ಹಾಗೂ ಇಂಜಿನಿಯರ್ ವಿಭಾಗದ ಅಧಿಕಾರಿ–ಸಿಬ್ಬಂದಿ ಉಪಸ್ಥಿತರಿದ್ದರು.

ವರನಟ ಡಾ.ರಾಜ್‌ಕುಮಾರ್ ಪುಣ್ಯಸ್ಮರಣೆ



ಮೈಸೂರು ಕನ್ನಡ ವೇದಿಕೆ ವತಿಯಿಂದ ವರನಟ ಡಾ.ರಾಜ್‌ಕುಮಾರ್ ಅವರ 20ನೇ ವರ್ಷದ ಪುಣ್ಯಸ್ಮರಣೆ ಹಿನ್ನೆಲೆ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಲಾಯಿತು.

ಮೈಸೂರು,ಏ.13–ವರನಟ ಡಾ.ರಾಜ್‌ಕುಮಾರ್ ಅವರ 20ನೇ ವರ್ಷದ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ಮೈಸೂರಿನ ಡಾ.ರಾಜ್‌ಕುಮಾರ್ ಉದ್ಯಾನ ವನದಲ್ಲಿರುವ ಅವರ ಪ್ರತಿಮೆಗೆ ಮೈಸೂರು ಕನ್ನಡ ವೇದಿಕೆ ವತಿಯಿಂದ ಪುಷ್ಪನಮನ ಸಲ್ಲಿಸಲಾಯಿತು. ಈ ವೇಳೆ ವೇದಿಕೆ ಅಧ್ಯಕ ಎಸ್.ಬಾಲಕೃಷ್ಣ ಮಾತನಾಡಿ, ಆಡು ಮುಟ್ಟದ ಸೊಪ್ಪಿಲ್ಲ, ಹಾಗೆಯೇ ಡಾ.ರಾಜ್‌ಕುಮಾರ್ ಅವರು ಅಭಿನಯಿಸದ ಪಾತ್ರಗಳಿಲ್ಲ. ಭಾರತದಲ್ಲೇ ಅಮೇರಿಕ ನೀಡಿದ ಪ್ರತಿಷ್ಠಿತ ಪ್ರಶಸ್ತಿ ಪಡೆದ ಏಕೈಕ ನಟರಾದ ಇವರು, ಕನ್ನಡ ಭಾಷೆ ಹಾಗೂ ನಾಡಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ವೇದಿಕೆ ಪದಾಧಿಕಾರಿಗಳಾದ ಮಹದೇವಸ್ವಾಮಿ, ಸಿದ್ಧಪ್ಪ ಎಲ್‌ಐಸಿ, ರೈತ ಪರ್ವ ಸಂಘಟನೆ ಮುಖಂಡರಾದ ಅರುಣ್ ಕುಮಾರ್, ಸಾಯಿ ಚಾಮರಾಜು, ಬೋಗಾದಿ ಸಿದ್ದೇಗೌಡ, ಹನಕೆರೆ ಸ್ವಾಮಿ, ಗೋವಿಂದರಾಜು, ಶಿವಕುಮಾರ್ ಹೆಮ್ಮಿಹಳ್ಳಿ, ಸೂರ್ಯಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಹುಟ್ಟುಹಬ್ಬದ ಶುಭಾಶಯ...



ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯನವರು ಖ್ಯಾತ ಸಾಹಿತಿ ಪ್ರೊ.ಸಿ.ಪಿ. ಕೃಷ್ಣಕುಮಾರ್ (ಸಿಪಿಕೆ) ಅವರಿಗೆ 87ನೇ ಹುಟ್ಟುಹಬ್ಬದ ಶುಭಾಶಯ ಕೋರಿದರು. ಈ ವೇಳೆ ಕನ್ನಡ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಆದಿಜಾಂಬವ ವಿಭಾಗೀಯ ಅಧ್ಯಕ್ಷ ಯಡತೊರೆ ನಿಂಗರಾಜು, ಡಿ.ಕುಮಾರ್, ಲೋಕೇಶ್ ಇದ್ದರು.

ಉನ್ನತ ಶ್ರೇಣಿಯಲ್ಲಿ ತನ್ಮಯಿ ತೇರ್ಗಡೆ



ಮೈಸೂರು, ಏ.13– ಮೈಸೂರಿನ ಬಿಜಿಎಸ್ ಪಿಯು ಕಾಲೇಜಿನ ವಿದ್ಯಾರ್ಥಿನಿ ಎಂ.ತನ್ಮಯಿ 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ ವಿಜ್ಞಾನ ವಿಭಾಗದಲ್ಲಿ 581 (ಶೇ.97) ಅಂಕಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದು, ಈಕೆ ಜೆಎಸ್‌ಎಸ್ ನೌಕರರಾದ ಮಲ್ಲಣ್ಣ ಹಾಗೂ ಲತಾ ದಂಪತಿಯ ಪುತ್ರಿ.

ಕೋಮಲ್ ಅರಸ್‌ಗೆ 575 ಅಂಕ



ಮೈಸೂರು, ಏ. 13– ಮೈಸೂರಿನ ಶ್ರೀರಾಂಪುರದ ಶಾರದಾ ವಿದ್ಯಾಕೇಂದ್ರದ ವಿದ್ಯಾರ್ಥಿ ಕೋಮಲ್ ಗುರು ಅರಸ್ 2025–262ನೇ ಸಾಲಿನನಲ್ಲಿ ನಡೆದ ದ್ವಿತೀಯ ಪಿಯು ಪರೀಕ್ಷೆಯಲ್ಲಿ 600ಕ್ಕೆ 575 (ಶೇ. 95.83)ರಷ್ಟು ಅಂಕ ಗಳಿಸುವ ಮೂಲಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ತ್ರಿಶಾಲಗೆ ಶೇ.95.33 ಅಂಕ



ಮೈಸೂರು, ಏ.13–ಮೈಸೂರಿನ ಸಿದ್ದಾರ್ಥನಗರದಲ್ಲಿರುವ ಟೆರಿಷಿಯನ್ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ (ವಿಜ್ಞಾನ) ವಿದ್ಯಾರ್ಥಿನಿ ತ್ರಿಶಾಲ. ಆರ್ 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ ವಿಷಯದಲ್ಲಿ 600ಕ್ಕೆ 572 (ಶೇ.95.33) ಅಂಕ ಪಡೆದು ಅತ್ಯುನತ್ತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಈಕೆ ಮೈಸೂರಿನ ಗಾಂಧಿನಗರದ ಶ್ರೀ ದುರ್ಗಾ ದೇವಿ ದೇವಸ್ಥಾನದ ರಸ್ತೆ ನಿವಾಸಿ ರವಿಕುಮಾರ್ ಮತ್ತು ಪ್ರಮೀಳಾ ಅವರ ಹಿರಿಯ ಪುತ್ರಿ.

ದ್ರಾಕ್ಷಾಯಿಣಿಗೆ 565 ಅಂಕ



ಮೈಸೂರು,ಏ.13–2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕಿನ ಬಿಜಿಎಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ದ್ರಾಕ್ಷಾಯಿಣಿ ಬಿ.ಎಸ್. 600ಕ್ಕೆ 565 ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾಳೆ. ಈಕೆ ಸುರೇಶ್ ಹಾಗೂ ಕಾಂತಮಣಿ ದಂಪತಿ ಪುತ್ರಿ.

ಮಾನಸಾಗೆ ಶೇ.93ರಷ್ಟು ಅಂಕ



ಮೈಸೂರು: ಸರಸ್ವತಿಪುರಂನಲ್ಲಿರುವ ವಿಜಯ ವಿಠಲ ಸಂಯುಕ್ತ ಪಿಯು ಕಾಲೇಜಿನ ವಿದ್ಯಾರ್ಥಿನಿ ಎಂ.ಮಾನಸ 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ ವಾಣಿಜ್ಯ ವಿಷಯದಲ್ಲಿ 600ಕ್ಕೆ 558 (ಶೇ.93) ಅಂಕ ಪಡೆದು ಅತ್ಯುನ್ನತ್ತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಈಕೆ ಎ.ಮಹೇಶ್–ಕೆ.ವಸಂತ ಅವರ ಪುತ್ರಿ.

ರೂಪಶ್ರೀ ಬಿ.ಎಸ್.ಗೆ 84.67 ಅಂಕ



ಮೈಸೂರು, ಏ. 13– ಮೈಸೂರಿನ ಸಾತಗಳ್ಳಿ ಸಂತ ಜೋಸೆಫ್ ಬಾಲಕಿಯರ ಪಿಯು ಕಾಲೇಜಿನ ವಿದ್ಯಾರ್ಥಿನಿ ರೂಪಶ್ರೀ ಬಿ.ಎಸ್. ಶೇ. 84.67ರಷ್ಟು ಅಂಕಗಳನ್ನು ಗಳಿಸಿ, ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಇಂಟರ್‌ನ್ಯಾಷನಲ್ ಮಾಸ್ಟರ್ ಅಥ್ಲೀಟ್ ಎಚ್.ಆರ್.ರಾಮಸ್ವಾಮಿ ಅವರ ಮೊಮ್ಮಗಳು.

ಟಿ.ಕಾಟೂರಿನ ಲಕ್ಷ್ಮಿಗೆ 556 ಅಂಕ




ಮೈಸೂರು, ಏ.13– ಮೈಸೂರು ತಾಲೂಕಿನ ಜಯಪುರ ಹೋಬಳಿಯ ಟಿ.ಕಾಟೂರು ಗ್ರಾಮದ ಲಕ್ಷ್ಮೀ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ 600ಕ್ಕೆ 556 ಅಂಕಗಳನ್ನು ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಮೈಸೂರಿನ ಎಸ್.ಡಿ.ಎಂ ಮಹಿಳಾ ಕಾಲೇಜಿನ ವಿದ್ಯಾರ್ಥಿ. ಲಕ್ಷ್ಮಿ ಟಿ.ಕಾಟೂರು ಗ್ರಾಮದ ಕೂಲಿ ಕಾರ್ಮಿಕರಾದ ನಾರಾಯಣ ಮತ್ತು ಚನ್ನಮ್ಮ ದಂಪತಿ ಪುತ್ರಿ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಏ.13– ಕೋಟೆಹುಂಡಿ ಎನ್.ಜೆ.ವೈ ವಿದ್ಯುತ್ ಮಾರ್ಗದಲ್ಲಿ ನಿರ್ವಹಣಾ ಕೆಲಸದ ನಿಮಿತ್ತ ಏ.15ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಗೊರೂರು, ಕಳಲವಾಡಿ, ರಾಯನಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ನಿಧನ

ಪಿ.ಇ.ಹೊಂಬಾಳಪ್ಪ



ಮೈಸೂರು: ಮೈಸೂರಿನ ಪಡುವಾರಹಳ್ಳಿ (ವಿನಾಯಕನಗರ)ಯ ನಿವಾಸಿ ಪಿ.ಇ.ಹೊಂಬಾಳಪ್ಪ (76) ಅವರು ಸೋಮವಾರ ನಿಧನರಾದರು. ಮೃತರು ಪತ್ನಿ ದೇವಕಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಏ.14) ಮಧ್ಯಾಹ್ನ 12 ಗಂಟೆಗೆ ಗೋಕುಲಂ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ಏ.17, 18ಕ್ಕೆ ಮೈಸಿರಿ ಸಂಭ್ರಮ

ಮೈಸೂರು, ಏ.13(ಜಿಎ)– ಟಿ.ನರಸೀಪುರ ರಸ್ತೆ ದೊಡ್ಡಾಲದ ಮರ ಬಳಿಯ ಮೈಸೂರು ಎಂಜಿನಿಯರಿಂಗ್ ಮತ್ತು ನಿರ್ವಹಣೆ ಕಾಲೇಜಿನಲ್ಲಿ ಏ.17 ಮತ್ತು 18 ರಂದು ಕಾಲೇಜು ವಾರ್ಷಿಕೋತ್ಸವ 'ಮೈಸಿರಿ ಸಂಭ್ರಮ' ಆಯೋಜಿಸಲಾಗಿದೆ ಎಂದು ಕಾಲೇಜಿನ ಕೃತಕ ಬುದ್ಧಿಮತ್ತೆ ವಿಭಾಗದ ಮುಖ್ಯಸ್ಥ ಡಾ. ಜಯರಾಮ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಏ.17ರಂದು ಬೆಳಗ್ಗೆ 10ಕ್ಕೆ ಉದ್ಘಾಟನೆಗೊಳ್ಳಲಿದ್ದು, ಜೆಎಸ್‌ಎಸ್ ವಿವಿ ಕುಲಪತಿ ಡಾ.ಎಚ್. ಬಸವನಗೌಡಪ್ಪ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಏ.18ರಂದು ಸಂಜೆ 6ಕ್ಕೆ ನಡೆಯುವ ಮುಖ್ಯ ಕಾರ್ಯಕ್ರಮದಲ್ಲಿ ಕನ್ನಡ ಚಿತ್ರರಂಗದ ಖ್ಯಾತ ನಟಿ ರಾಗಿಣಿ ದ್ವಿವೇದಿ ಹಾಜರಿರುವರು. ಈ ಎರಡು ದಿನವೂ ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ವಿವಿಧ ಕಾರ್ಯಕ್ರಮ, ಸ್ಪರ್ಧೆ ನಡೆಯಲಿದ್ದು, ಮೈಸೂರು, ಚಾಮರಾಜನಗರ ಜಿಲ್ಲೆಗಳ ಸುಮಾರು 20 ಕಾಲೇಜುಗಳಿಂದ ಒಟ್ಟಾರೆ 2 ಸಾವಿರ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ ಎಂದರು. ಸುದ್ದಿಗೋಷ್ಠಿಯಲ್ಲಿ ಅರುಣ್, ಡಾ.ಬಸವರಾಜು, ಯೋಗೇಶ್, ವಿದ್ಯಾಸಾಗರ್, ಜಿ.ಎನ್.ಮಹದೇವಸ್ವಾಮಿ ಉಪಸ್ಥಿತರಿದ್ದರು.



ಆದಿಚುಂಚನಗಿರಿ ಕ್ಷೇತ್ರಕ್ಕೆ ಏ.15ರಂದು ಆಗಮಿಸಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮೈಸೂರು ಆದಿಚುಂಚನಗಿರಿ ಭಕ್ತವೃಂದದಿಂದ ವಿಶೇಷವಾಗಿ ತಯಾರಿಸಲ್ಪಟ್ಟಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಮಾದರಿ ಪೇಟವನ್ನು ಶ್ರೀ ಆದಿಚುಂಚನಗಿರಿ ಕ್ಷೇತ್ರದ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ ಅವರಿಗೆ ಹಸ್ತಾಂತರಿಸಲಾಯಿತು. ಈ ವೇಳೆ ಮೂಳೆ ತಜ್ಞ ಬಾಲಕೃಷ್ಣೇಗೌಡ, ನಮ್ಮೂರು ನಮ್ಮೋರು ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಬೀಡನಹಳ್ಳಿ ಸತೀಶ್‌ಗೌಡ, ಮೈಸೂರು–ಚಾಮರಾಜನಗರ ಜಿಲ್ಲಾ ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಚೇತನ್, ನಿರ್ದೇಶಕರಾದ ಎ.ರವಿ, ಗಿರೀಶ್‌ಗೌಡ, ಸಂತೋಷ್, ಕಲಾವಿದ ನಂದನ್‌ಸಿಂಗ್ ಹಾಗೂ ಮಠದ ಸದ್ಭಕ್ತರಾದ ಸಂಜುಗೌಡ, ಜೀವನ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.4.2026 ಮಂಗಳವಾರ, ಮಳೆ ನಕ್ಷತ್ರ: ಅಶ್ವಿನಿ 14.04.2026 ರಿಂದ 26.04.2026 ಪರಾಭವ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ಶತಭಿಷ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30 ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9.30 ರಿಂದ ಫೈಲ್ಸ್, ಮೂಲವ್ಯಾಧಿ, ಫಿಸ್ತುಲಾ, ಭಗಂದರ, ನಾಡಿವ್ರಣ, ಫಿಶರ್, ಕೊಲೆಸ್ಟ್ರಾಲ್, ಮಹಿಳೆಯರಲ್ಲಿ ಯೋನಿ ಸೋಂಕು, ಸಯಾಟಿಕ, ಗೃದ್ರಸಿ ಮತ್ತು ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.

■ **ಸಂಜೀವಿನಿ ನಾಗರೀಕ ಹಿತರಕ್ಷಣಾ ಸಮಿತಿ, ಲೋಕನಾಯಕನಗರ** : ಬೃಹತ್ ಆರೋಗ್ಯ ತಪಾಸಣಾ ಶಿಬಿರ, ಉಪಸ್ಥಿತರು: ಸಂಸದ ಯದುವೀರ್ ಒಡೆಯರ್, ಮಾಜಿ ಶಾಸಕ ಎಲ್. ನಾಗೇಂದ್ರ, ಮಾಜಿ ಸಂಸದ ಪ್ರತಾಪ್‌ಸಿಂಹ, ಶಾಸಕ ಜಿ.ಡಿ.ಹರೀಶ್‌ಗೌಡ, ಕೆ.ಸಿ. ನಿಂಗೇಗೌಡ, ಮಾದೇಶ್, ಕೆ.ಟಿ. ಚೆಲುವೇಗೌಡ, ಸ್ಥಳ: ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಉದ್ಯಾನವನ, ಬೆಳಗ್ಗೆ 7 ರಿಂದ.

■ **ವ್ಯವಸ್ಥಾಪಕರು** : ಹಿರಿಯ ನಾಗರಿಕರಿಗೆ ಆರೋಗ್ಯ ತಪಾಸಣಾ ಶಿಬಿರ, ಸನ್ಮಾನ ಮತ್ತು ಅಭಿನಂದನಾ ಪತ್ರ ವಿತರಣಾ ಸಮಾರಂಭ, ಸ್ಥಳ: ಶಿವಮ್ಮ ಪಿ.ಮಹದೇವಪ್ಪ ಕಲ್ಯಾಣ ಮಂಟಪ, ಗೋಕುಲಂ, ಬೆಳಗ್ಗೆ 9 ರಿಂದ.

■ **ಆದಿಕರ್ನಾಟಕ ಮಹಾಸಂಸ್ಥೆ, ದೊಡ್ಡಗರಡಿ ಸಂಘ ಮತ್ತು ಚಿಕ್ಕಗರಡಿ ಸಂಘ ಹಾಗೂ ಅಶೋಕಪುರಂನ ವಿವಿಧ ಸಂಘ ಸಂಸ್ಥೆಗಳ ಒಕ್ಕೂಟ** : ಡಾ. ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ, ಮೆರವಣಿಗೆ ಉದ್ಘಾಟನೆ: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಅಧ್ಯಕ್ಷತೆ: ಆದಿಕರ್ನಾಟಕ ಮಹಾಸಂಸ್ಥೆ ಅಧ್ಯಕ್ಷ ಪಿ.ಸಿದ್ದರಾಜು (ಸುನೀಲ್), ವಿಶೇಷ ಆಹ್ವಾನಿತರು: ಸಂಸದರಾದ ಯದುವೀರ್ ಒಡೆಯರ್, ಸುನೀಲ್ ಬೋಸ್, ಶಾಸಕರಾದ ಟಿ.ಎಸ್.ಶ್ರೀವತ್ಸ, ದರ್ಶನ್ ಧ್ರುವನಾರಾಯಣ್, ಕೆ.ಶಿವಕುಮಾರ್, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮಾಜಿ ಮೇಯರ್ ಪುರುಷೋತ್ತಮ್, ಕರ್ನಾಟಕ ರಾಜ್ಯ ಎಸ್ಸಿ, ಎಸ್ಟಿ ನೌಕರರ ಸಂಘದ ಅಧ್ಯಕ್ಷ ಡಿ.ಚಂದ್ರಶೇಖರಯ್ಯ, ಉಪಆಯುಕ್ತ ಕೆ.ಎಸ್.ಸುಂದರ್‌ರಾಜ್, ಡಿ. ಭಾಗ್ಯಲಕ್ಷ್ಮಿ ಶ್ರೀನಿವಾಸಪ್ರಸಾದ್, ಸ್ಥಳ: ಡಾ.ಬಿ.ಆರ್.ಅಂಬೇಡ್ಕರ್ ಉದ್ಯಾನವನ, ಅಶೋಕಪುರಂ, ಬೆಳಗ್ಗೆ 9 ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ** : ಜೀರ್ಣಕ್ರಿಯೆ ಸಮಸ್ಯೆ, ಕೀಲುನೋವು, ಸೊಂಟ, ಬೆನ್ನುನೋವು, ಚರ್ಮವ್ಯಾಧಿ, ಸ್ತ್ರೀಯರ ಆರೋಗ್ಯ ಸಮಸ್ಯೆ, ತಲೆನೋವು, ಡಿಜಿಟಲ್ ಕಣ್ಣಿನ ಒತ್ತಡ, ಸ್ಥೌಲ್ಯ ಬೊಜ್ಜು, ಪರೀಕ್ಷಾ ಒತ್ತಡ, ಮಕ್ಕಳ ಕುಂಠಿತ ಬೆಳವಣಿಗೆ , ಬಂಜೆತನ, ಲಕ್ವ, ಕಂಪವಾತ, ಮೂಲವ್ಯಾಧಿ, ಮಧುಮೇಹ ಇತರ ಸಮಸ್ಯೆಗಳಿಗೆ ತಪಾಸಣೆ ಮತ್ತು ಚಿಕಿತ್ಸೆ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಕ್ರೀಡಾ ಕೌಶಲ್ಯ** : ಪಾರಂಪರಿಕ ಹಾಸು ಆಟಗಳ 11 ನೇ ದ್ವೈವಾರ್ಷಿಕ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್, ಬೆಳಗ್ಗೆ 10 ರಿಂದ.

■ **ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ–ವಿಸ್ತರಣಾ ಕೇಂದ್ರ, ಪರಿಶಿಷ್ಟ ಜಾತಿ, ಪಂಗಡಗಳ ವಿಶೇಷ ಘಟಕ**: ಡಾ.ಅಂಬೇಡ್ಕರ್ ಜಯಂತಿ, ಉದ್ಘಾಟನೆ: ಲೇಖಕಿ ಪ್ರೊ. ಎಂ.ಎಸ್. ಆಶಾದೇವಿ, ಅಧ್ಯಕ್ಷತೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಮುಖ್ಯ ಅತಿಥಿಗಳು: ಮೈಸೂರು ವಿವಿ ಕುಲಸಚಿವರಾದ ಎಂ.ಕೆ.ಸವಿತಾ, ಪ್ರೊ.ಎನ್.ನಾಗರಾಜು, ನಿರ್ದೇಶಕ ಪ್ರೊ.ನರೇಂದ್ರಕುಮಾರ್, ಉಪ ಕುಲಸಚಿವ ಕೆ.ಎನ್.ಮಂಜುನಾಥ, ಸ್ಥಳ: ವಿಶ್ವಜ್ಞಾನಿ ಸಭಾಂಗಣ, ಡಾ.ಬಿ.ಆರ್.ಅಂಬೇಡ್ಕರ್ ಕೇಂದ್ರ, ಬೆಳಗ್ಗೆ 10.30ಕ್ಕೆ.

■ **ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆ, ನವ ವಿಶ್ವಮಾನವ ಟ್ರಸ್ಟ್** : ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ, ಉಪಸ್ಥಿತರು : ಶಾಸಕ ಕೆ. ಹರೀಶ್‌ಗೌಡ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಮಲ್ಲಿಕ್, ಸಹಾಯಕ ಪೊಲೀಸ್ ಆಯುಕ್ತರಾದ ಎಂ. ಶಿವಶಂಕರ್, ರವಿಪ್ರಸದಾದ್, ಪ್ರೊ. ಎಸ್. ಶಿವರಾಜಪ್ಪ, ಮಹದೇಶ್, ಕ್ಯಾತನಹಳ್ಳಿ ನಾಗರಾಜು, ಡಾ. ಶಿಲ್ಪಾ, ಡಾ. ನಟರಾಜ್ ಶಿವಣ್ಣ, ಡಾ. ಎಂ.ಎಸ್. ಸಪ್ನಾ, ಡಾ. ಹೆಚ್.ಪಿ. ಜ್ಯೋತಿ, ಡಾ. ಇ.ಸಿ. ನಿಂಗರಾಜೇಗೌಡ, ಸ್ಥಳ: ಗ್ರಂಥಾಲಯ ಮುಂಭಾಗ, ಬೆಳಗ್ಗೆ 10.45ಕ್ಕೆ

■ **ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ** : ಡಾ. ಬಿ.ಆರ್. ಅಂಬೇಡ್ಕರ್‌ಗೆ 135ನೇ ವಿಶ್ವ ನಮನ, ಉಪಸ್ಥಿತರು : ಶಾಸಕ ತನ್ವೀರ್ ಸೇಠ್, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ. ಬಿ.ಜೆ. ವಿಜಯಕುಮಾರ್, ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್. ಮೂರ್ತಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಪುರುಷೋತ್ತಮ ಬಿಳಿಮಲೆ, ಲೇಖಕಿ ಶೈಲಜಾ ಹಿರೇಮಠ, ಸ್ಥಳ: ಇಂದಿರಾ ಗಾಂಧಿ ಕಾಂಗ್ರೆಸ್ ಭವನ, ಬೆಳಗ್ಗೆ 11 ರಿಂದ.

■ **ಅಶೋಕ ಯೂತ್ ಅಸೋಸಿಯೇಷನ್, ಜಿ.ಕೆ.ಗ್ರೂಪ್ಸ್ ಅಶೋಕಪುರಂ, ಜೈ ಭೀಮ್ ಯೂತ್ಸ್ ಅಸೋಸಿಯೇಷನ್:** ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ, ಜಕ್ಕೂರು ವಿಮಾನ ನಿಲ್ದಾಣದಿಂದ ಹೊರಟು 11.30ಕ್ಕೆ ಅಶೋಕ ವೃತ್ತ (ಬಲ್ಲಾಳ್ ವೃತ್ತ)ದ ಬಳಿ ಹೂವನ್ನು ಚೆಲ್ಲುವ ಕಾರ್ಯಕ್ರಮ, ಸ್ಥಳ: ಅಶೋಕವೃತ್ತ.

ಮೈಸೂರು ಆಕಾಶವಾಣಿ



ಬೆಳಗ್ಗೆ : 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧಕರ ಸೋಪಾನ– ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಅರಿವಿನ ಶಿಖರ ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಪಿ. ಸುರಭಿ ಹಾಗೂ ಜಯಂತಿ ವಿ. ಭಟ್, ವ್ಯಾಖ್ಯಾನ:ಡಾ. ಹೆಚ್. ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40 – ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು ಮುಕ್ತವಾಣಿ, ಪ್ರಾಯೋಜಕರು : ಪ್ರಸಾರಾಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ನಿರ್ವಹಣ ಶಾಸ್ತ್ರ ಅಧ್ಯಯನ ಮತ್ತು ಸಂಶೋಧನ ವಿಭಾಗದಲ್ಲಿನ ಅಧ್ಯಯನ ಅವಕಾಶಗಳನ್ನು ಕುರಿತು ವಿಭಾಗದ ಮುಖ್ಯಸ್ಥರಾದ ಡಾ. ಹೆಚ್. ರಾಜೇಶ್ವರಿ ಅವರೊಂದಿಗೆ ಸಂದರ್ಶನ, ಸಂದರ್ಶಕರು:ಲಕ್ಷ್ಮೀನಾರಾಯಣ .ಎಸ್., ನಿರ್ಮಾಣ : ಎನ್.ಕೇಶವಮೂರ್ತಿ, 8.30 ರೂಪಕ–ಇರುವುದೊಂದೇ ಭೂಮಿ, ರಚನೆ–ಸಿ. ಎಸ್. ಪೂರ್ಣಿಮಾ, ನಿರ್ಮಾಣ –ಕೀರ್ತನಾ .ವಿ, 9.00 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎಂ. ಆರ್. ಸುಧಾ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹೊಂಗಿರಣ ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ: ಆರ್.ಲೋಕೇಶ್ವರಿ . ಬಿ. ಜಿ. ಕವಿತಾ ಹಾಗೂ ಲಕ್ಷ್ಮೀನಾರಾಯಣ

ಮಧ್ಯಾಹ್ನ: 12.05 ವನಿತಾ ವಿಹಾರ One Side One Nation ಅಭಿಯಾನದಲ್ಲಿ ಕಾಶ್ಮೀರದಿಂದ ಕನ್ಯಾಕುಮಾರಿವರೆಗೂ ಸೈಕಲ್ ಯಾನ ಮಾಡಿರುವ ಪೂಜಾ ಹರೀಶ್ ಅವರೊಂದಿಗೆ ಮಾತುಕತೆ. ಪ್ರಸ್ತುತಿ–ಕೀರ್ತನಾ ವಿ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ–ಡಾ. ಬಿ. ಆರ್. ಅಂಬೇಡ್ಕರ್ ಅವರ ಜಯಂತಿ ಸಂದರ್ಭದಲ್ಲಿ ಮಹಿಳಾ ಹೋರಾಟಕ್ಕೆ ಭೀಮಬಲ ಈ ಕುರಿತು ಮಾತನಾಡುತ್ತಾರೆ ಲೇಖಕಿ ಡಾ. ಎಚ್.ಎಸ್. ಅನುಪಮ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಲಕ್ಷ್ಮಿ ಹೆಚ್. ಎಂ., 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಭಾರ್ಗವಿ .ಕೆ – ಹಾಡುಗಾರಿಕೆ, 3.30 ರಾಷ್ಟ್ರೀಯ ಶೈಕ್ಷಣಿಕ ಕಾರ್ಯಕ್ರಮ–ಉಮಂಗ್, 4.00 ಕಥಾಕಾಲಕ್ಷೇಪ–ಲವ–ಕುಶ, ಪ್ರಸ್ತುತಿ–ವಿದ್ವಾನ್ ಆರ್. ಗುರುರಾಜುಲು ನಾಯ್ಡು, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ – ಕಿಸಾನ್ ವಾಣಿ ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ತೋಟಗಾರಿಕಾ ಬೆಳೆಗಳ ಬೇಸಾಯದಲ್ಲಿ ಆಧುನಿಕ ಆವಿಷ್ಕಾರಗಳು ಈ ಕುರಿತು ತೋಟಗಾರಿಕಾ ಇಲಾಖೆಯ ನಿವೃತ್ತ ಅಪರ ನಿರ್ದೇಶಕರಾದ ಡಾ. ಎಸ್.ವಿ.ಹಿತ್ತಲಮನಿ ಅವರೊಂದಿಗೆ ಸಂದರ್ಶನ, ಸಂದರ್ಶಕರು :ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್ ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ–ದಿಗ್ವಿಜಯ್ .ಬಿ, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ ರವೀಂದ್ರ ಕಾಟೋಟಿ–ಹಾರ್ಮೋನಿಯಂ ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ–ವೆಲ್ಲೂರು ರಾಮ ಭದ್ರನ್ ರವರಿಂದ ಮೃದಂಗ ಲಯ ವಿನ್ಯಾಸ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ. ಎ. ಎಸ್. ಶಂಕರನಾರಾಯಣ, 10.30 ಸವಿನೆನಪು

■ **ರಂಗಾಯಣ**: ಚಿಣ್ಣರ ಮೇಳ, ಉದ್ಘಾಟನೆ : ಹಿರಿಯ ಗಾಂಧಿವಾದಿ ಸಂತೋಷ್ ಕೌಲಗಿ, ಅಧ್ಯಕ್ಷತೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು : ಹಿರಿಯ ವೃತ್ತಿ ರಂಗಭೂಮಿ ಕಲಾವಿದ ಶ್ರೀಮತಿ ಜುಲೇಖಾ ಬೇಗಂ, ರಂಗ ಸಮಾಜದ ಸದಸ್ಯ ಹೆಚ್.ಎಸ್. ಸುರೇಶ್‌ಬಾಬು, ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಉಪ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಸ್ಥಳ: ರಂಗಾಯಣದ ವನರಂಗ ಬಯಲು ರಂಗ ಮಂದಿರ, ಸಂಜೆ 5ಕ್ಕೆ.

■ **ಭಗಿನಿ ಸಂಗಿತೋತ್ಸವ–2026** : ವಿದುಷಿ ಸುಮಂತ್ ಮಂಜುನಾಥ್ ಮತ್ತು ವಿದುಷಿ ಮಾಳವಿ ಮಂಜುನಾಥ್ ಅವರಿಂದ ವಯೋಲಿನ್ ವಾದನ, ವಿದ್ವಾನ್ ಜಯಚಂದ್ರರಾವ್–ಮೃದಂಗ, ಪಂಡಿತ್ ರಾಜೇಂದ್ರ ನಾಕೋಡ್–ತಬಲ, ಸ್ಥಳ: ಪದ್ಮಜಾ ಶ್ರೀನಿವಾಸ ಆಡಿಟೋರಿಯಂ, ಬಿಎಸ್‌ಎಸ್ ವಿದ್ಯೋದಯ, ಕೃಷ್ಣಮೂರ್ತಿಪುರಂ, ಸಂಜೆ 6 ರಿಂದ.

■ **ಶ್ರೀಪ್ರಸನ್ನ ಸುಂದರ ರಾಮ ಮಂದಿರ ಸೇವಾ ಸಮಿತಿ ಟ್ರಸ್ಟ್** : ಶ್ರೀ ಪರಾಭವ ನಾಮಸಂವತ್ಸರ 90ನೇ ವರ್ಷದ ಶ್ರೀರಾಮೋತ್ಸವ, ವಿದ್ವಾನ್ ಕೇಶವ ಮೋಹನ್ ಕುಮಾರ್ ಮತ್ತು ತಂಡದವರಿಂದ ಪಿಟೀಲು ವಾದನ, ಸ್ಥಳ: ಶ್ರೀರಾಮಮಂದಿರ, ಜಯನಗರ, ಸಂಜೆ 6 ರಿಂದ.

■ **ಡಾ.ಬಿ.ಆರ್.ಅಂಬೇಡ್ಕರ್ ಅಭಿಮಾನಿಗಳ ನಿವೃತ್ತ ನೌಕರರ ಬಳಗ** : ಡಾ.ಅಂಬೇಡ್ಕರ್ ಜನ್ಮದಿನಾಚರಣೆ, ಉದ್ಘಾಟನೆ: ಶಾಸಕ ದರ್ಶನ್ ಧ್ರುವನಾರಾಯಣ್, ಮುಖ್ಯ ಭಾಷಣ: ಡಾ.ಡಿ.ಆನಂದ್, ಅಧ್ಯಕ್ಷತೆ: ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಸ್ಥಳ: ಕುವೆಂಪುನಗರ ಕಾಂಪ್ಲೆಕ್ಸ್, ಸಂಜೆ 6.30ಕ್ಕೆ.

■ **ಕರ್ನಾಟಕ ಬುದ್ಧ ಧಮ್ಮ ಸಮಿತಿ**: ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ, ಸಮ್ಮುಖ: ಬಿಕ್ಕು ಮನೋರಕ್ಖಿತ ಬಂತೇಜಿ, ಅಧ್ಯಕ್ಷತೆ : ಸಮಿತಿ ಅಧ್ಯಕ್ಷ ಪ್ರೊ. ಡಿ. ನಂಜುಂಡಯ್ಯ, ಸನ್ಮಾನಿತರು: ವಿಧಾನ ಪರಿಷತ್ ಸದಸ್ಯ ಶಿವಕುಮಾರ್, ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಪ್ರಾಸ್ತಾವಿಕ ನುಡಿ : ಸಮಿತಿ ಪ್ರಧಾನ ಕಾರ್ಯದರ್ಶಿ ಆರ್. ಮಹಾದೇವಪ್ಪ, ಸ್ಥಳ: ಸಿದ್ಧಾರ್ಥ ಬುದ್ಧ ವಿಹಾರ, ಸಂಜೆ 6ಕ್ಕೆ

■ **ಶ್ರೀ ಉಮಾಮಹೇಶ್ವರ ನೃತ್ಯ ಕಲಾಕ್ಷೇತ್ರ ಟ್ರಸ್ಟ್** : ಸಂಜೆ 6 ರಿಂದ ನೃತ್ಯ ಸಪ್ತಾಹ ಅಂತಾರಾಷ್ಟ್ರೀಯ ಹಬ್ಬ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸ್ಮರಣಿಕೆ ಬಿಡುಗಡೆ : ಸೋಮಾಂಮೃತಯಾನ, ನಾಟ್ಯಾಚಾರ್ಯ ಟಿ.ಎನ್.ಸೋಮಶೇಖರ್ ಅವರ ಜೀವನ ಪರಿಚಯ ಬಿಡುಗಡೆ ಸೋಮಶೇಖರ್ ಮಂದಗೆರೆ ಅವರಿಂದ, ಉದ್ಘಾಟನೆ : ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರದ ಸ್ಥಾಪಕರಾದ ಡಾ.ವಸುಂಧರಾ ದೊರೆಸ್ವಾಮಿ, ಸಂಜೆ 7ಕ್ಕೆ ವಿದುಷಿ ಶಾರಿಕ ಕೌಶಿಕ್ ಅವರಿಂದ ಕೃಷ್ಣಾನುಭವ ಏಕವ್ಯಕ್ತಿ ನೃತ್ಯ ಪ್ರದರ್ಶನ, ಸ್ಥಳ: ಗಾನಭಾರತಿ ರಮಾಗೋವಿಂದ ಕಲಾವೇದಿಕೆ, ಕುವೆಂಪುನಗರ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಏಪ್ರಿಲ್ 14 ಮಂಗಳವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 353 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಸಂಪುಟ ಪುನರ್ರಚನೆಗೆ ಕೇಳುವ ಸಮಯವಲ್ಲ...!

● ಪ್ರದೇಶ ಕಾಂಗ್ರೆಸ್ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಚ್ಚರಿಕೆ ● ಮಂತ್ರಿ ಸ್ಥಾನ ಕೇಳುವುದು ತಪ್ಪಲ್ಲ; ಹಾದಿ–ಬೀದಿಯಲ್ಲಿ ಹೇಳಿಕೆ ಸಲ್ಲದು

ಬೆಂಗಳೂರು, ಏ.13(ಕೆಎಂಶಿ)– ಸಂಪುಟ ಪುನರ್ ರಚನೆಗೆ ಆಗ್ರಹಿಸಿ ಬಹಿರಂಗ ಹೇಳಿಕೆಗಳನ್ನು ನೀಡುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿರುವ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅದಕ್ಕೆ ಇದು ಸಮಯವಲ್ಲ ಎಂದು ಹೇಳಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರಿಷ್ಠರನ್ನು ಭೇಟಿ ಮಾಡುವುದರಲ್ಲಿ ತಪ್ಪಿಲ್ಲ. ಮಂತ್ರಿ ಸ್ಥಾನ ಕೇಳುವುದಕ್ಕೂ ನಮ್ಮ ಅಭ್ಯಂತರ ಇಲ್ಲ. ಆದರೆ, ಹಾದಿ–ಬೀದಿಯಲ್ಲಿ ಈ ಸಂಬಂಧ ಹೇಳಿಕೆ ನೀಡಿದರೆ ಪಕ್ಷ ಕಠಿಣ ತೀರ್ಮಾನ ಕೈಗೊಳ್ಳುತ್ತದೆ.



ಮಂತ್ರಿ ಸ್ಥಾನಕ್ಕೆ ಒತ್ತಾಯಿಸಿ ದೆಹಲಿಯಲ್ಲಿ ಬಿಡಾರ ಹೂಡಿರುವ ಶಾಸಕರ ಭವಿಷ್ಯ ಪಕ್ಷದಲ್ಲಿದೆಯೇ ಹೊರತು ಮಾಧ್ಯಮದಿಂದಲ್ಲ. ಮಾಧ್ಯಮಗಳಲ್ಲಿ ನಾಯಕರಾಗಲು ಏನೇನೋ ಹೇಳಿಕೆಗಳನ್ನು ನೀಡುತ್ತಿದ್ದಾರೆ. ನಿಮ್ಮ ಭವಿಷ್ಯ ಅಲ್ಲಿಲ್ಲ, ಪಕ್ಷದಲ್ಲಿದೆ ಎಂಬುದನ್ನು ನೆನಪಿನಲ್ಲಿ ಇಟ್ಟುಕೊಳ್ಳಿ. ಕೆಲವು ಶಾಸಕರು ದೆಹಲಿಗೆ ತೆರಳುವುದಕ್ಕೂ ಮುನ್ನ ನನ್ನನ್ನು ಹಾಗೂ ಸಿದ್ದರಾಮಯ್ಯ ಅವರನ್ನೂ ಭೇಟಿ ಮಾಡಿದ್ದಾರೆ. ಅವರಿಗೆ ಮುಖ್ಯಮಂತ್ರಿ ಏನೋ ಹೇಳಿದ್ದಾರೆ.

ಇದು ಸಂಪುಟ ಪುನರ್ ರಚನೆಗೆ ಕೇಳುವ ಸಮಯ ಅಲ್ಲ. ಮೊದಲು ಚುನಾವಣೆ ಮಾಡೋಣ. ಮಂತ್ರಿಗಳಾಗಬಾರದು ಎಂಬುದೇನಿಲ್ಲ. ನಮ್ಮ ನಾಯಕರು ಪಂಚ ರಾಜ್ಯ ಚುನಾವಣೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಇಂತಹ ವೇಳೆ ಮಂತ್ರಿ ಸ್ಥಾನ ಕೇಳಿ ದೆಹಲಿಗೆ ತೆರಳುವುದು ಎಷ್ಟರ ಮಟ್ಟಿಗೆ ಸರಿ ಎಂದರು. ■ 10ನೇ ಪುಟಕ್ಕೆ

ಭಗವಂತನ ಕೃಪೆ ಇದ್ದರೆ ಮತ್ತೆ ವಿಧಾನಸೌಧಕ್ಕೆ ಬರಬಹುದು!

ಕುತೂಹಲ ಮೂಡಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ ಮಾತು

ಬೆಂಗಳೂರು, ಏ.13(ಕೆಎಂಶಿ)– ಜನರ ಆಶೀರ್ವಾದದ ಜೊತೆಗೆ ಭಗವಂತನ ಕೃಪೆ ಇದ್ದರೆ ಮತ್ತೆ ವಿಧಾನಸೌಧಕ್ಕೆ ಬರಬಹುದು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಇಂದಿಲ್ಲಿ ತಿಳಿಸಿದ್ದಾರೆ.



ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಜೊತೆ ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆ ಸಂಬಂಧ ಚರ್ಚಿಸಲು ವಿಧಾನಸೌಧಕ್ಕೆ ಆಗಮಿಸಿದ್ದ ಕುಮಾರಸ್ವಾಮಿ ಸುದ್ದಿಗಾರರೊಂದಿಗೆ ಮಾತನಾಡಿ, ಭಗವಂತನ ಆಶೀರ್ವಾದದಿಂದ ಎರಡು ಬಾರಿ ಆಕಸ್ಮಿಕವಾಗಿ ಮುಖ್ಯಮಂತ್ರಿಯಾಗಿ ಅಧಿಕಾರ ನಡೆಸಿದ್ದೇನೆ. ಮುಂಬರುವ 2028ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜೊತೆಗೂಡಿ ■ 10ನೇ ಪುಟಕ್ಕೆ

ಮೈಸೂರಿನ ನಂಜರಾಜ ಬಹದ್ದೂರ್ ಛತ್ರದ ಆವರಣದಲ್ಲಿ 'ಪಾರ್ಕಿಂಗ್ ಲಾಟ್' ನಿರ್ಧಾರ

■ ಅಧ್ಯಯನ ಪ್ರಕ್ರಿಯೆ ಆರಂಭ, ವಾರದೊಳಗೆ ಜಿಲ್ಲಾಡಳಿತಕ್ಕೆ ವರದಿ ■ ಎರಡೂವರೆ ಎಕರೆಯಲ್ಲಿ ವಾಹನ ನಿಲುಗಡೆಗೆ ಅವಕಾಶ

ಮೈಸೂರು, ಏ.13(ಬಿಎಲ್‌ಯು)– ಮೈಸೂರಿನ ವಿನೋಬಾ ರಸ್ತೆಯ ನಂಜರಾಜ ಬಹದ್ದೂರ್ ಛತ್ರದ ಹಿಂಭಾಗದ ಎರಡೂವರೆ ಎಕರೆ ಪ್ರದೇಶದಲ್ಲಿ 'ಪಾರ್ಕಿಂಗ್ ಲಾಟ್' ನಿರ್ಮಾಣ ಮಾಡಲು ಮುಜರಾಯಿ ಇಲಾಖೆ ನಿರ್ಧರಿಸಿದ್ದು, ಈ ಸಂಬಂಧ ಜಾಗ ಗುರುತಿಸುವಿಕೆ, ವಾಹನಗಳ ನಿಲುಗಡೆ ಸಾಮರ್ಥ್ಯ, ಟೆಂಡರ್ ಮೊತ್ತ ನಿಗದಿ ಸೇರಿದಂತೆ ಇತರೆ ವಿಚಾರಗಳ ಬಗ್ಗೆ ಅಧ್ಯಯನ ಪ್ರಕ್ರಿಯೆ ಆರಂಭವಾಗಿದೆ.



ಪಾರ್ಕಿಂಗ್ ಲಾಟ್ ನಿರ್ಮಾಣ ಮಾಡಲು ಉದ್ದೇಶಿಸಿರುವ ಮೈಸೂರಿನ ವಿನೋಬಾ ರಸ್ತೆಯ ನಂಜರಾಜ ಬಹದ್ದೂರ್ ಛತ್ರದ ಹಿಂಭಾಗದ ಖಾಲಿ ಜಾಗ.

ಮೈಸೂರಿನ ಟೌನ್ ಹಾಲ್‌ನಲ್ಲಿ ನಗರ ಪಾಲಿಕೆಯು ಮಲ್ಟಿ ಸ್ಟೋರ್ ಪಾರ್ಕಿಂಗ್ ಲಾಟ್ ನಿರ್ಮಿಸಿದೆ ಗಾಂಧಿ ವೃತ್ತ, ಅಶೋಕ ರಸ್ತೆ, ಶ್ರೀ ಹರ್ಷ ರಸ್ತೆ ಸೇರಿದಂತೆ ಇತರೆಡೆ ನಿಲುಗಡೆ ಮಾಡುತ್ತಿದ್ದ ವಾಹನಗಳನ್ನು ಇಲ್ಲಿ ನಿಲ್ಲಿಸಲಾಗುತ್ತಿದೆ. ಅರಮನೆಯ ಜಯಮಾರ್ತಾಂಡ ದ್ವಾರ, ದೇವರಾಜ ಮಾರುಕಟ್ಟೆ, ಸಯ್ಯಾಜಿರಾವ್ ರಸ್ತೆ, ದೊಡ್ಡ ಗಡಿಯಾರ ಸೇರಿದಂತೆ ಈ ಭಾಗದ ಇತರೆ ತಾಣಗಳ ವೀಕ್ಷಣೆಗೆ ಬರುವ ಪ್ರವಾಸಿಗರು ಅಲ್ಲಿ ವಾಹನ ನಿಲುಗಡೆ ಮಾಡುತ್ತಿದ್ದಾರೆ.

ಆದರೆ ದೇವರಾಜ ಅರಸ್ ರಸ್ತೆ, ಶಿವರಾಂ ಪೇಟೆ, ಕೃಷ್ಣ ವಿಲಾಸ ರಸ್ತೆ, ಧನ್ವಂತ್ರಿ ರಸ್ತೆ, ವಿನೋಬಾ ರಸ್ತೆಯಲ್ಲಿ ಕಾರು ಹಾಗೂ ದ್ವಿಚಕ್ರ ವಾಹನ ನಿಲುಗಡೆ ಮಾಡಲು ಸ್ಥಳಾವಕಾಶವಿಲ್ಲ. ದೇವರಾಜ ಅರಸ್ ರಸ್ತೆಯ ಅಂಗಡಿ ಮಾಲೀಕರು ಕಾರು, ದ್ವಿಚಕ್ರ ವಾಹನಗಳನ್ನು ನಿಲ್ಲಿಸುತ್ತಿದ್ದಾರೆ. ಬೆಳಗ್ಗೆ ಬಂದು ನಿಂತರೆ ರಾತ್ರಿ ತನಕ ಆ ವಾಹನಗಳು ಕದಲುವುದಿಲ್ಲ. ಇದರಿಂದ ಈ ಸ್ಥಳಗಳಲ್ಲಿ ವಾಹನ ನಿಲುಗಡೆ ಮಾಡಲು ■ 10ನೇ ಪುಟಕ್ಕೆ

ಮುಜರಾಯಿ ಇಲಾಖೆಗೆ ಮತ್ತಷ್ಟು ಆದಾಯ

ಮೈಸೂರು: ಜಿಲ್ಲಾಧಿಕಾರಿಗಳು ಸೂಚನೆ ನೀಡಿದಂತೆ ಅಧ್ಯಯನ ಪ್ರಕ್ರಿಯೆ ಆರಂಭಿಸಲಾಗಿದ್ದು, ಈ ವಾರದಲ್ಲಿ ವರದಿ ನೀಡಲಾಗುವುದು. ಟೆಂಡರ್ ಮೊತ್ತವನ್ನು ಆಧರಿಸಿ ಸ್ಥಳೀಯ ಪತ್ರಿಕೆಗಳಲ್ಲಿ ಜಾಹೀರಾತು ನೀಡಿ ಟೆಂಡರ್ ನೀಡಬೇಕೇ ಅಥವಾ ಇ–ಪ್ರಕ್ಯೂರ್‌ಮೆಂಟ್‌ನಲ್ಲಿ ಟೆಂಡರ್ ನೀಡಬೇಕೇ ಎಂದು ತೀರ್ಮಾನ ಮಾಡಲಾಗುವುದು ಎಂದು ನಂಜರಾಜ ಬಹದ್ದೂರ್ ಛತ್ರದ ಎಗ್ಸಿಕ್ಯೂಟಿವ್ ಆಫೀಸರ್ ರಘು ತಿಳಿಸಿದ್ದಾರೆ.

ಟೆಂಡರ್‌ನಲ್ಲಿ ಯಾರು ಹೆಚ್ಚು ಮೊತ್ತ ನಮೂದು ಮಾಡಿರುತ್ತಾರೊ ಅವರಿಗೆ ಟೆಂಡರ್ ನೀಡಲಾಗುವುದು.

ಮುಜರಾಯಿ ಇಲಾಖೆಗೆ ಸೇರಿರುವ ಈ ಜಾಗ ಸದ್ಯ ಖಾಲಿ ಬಿದ್ದಿದೆ. ಪ್ರಸ್ತುತ ಛತ್ರವನ್ನು ಬುಕ್ ಸ್ಟಾಲ್, ಎಕ್ಸಿಬಿಷನ್ ಸೇರಿದಂತೆ ಇತರೆ ವ್ಯಾಪಾರ–ವಹಿವಾಟಿಗಾಗಿ ಬಾಡಿಗೆಗೆ ನೀಡಲಾಗುತ್ತಿದೆ. ಈಗ ಖಾಲಿ ಇರುವ ಜಾಗದಲ್ಲಿ ಪಾರ್ಕಿಂಗ್ ಲಾಟ್ ಮಾಡಿ ಬಾಡಿಗೆಗೆ ನೀಡಿದರೆ ಮುಜರಾಯಿ ಇಲಾಖೆಗೆ ಮತ್ತಷ್ಟು ಆದಾಯ ಬರುತ್ತದೆ, ಜೊತೆಗೆ ನಗರದ ಹೃದಯ ಭಾಗದ ವಾಹನ ನಿಲುಗಡೆ ಸಮಸ್ಯೆ ನಿವಾರಣೆ ಮಾಡಬಹುದಾಗಿದೆ.

ನಂಜರಾಜ ಬಹದ್ದೂರ್ ಛತ್ರ 8 ಎಕರೆ ವ್ಯಾಪ್ತಿ ಪ್ರದೇಶದಲ್ಲಿದೆ. ಈಗ ಖಾಲಿ ಇರುವ ಜಾಗದಲ್ಲಿ ಪಾರ್ಕಿಂಗ್ ಲಾಟ್ ನಿರ್ಮಿಸಿದರೆ ವಾಹನಗಳ ಪಾರ್ಕಿಂಗ್ ಸಮಸ್ಯೆ ನಿವಾರಣೆಯಾಗಲಿದೆ. ಈಗಾಗಲೇ ಜಿಲ್ಲಾಡಳಿತಕ್ಕೆ ವರದಿ ನೀಡಬೇಕಿತ್ತು. ಆದರೆ ಮೊದಲ ಬಾರಿಗೆ ಈ ಯೋಜನೆ ಕೈಗೊಂಡಿದ್ದರಿಂದ ವಿಳಂಬವಾಗಿದೆ. ಎಲ್ಲಾ ವಿಚಾರಗಳನ್ನು ಪಕ್ಕಾ ಅಧ್ಯಯನ ಮಾಡಿ ವರದಿ ನೀಡುತ್ತೇವೆ ಎಂದು ಅವರು ತಿಳಿಸಿದ್ದಾರೆ.

ಮಂಡ್ಯದಲ್ಲಿ ಕೈಗಾರಿಕಾ ಪಾರ್ಕ್ ಸ್ಥಾಪನೆಗೆ 500 ಎಕರೆ ಸೂಕ್ತ ಭೂಮಿ ಕಲ್ಪಿಸಲು ಸೂಚನೆ

● ಕೇಂದ್ರ ಸಚಿವ ಕುಮಾರಸ್ವಾಮಿ, ರಾಜ್ಯದ ಸಚಿವ ಎಂ.ಬಿ. ಪಾಟೀಲ್ ನೇತೃತ್ವದ ಸಭೆಯಲ್ಲಿ ನಿರ್ಣಯ
● ಮಂಡ್ಯದಲ್ಲಿ ಎಆರ್‌ಎಐ ಕೇಂದ್ರ ಸ್ಥಾಪನೆಗೆ 100 ಎಕರೆಗೆ ಪರ್ಯಾಯವಾಗಿ ಈ ನಿರ್ಧಾರ

ಬೆಂಗಳೂರು, ಏ.13(ಕೆಎಂಶಿ)–ಮಂಡ್ಯ ಜಿಲ್ಲೆಯಲ್ಲಿ ಎಆರ್‌ಎಐ(ಆಟೋಮೋಟಿವ್ ರೀಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ) ಕೇಂದ್ರ ಸ್ಥಾಪನೆಗೆ ಆಸಕ್ತಿ ತೋರಿದ್ದು, ನಿಗದಿಪಡಿಸಿರುವ 100 ಎಕರೆಗಿಂತ ಅಧಿಕ ಕನಿಷ್ಠ 500 ಎಕರೆಯಲ್ಲಿ ಕೈಗಾರಿಕಾಭಿವೃದ್ಧಿ ಪಾರ್ಕ್ ಸ್ಥಾಪನೆಗೆ ಸೂಕ್ತ ಸ್ಥಳ ಹುಡುಕಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ರಾಜ್ಯದ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹಾಗೂ ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ವಿಧಾನ ಸೌಧದ ಸಮಿತಿ ಸಭಾಂಗಣದಲ್ಲಿ ಅಧಿಕಾರಿಗಳ ಜೊತೆ ವಿಸ್ತೃತ ಮಾತುಕತೆ ನಡೆಸಿದ ನಂತರ ಈ ಸೂಚನೆ ನೀಡಲಾಯಿತು.



ಬೆಂಗಳೂರಿನ ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಮಾತನಾಡಿದರು. ಈ ವೇಳೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಉಪಸ್ಥಿತರಿದ್ದರು.

100 ಎಕರೆಯಲ್ಲಿ ಎಆರ್‌ಎಐ ಕೇಂದ್ರ ಸ್ಥಾಪಿಸುವ ಬದಲು ಆಟೋಮೊಬೈಲ್ ಕ್ಷೇತ್ರದ ಅಭಿವೃದ್ಧಿಗೆ ಕನಿಷ್ಠ 500 ಎಕರೆಯಲ್ಲಿ ಕೇಂದ್ರ ಸರ್ಕಾರವನ್ನೂ ಒಳಗೊಂಡು ಕೈಗಾರಿಕಾ ■ 10ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ವಿದ್ಯಾರ್ಥಿ : ಸರ್, ಈ ಪುಸ್ತಕದಲ್ಲಿ ಇಷ್ಟೊಂದು ಜನರ ಹೆಸರು ಇದೆಯಲ್ಲ. ನಾನು ಹೇಗೇ ನೆನಪಿಟ್ಟುಕೊಳ್ಳಲಿ?

ಶಿಕ್ಷಕ : ಅದು ಪಠ್ಯ ಪುಸ್ತಕ ಅಲ್ಲ. ಟೆಲಿಫೋನ್ ಡೈರೆಕ್ಟರಿ ಕಣೋ ಮೂರ್ಖ

ಮೈಸೂರು ಮಿತ್ರ
ಮಂಗಳವಾರ, ಏಪ್ರಿಲ್ 14, 2026
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಸಮಯ ಯಾರಿಗಾಗಿ ಕಾಯುವುದಿಲ್ಲ. ಆದರೆ ಸಮಯವನ್ನು ಸರಿಯಾಗಿ ಬಳಸಿದವನು ಗೆಲ್ಲುತ್ತಾನೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತಾಯೀನೇ ತಿಂದೋಳು, ಅತ್ತೇನ ಬಿಟ್ಟಾಳೆಯೇ...!?

ನಿಮ್ಮ ಪತ್ರಗಳು

ಅಂಬೇಡ್ಕರ್ ಆಶಯಗಳನ್ನು ಬದುಕಿನುದ್ದಕ್ಕೂ ಅನುಸರಿಸುವ ದೃಢ ಸಂಕಲ್ಪ ಮಾಡೋಣ

ಮಾನ್ಯರೇ,



ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಕೇವಲ ವ್ಯಕ್ತಿಯಾಗಿ ಆರಾಧಿಸುವುದಕ್ಕಿಂತ ಅವರು ಕಟ್ಟಿಕೊಟ್ಟ ಸಮಾನತೆ ಮತ್ತು ಜ್ಞಾನದ ಹಾದಿಯಲ್ಲಿ ನಡೆಯುವುದು ಇಂದಿನ ತುರ್ತು ಅಗತ್ಯವಾಗಿದೆ. ಅವರ ತತ್ತ್ವಗಳನ್ನು ಕೇವಲ ಗೋಡೆಗಳ ಮೇಲಿನ ಭಾವಚಿತ್ರಗಳಿಗೆ ಸೀಮಿತಗೊಳಿಸದೆ, ನಮ್ಮ ಬದುಕಿನ ಶಿಸ್ತು ಮತ್ತು ಆಲೋಚನೆಗಳಲ್ಲಿ ಅಳವಡಿಸಿಕೊಳ್ಳೋಣ.

ಸಂವಿಧಾನಶಿಲ್ಪಿಯ ಆಶಯದಂತೆ ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಶೋಷಣೆಯಿಲ್ಲದ ಸಮಾಜ ನಿರ್ಮಿಸುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ. 'ವ್ಯಕ್ತಿಪೂಜೆ ಗಿಂತ ವಿಚಾರಪೂಜೆಯೇ ಶ್ರೇಷ್ಠ' ಎಂಬ ಅವರ ಮಾತಿನಂತೆ, ಬಾಬಾ ಸಾಹೇಬರನ್ನು ಕೇವಲ ಜಯಂತಿಗಳಿಗೆ ಸೀಮಿತ ಮಾಡದೆ ಅವರ ವೈಚಾರಿಕತೆಯನ್ನು ನಮ್ಮ ನಿತ್ಯದ ಬದುಕಿನಲ್ಲಿ ಉಸಿರಾಡೋಣ. ಏಪ್ರಿಲ್ 14 ಬಾಬಾ ಸಾಹೇಬರ ಜನ್ಮದಿನ ದಂದು ಅವರ ಆಶಯಗಳನ್ನು ಬದುಕಿನುದ್ದಕ್ಕೂ ಅನುಸರಿಸುವ ದೃಢ ಸಂಕಲ್ಪ ಮಾಡೋಣ. **–ಬಿ.ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.**

ಭಾರತೀಯ ಚಿತ್ರರಂಗದ ಹೊನ್ನಿನ ಕಲಶವಾಗಿದ್ದ ಆಶಾ ಭೋಸ್ಲೆ

ಮಾನ್ಯರೆ,



ಖ್ಯಾತ ಬಹುಭಾಷಾ ಹಿನ್ನಲೆ ಗಾಯಕಿ, ಗಾನ ಕೋಗಿಲೆ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತೆ ಆಶಾ ಭೋಸ್ಲೆ ತಮ್ಮ 92ನೇ ವಯಸ್ಸಿನಲ್ಲಿ ಬಹು ಅಂಗಾಂಗ ವೈಫಲ್ಯದಿಂದ ಮುಂಬಯಿನ ಬ್ರೀಚ್ ಕ್ಯಾಂಡಿ ಆಸ್ಪತ್ರೆಯಲ್ಲಿ ನಿಧನ ಹೊಂದಿರುವುದು ಭಾರತೀಯ ಚಿತ್ರರಂಗಕ್ಕೆ ಹಾಗೂ ವಿಶೇಷವಾಗಿ ಭಾರತೀಯ ಸಂಗೀತ ಕ್ಷೇತ್ರಕ್ಕೆ ಉಂಟಾದ ಅಪಾರ ನಷ್ಟವಾಗಿದೆ. ತಮ್ಮ ಜೀವಿತ ಕಾಲದಲ್ಲೇ ದಂತ ಕಥೆಯಾದ ಆಶಾ, ಅತ್ಯಂತ ಕಿರಿಯ ವಯಸ್ಸಿನಲ್ಲೇ ಅಂದರೆ 10 ವರ್ಷದವರಿರುವಾಗಲೇ ತಮ್ಮ ಗಾಯನ ಯಾನ ಆರಂಭಿಸಿ, ಕನ್ನಡ ಸೇರಿದಂತೆ ವಿವಿಧ ಭಾಷೆಗಳ ಸುಮಾರು 12 ಸಾವಿರಕ್ಕಿಂತ ಅಧಿಕ ಹಾಡುಗಳಿಗೆ ಮಧುರ ದನಿಯಾದದ್ದು ಈಗ ಗತ ಇತಿಹಾಸ.


ಪಾಪ್, ಗಜಲ್ ಮತ್ತು ಶಾಸ್ತ್ರೀಯ ಸಂಗೀತದಲ್ಲಿ ಹೆಚ್ಚಿನ ಪ್ರಾವೀಣ್ಯತೆ ಗಳಿಸಿದ್ದ ಆಶಾ, ತಮ್ಮ ಹಿರಿಯ ಸಹೋದರಿ ಲತಾ ಮಂಗೇಷ್ಕರ್ ಅವರ ರೀತಿಯಲ್ಲೇ ಇಡೀ ದೇಶಾದ್ಯಂತ ಹಾಗೂ ವಿದೇಶಗಳಲ್ಲಿ ಕೂಡ ತಮ್ಮ ಗಾನಾಮೃತದಿಂದ ಕೋಟ್ಯಾಂತರ ಅಭಿಮಾನಿಗಳ ಹೃದಯ ಗೆದ್ದಿದ್ದರು. ದುರದೃಷ್ಟವಶಾತ್, ಆಶಾ ಭೋಸ್ಲೇ ತಮ್ಮ ಹಿರಿಯ ಸಹೋದರಿ ಲತಾ ಮಂಗೇಷ್ಕರ್ ಅವರಿಗೆ ಪ್ರತಿಸ್ಪರ್ಧಿಯಾಗಿದ್ದರಿಂದ, ಸಹೋದರಿಯರ ನಡುವೆ ಮಧುರ ಬಾಂಧವ್ಯ ಇರಲಿಲ್ಲವೆಂದು ಹೇಳಲಾಗುತ್ತದೆ.

ಮೀನಾ ಕುಮಾರಿ, ಮಧುಬಾಲಾ, ಕಾಜೋಲ್, ಊರ್ಮಿಳಾ ಮಾತೋಂಡ್ಕರ್, ಪದ್ಮಿನಿ, ವೈಜಯಂತಿಮಾಲಾ ಸೇರಿದಂತೆ ಅಂದಿನ ಕಾಲದ ಪ್ರಮುಖ ನಾಯಕಿ ನಟಿಯರಿಗೆ ಹಿನ್ನಲೆ ಧ್ವನಿ ನೀಡಿದ್ದಾರೆ. ಇವರ ಸಾಧನೆಯನ್ನು ಗಮನಿಸಿದ ಕೇಂದ್ರ ಸರ್ಕಾರ, ದೇಶದ ಎರಡನೆಯ ಅತ್ಯುಚ್ಚ ನಾಗರಿಕ ಪ್ರಶಸ್ತಿಯಾದ 'ಪದ್ಮ ವಿಭೂಷಣ' ಪ್ರಶಸ್ತಿ ನೀಡಿ ಗೌರವಿಸಿತ್ತು. 18 ಬಾರಿ ಮಹಾರಾಷ್ಟ್ರ ರಾಜ್ಯ ಸರ್ಕಾರದಿಂದ ಉತ್ತಮ ಹಿನ್ನಲೆ ಗಾಯಕಿ ಪ್ರಶಸ್ತಿ ಪಡೆದ ಆಶಾ, ಎರಡು ಬಾರಿ ರಾಷ್ಟ್ರೀಯ ಪ್ರಶಸ್ತಿ ಪಡೆದರು.

ಇವುಗಳ ಜೊತೆಗೆ 9 ಬಾರಿ ಫಿಲಂ ಫೇರ್ ಪ್ರಶಸ್ತಿ ಪಡೆದರು. ಎಲ್ಲಕ್ಕಿಂತ ಮಿಗಿಲಾಗಿ ಇವರಿಗೆ ಅತ್ಯಂತ ಪ್ರತಿಷ್ಠಿತ ಪ್ರಶಸ್ತಿಯಾದ 'ದಾದಾ ಸಾಹೇಬ್ ಫಾಲ್ಕೆ' ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಒಂದು ಅರ್ಥದಲ್ಲಿ ಪ್ರಶಸ್ತಿ ಮೀರಿ ನಿಂತ ಗಾಯಕಿಯಾಗಿದ್ದ ಆಶಾ, ಭಾರತದ ಕೀರ್ತಿ ಪತಾಕೆಯನ್ನು ಮುಗಿಲೆತ್ತರಕ್ಕೇರಿಸಿದ ಅಪೂರ್ವ ಮತ್ತು ಮಹೋನ್ನತ ಗಾಯಕಿಯಾಗಿದ್ದರು. ಇಂತಹ ಅಪೂರ್ವ ಹಾಗೂ ಅದ್ವಿತೀಯ ಗಾಯಕಿ ಆಶಾ ಭೋಸ್ಲೆ ಇಡೀ ಭಾರತೀಯ ಚಿತ್ರರಂಗದ ಹೊನ್ನಿನ ಕಲಶವಾಗಿದ್ದರು. ಅವರ ಆತ್ಮಕ್ಕೆ ಶಾಂತಿ ಕೋರೋಣ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

ಮಳೆ ಬಂದರೆ ಈ ಮಾರ್ಗ ಮೃತ್ಯುಕೂಪ



ಮಾನ್ಯರೆ,

ಮೈಸೂರಿನ ರಿಂಗ್ ರಸ್ತೆಯ ಬ್ಯಾಂಕ್ ಕಾಲೋನಿಯ ತಿರುವಿನಲ್ಲಿ ಮಳೆಹರಿವಾಗಿ ಮಾಡಿದ ತೆರೆದ ಭಾಗ ತೀವ್ರ ಅಪಾಯಕಾರಿಯಾಗಿದೆ. ಇತ್ತೀಚೆಗಷ್ಟೇ ಕುಟುಂಬವಿದ್ದ ಕಾರು ಅಪಾಯಕ್ಕೆ ಸಿಲುಕಿತ್ತು. ಮಾನವೀಯ ಸಾರ್ವಜನಿಕರಿಂದ ಪಾರಾದರು. ಇದೇ ಮಾನವೀಯ ದೃಷ್ಟಿಯಿಂದ ಅಧಿಕಾರಿಗಳು ಇಂಥಾ ಅಪಾಯಕಾರಿ ಸ್ಥಳಗಳನ್ನು ಮಳೆಗಾಲದ ಮೊದಲೇ ಗುರುತಿಸಿ ಸರಿಪಡಿಸಲಿ. ಇಲ್ಲದಿದ್ದಲ್ಲಿ ಕಾನೂನು ನಿಮ್ಮನ್ನೇನೂ ಮಾಡದಿದ್ದರೂ ಸಾರ್ವಜನಿಕರ ಆಕ್ರೋಶ ಏನಾದರೂ ಮಾಡೀತು.

–ಅನಿಲ್ ಕುಮಾರ್ ನಾಡಿಗೇರ್, ಟಿ.ಕೆ. ಬಡಾವಣೆ, ಮೈಸೂರು

ಮಾನಸಿ ಬಡಾವಣೆಗೆ ನೀರಿನ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಮೈಸೂರಿನ ಸಾತಗಳ್ಳಿ ರಿಂಗ್ ರಸ್ತೆ ಬಳಿಯಿರುವ ಮಾನಸೀನಗರ ಬಡಾವಣೆಯಲ್ಲಿ 8 ದಿನಗಳಿಂದ ಕುಡಿಯುವ ನೀರಿನ ಪೂರೈಕೆ ಇಲ್ಲದೆ ಇಲ್ಲಿನ ನಿವಾಸಿಗಳು ಬವಣೆ ಪಡುವಂತಾಗಿದೆ. ತಕ್ಷಣ ಸಂಬಂಧಪಟ್ಟ ಅಧಿಕಾರಿಗಳು ನೀರಿನ ಸೌಲಭ್ಯ ಕಲ್ಪಿಸಿ ಇಲ್ಲಿನ ನಿವಾಸಿಗಳು ನೆಮ್ಮದಿಯಿಂದ ಜೀವಿಸಲು ಅನುವು ಮಾಡಿಕೊಡಬೇಕೆಂದು ಈ ಮೂಲಕ ಮನವಿ.

– ಎನ್.ಆರ್. ವಿಜಯಕುಮಾರ್, ಮಾನಸೀನಗರ, ಮೈಸೂರು.

ಅಂಬೇಡ್ಕರ್ ಎಂಬ ಜ್ಞಾನ ಸಂಪತ್ತು...!



ಕೇವಲ ಹುಟ್ಟಿದ ಜಾತಿಯ ಕಾರಣಕ್ಕೆ ಅದೆಷ್ಟೋ ಸಹಿಸಲಾಗದ ಅವಮಾನಗಳನ್ನು, ಅಪಮಾನಗಳನ್ನು ಅನುಭವಿಸುತ್ತ, ನೂರಾರು ನೋವುಗಳನ್ನು ಬಾಲ್ಯದಿಂದಲೂ ನುಂಗುತ್ತಾ ಅಸ್ಪೃಶ್ಯತೆಯ ಬೆಂಕಿಯಲ್ಲಿ ಬೇಯುತ್ತಲೇ ಬೆಳೆದ ಅಂಬೇಡ್ಕರ್ ಸರಿಯಾಗಿ ತಿಳಿವು ಬರುವ ಹೊತ್ತಿಗೆ ಅಸ್ಪೃಶ್ಯತೆಯ ಕಹಿಯನ್ನು ಉಂಡು ಉಂಡು ಸಾಕಾಗಿ ಕೊನೆಗೊಮ್ಮೆ ಅಸ್ಪೃಶ್ಯತೆಯ ಹುಟ್ಟಡಗಿಸುವ ಭೀಮಸಂಕಲ್ಪ ಮಾಡಿದ. ತನ್ನಂತೆಯೇ ಅಸ್ಪೃಶ್ಯತೆಯ ಕರಿನೆರಳಲ್ಲಿ ನಲುಗುತ್ತಿರುವ ದೀನದಲಿತರ ಉದ್ಧಾರಕ್ಕಾಗಿ ತನ್ನ ಇಡೀ ಬದುಕನ್ನು ಮೀಸಲಿಡುವ ಭೀಮಪ್ರತಿಜ್ಞೆಗೈದ. ಹೀಗೆ ಅಸ್ಪೃಶ್ಯತೆಯ ವಿರುದ್ಧ ಸಮರ ಸಾರಿ ಭೀಮಪ್ರತಿಜ್ಞೆಗೈದ ಆ ಹುಡುಗ ಅಂಬೇಡ್ಕರ್ ಇಂದು ಭಾರತೀಯರ ಕಣ್ಣಲ್ಲಿ ಮಾನವತಾವಾದಿಯಾಗಿ ಕಂಗೊಳಿಸುತ್ತಿರುವ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್.ಅಂಬೇಡ್ಕರ್. ಅವಮಾನದಿಂದ ಬೆಂದ ಅಂಬೇಡ್ಕರ್ ಎಷ್ಟು ಪ್ರಖರತೆಯಿಂದ ಮೇಲೆದ್ದರೆಂದರೆ ತನಗೆ ನೋವಿತ್ತ ವ್ಯವಸ್ಥೆಯ ಬುಡವನ್ನೇ ಸರಿಪಡಿಸುವಷ್ಟು!

ಭೀಮರಾವ್ ರಾಂಜೀ ಅಂಬೇಡ್ಕರ್ ಸ್ವತಂತ್ರ ಭಾರತದ ರೂಪೀಕರಣದಲ್ಲಿ ಎದ್ದುಕಂಡ ಹೆಸರು. ಈ ದೇಶದ ಸಾಂಪ್ರದಾಯಿಕ ಮಾದರಿಗಳನ್ನು ಒಡೆದು ಮಾನವೀಯತೆಗಾಗಿ ಭುಗಿಲೆದ್ದ ಮನಸ್ಸು. ಅವರು ಒಂದು ಮಾತು ಹೇಳಿದ್ದರು: 'ನಾನೊಂದು ಕಲ್ಲು ಬಂಡೆಯಂತೆ, ಕರಗುವುದಿಲ್ಲ, ಆದರೆ ನದಿಯ ದಿಕ್ಕನ್ನೇ ಬದಲಿಸುವವನು' (I am like a rock which does not melt but turns the course of the river). ಮೊತ್ತಮೊದಲ ಕಾಂಗ್ರೆಸ್ ಸರ್ಕಾರದಲ್ಲಿ ಮಂತ್ರಿಯಾಗಿದ್ದೂ ಆ ಪಕ್ಷದ ಸದಸ್ಯರಾಗದೇ ಹಾಗೆ ಉಳಿದುಕೊಂಡದ್ದಕ್ಕೆ ಉತ್ತರರೂಪವಾಗಿ ಆ ಮಾತು ಹೇಳಿದ್ದರು. ಅವರು ಪ್ರವಾಹದಲ್ಲಿ ಒಂದಾದವರಲ್ಲ. ಹರಿಯುವ ನದಿಯ ದಿಕ್ಕನ್ನೇ ಬದಲಿಸಿದವರು. ಅವರಾಡಿದ ಮಾತು ತನ್ನ ಜನರನ್ನು ದೇಶದ ಇತಿಹಾಸದ ಮುಂಚೂಣಿಗೆ ತಂದ ರೀತಿಯನ್ನು ಬಿಂಬಿಸಿದಂತಿತ್ತು.

ಅಂತಹುದೊಂದು ಮಹಾಪ್ರವಾಹ ಭಾರತದ ಇತಿಹಾಸದಲ್ಲಿ 1891ರಿಂದ 1956ರ ನಡುವೆ ನಡೆದುಹೋಗಿದೆ. ಹುಟ್ಟಿನಿಂದ ಹಿಡಿದು ಮರಣದವರೆಗೆ ಅಂಬೇಡ್ಕರ್ ಬದುಕಿದ ಬಗೆ ರೋಚಕ, ವಿಸ್ಮಯಕಾರಿ. ಅವರು ಬದುಕಿದ 65 ವರ್ಷಗಳ ಕಾಲ ಈ ನಾಡಿನಲ್ಲಿ ಎಷ್ಟೋ ಪ್ರವಾಹಗಳಿದ್ದವು. ಆದರೂ ಅಂಬೇಡ್ಕರ್ ಹಿಂದೂವಾದ, ಕಮ್ಯುನಿಷ್ಟ್‌ವಾದ, ಸಮಾಜವಾದ, ಗಾಂಧಿವಾದ ಇತ್ಯಾದಿ ನದಿಗಳಲ್ಲಿ ಕರಗಲಿಲ್ಲ. ತಾನೇ ಸ್ವತಃ ಒಂದು ಮಹಾ ನದಿಯಾದರು.

ಭರತ ಭೂಮಿಯ ಉದ್ದಗಲಕ್ಕೂ ಕಣ್ಣು ಕಾಣದಂತೆ ಆವರಿಸಿದ್ದ ಅಸಮಾನತೆಯ ಕಾರ್ಗತ್ತಲಲ್ಲಿ ಕ್ರಾಂತಿದೀಪದಂತೆ 1891ರ ಏಪ್ರಿಲ್ 14ರಂದು 'ಮಹರ್' ಎಂಬ ದಲಿತ ಜನಾಂಗದಲ್ಲಿ ಅಂಬೇಡ್ಕರ್ ಜನಿಸಿದರು. ಇವರಿಗೆ ಜನ್ಮನೀಡಿದ ಪುಣ್ಯಭೂಮಿ ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಅಂಬವಾಡೆ ಗ್ರಾಮ. ಇವರನ್ನು ಹೆತ್ತ ಭಾಗ್ಯಶಾಲಿಗಳು ತಂದೆ ಸುಭೇದಾರ್ ರಾಮ್‌ಜೀ ಸಕ್ಪಾಲ್, ತಾಯಿ ಶ್ರೀಮತಿ ಭೀಮಾಬಾಯಿ. ಇವರು ಕಬೀರ್ ಪಂಥಕ್ಕೆ ಸೇರಿದವರು. ಜಾತಿ ಧರ್ಮಗಳ ಭೇದಗಳಲ್ಲಿ ಇವರಿಗೆ ನಂಬಿಕೆ ಇರಲಿಲ್ಲ. ಹರಿಭಜನೆ ಮಾಡುವವರೆಲ್ಲ ದೇವರಿಗೆ ಸೇರಿದವರೆಂಬ ಭಾವನೆ ಇವರದು. ಅಂಬೇಡ್ಕರರು ಸತಾರಾ ಪ್ರಾಥಮಿಕ ಶಾಲೆಯಲ್ಲಿದ್ದಾಗಲೇ ಅಸ್ಪೃಶ್ಯತೆಯ ಬಿಸಿ ಕ್ಷಣಕ್ಷಣವೂ ಇವರನ್ನು ಸುಡುತ್ತಲೇ ಇತ್ತು. ಇದೆಲ್ಲ ಏಕೆಂದು ಬಾಲಕ ಅಂಬೇಡ್ಕರರಿಗೆ ಅರ್ಥವಾಗುತ್ತಿರಲಿಲ್ಲವಾದರೂ ಕ್ರಮೇಣ ಇವರ ಬುದ್ಧಿ ಬೆಳೆದಂತೆ ತನಗಾಗುತ್ತಿರುವ ಅಪಮಾನ ಮೇಲ್ಜಾತಿ ಎನಿಸಿಕೊಂಡಿರುವ ಅವಿವೇಕಿಗಳಿಂದ ನಡೆಯುತ್ತಿರುವ ಶೋಷಣೆ, ದಬ್ಬಾಳಿಕೆ ಇವರ ಮನಸ್ಸಿನ ಮೇಲೆ ಆಳವಾಗಿ ಪರಿಣಾಮ ಬೀರಿದ್ದವು. ಇದರ ಪರಿಣಾಮ ಹಿಂದೂ ಧರ್ಮಕ್ಕೆ ಅಂಟಿದ ಜಾತೀಯತೆಯ ವಿರುದ್ಧ ವಿದ್ಯಾರ್ಥಿ ದಿಸೆಯಲ್ಲೇ ಇವರು ಭೀಮಖಡ್ಗವನ್ನು ಮಸೆಯತೊಡಗಿದ್ದರು. ಅಂಬೇಡ್ಕರರಿಗೆ ಸಂಸ್ಕೃತ ಕಲಿಯಬೇಕೆಂಬ ಮಹದಾಸೆಯಿತ್ತು. ಆದರೆ ಇದಕ್ಕೆ ಕೀಳ್ಜಾತಿಯವರು ಇದನ್ನು ಓದಬಾರದೆಂದು ಮೇಲ್ಜಾತಿಯವರು ಅಡ್ಡಿಪಡಿಸಿದರು. ಆದರೆ ಇವರು ಬಗ್ಗಲಿಲ್ಲ ಬದಲಿಗೆ ಹಠತೊಟ್ಟವರಂತೆ ಸಂಸ್ಕೃತ ಕಲಿತು ಅದರಲ್ಲಿ ಸಂಪೂರ್ಣ ಪಾಂಡಿತ್ಯಗಳಿಸಿ ತಾವೇ ಹಲವಾರು ವಿಚಾರಕ್ರಾಂತಿ ಕೃತಿಗಳನ್ನು ರಚಿಸುವುದರ ಮೂಲಕ 'ಆಧುನಿಕ ಮನು'ಎಂಬ ಕೀರ್ತಿಗೆ ಪಾತ್ರರಾದರು. ಇದನ್ನು ಮಾತ್ರ ಯಾರಿಂದಲೂ ತಡೆಯಲು ಸಾಧ್ಯವಾಗಲೇ ಇಲ್ಲ. ಏಕೆಂದರೆ ಹಠವಾದಿ ಅಂಬೇಡ್ಕರರ ಭೀಮಶಕ್ತಿ ಅಂಥಾದ್ದು!.

1907ರಲ್ಲಿ ಮೆಟ್ರಿಕ್ಯೂಲೇಷನ್ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಂಬೇಡ್ಕರರಿಗೆ ಆ ವರ್ಷವೇ ರಮಾಬಾಯಿಯೊಂದಿಗೆ ವಿವಾಹವಾಯಿತು. ಆನಂತರ ಅವರು ಮುಂಬೈನ ಎಲ್ಫಿನ್‌ಸ್ಟನ್ ಕಾಲೇಜಿನಲ್ಲಿ ಇಂಟರ್ ಮೀಡಿಯಟ್ ಮುಗಿಸಿ 1921ರಲ್ಲಿ ಬಿ.ಎ. ಪದವೀಧರರಾದರು. ನಂತರ ಬರೋಡ ಮಹಾರಾಜರ ಸೈನ್ಯದಲ್ಲಿ ಲೆಫ್ಟಿನೆಂಟ್ ಆಗಿ ನೇಮಕಗೊಂಡರು. ಆದರೆ ಜ್ಞಾನದ ಹಸಿವಿನಿಂದ ಇವರು ಓದುವ ಹಠಕ್ಕೆ ಬಿದ್ದರು. ಆಗ ಬರೋಡ ಮಹಾರಾಜರೇ ಇವರ ಬುದ್ಧಿಶಕ್ತಿಗೆ ಮಾರುಹೋಗಿ ವಿದೇಶದಲ್ಲಿ ವ್ಯಾಸಂಗ ಮಾಡಿ ಬಂದ ನಂತರ ತಮ್ಮಲ್ಲೇ ಹತ್ತು ವರ್ಷಗಳ ಕಾಲ ಕೆಲಸ ಮಾಡಬೇಕೆಂಬ ಕರಾರಿನೊಂದಿಗೆ ಉನ್ನತ ವ್ಯಾಸಂಗಕ್ಕೆ ಇವರನ್ನು ಅಮೆರಿಕಕ್ಕೆ ಕಳುಹಿಸಿದರು. ಅಲ್ಲಿ ಎಂ.ಎ. ಪದವಿಯೊಡನೆ ಪಿಹೆಚ್‌ಡಿಯನ್ನು ಗಳಿಸಿ 1917ರ ಆಗಸ್ಟ್ 21ರಂದು ಮತ್ತೆ ಭಾರತಕ್ಕೆ ಮರಳಿದರು. ಇಷ್ಟಾದರೂ ಅವರ ಜ್ಞಾನದಾಹ ಇಂಗಿರಲಿಲ್ಲ. ಹಾಗಾಗಿ ಪುನಃ 1920ರಲ್ಲಿ ಮತ್ತಷ್ಟು ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಲಂಡನಿಗೆ ಹೋದ ಇವರು 1922ರಲ್ಲಿ ಬ್ಯಾರಿಸ್ಟರ್ ಎಂಬ ಪದವಿಯೊಡನೆ ಭಾರತಕ್ಕೆ ವಾಪಸ್ಸಾದರು.

ವಿದೇಶದಲ್ಲಿ ಕಲಿತು ಒಂದು ಸಾಲದು ಅಂತ ಹಲವಾರು ಡಾಕ್ಟರೇಟ್ ಪದವಿಗಳನ್ನು ಗಳಿಸಿ ಅಂಬೇಡ್ಕರ್ ಅವರು ಸ್ವದೇಶಕ್ಕೆ ಬಂದಿದ್ದರೂ ಇಲ್ಲಿ ಮಾತ್ರ ಅದೇ ಅಸ್ಪೃಶ್ಯತೆ ಅವರನ್ನು ಅಪಮಾನಿಸುತ್ತಿತ್ತು. ಆಗ ಅಂಬೇಡ್ಕರರು 'ಮೂಕ ನಾಯಕ' ಎಂಬ ಪತ್ರಿಕೆ ಆರಂಭಿಸಿ ಅದರ ಮುಖೇನ ಅಸ್ಪೃಶ್ಯತೆ ವಿರುದ್ಧ ಜನಜಾಗೃತಿಗೆ ನಿಂತರು. 'ಬಹಿಷ್ಕೃತ ಹಿತಕಾರಿಣಿ' ಸಭಾದಂತಹ ಸಂಘಟನೆಗಳನ್ನು ಕಟ್ಟಿ ಅಸ್ಪೃಶ್ಯತೆ ವಿರುದ್ಧ ಸಮಾನತೆಗಾಗಿ ಬೀದಿಗಿಳಿದು ಹಲವು ತೆರನಾದ ಹೋರಾಟ ಮಾಡುತ್ತಾ ದಲಿತರ ಪಾಲಿಗೆ ಅಕ್ಷರಶಃ ತೋರು ಬೆರಳಾಗಿದ್ದರು. ಇವರ ಚೌಡರ್‌ಕೆರೆ ಚಳವಳಿಯಂತೂ ಭಾರತದ ಇತಿಹಾಸದಲ್ಲಿ ದಾಖಲಿಸುವಂತಾದ್ದು. ಹೀಗೆ ದಲಿತರ ಪರ ಇವರ ಕ್ರಾಂತಿ ಕಹಳೆ ನಿಧಾನವಾಗಿ ದೇಶದೆಲ್ಲೆಡೆ ಮೊಳಗತೊಡ ಗಿತ್ತು. ಅದೇ ಕಾಲಕ್ಕೆ ಎರಡನೇ ಮಹಾಯುದ್ದದ ಕಾಲದಲ್ಲಿ ಬ್ರಿಟಿಷರು ಕೆಲವು ಭಾರತೀಯರನ್ನು ಮಂತ್ರಿಮಂಡಲಕ್ಕೆ ಸೇರಿಸಿಕೊಂಡಾಗ ಅದರಲ್ಲಿ ಪ್ರಥಮ ಪ್ರಾಶಸ್ತ್ಯವೇ ಅಂಬೇಡ್ಕರವರಿಗೆ ದೊರಕಿತ್ತು.

> 1956ರ ಡಿ.6ರಂದು ಇಡೀದೇಶವನ್ನು ಅನಾಥವಾಗಿಸಿ ಕಾಣದ ಊರಿನತ್ತ ಪಯಣಿಸಿದ ಅಂಬೇಡ್ಕರರಿಗೆ ಮರಣೋತ್ತರವಾಗಿ ಭಾರತ ಸರ್ಕಾರವು 1991ರಲ್ಲಿ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿದೆ. ನಿಜಕ್ಕೂ ಅಂಬೇಡ್ಕರ್ ಅವರು ಇಂದಿಗೂ ತಮ್ಮ ಸಾಧನೆಗಳ ಮೂಲಕ ಭಾರತರತ್ನವೇ ಆಗಿ ಪಳಪಳನೆ ಹೊಳೆಯುತ್ತಲೇ ಇದ್ದಾರೆ.

ಹಾಗೆಯೇ ಭಾರತ ಸ್ವಾತಂತ್ರ್ಯಗಳಿಸಿದ ನಂತರ ನೆಹರು ಸರ್ಕಾರದಲ್ಲಿ ಪ್ರಥಮ ಕಾನೂನು ಸಚಿವರಾಗಿದ್ದ ಹೆಗ್ಗಳಿಕೆ ಹೊಂದಿದ್ದ ಅಂಬೇಡ್ಕರರು ಭಾರತ ದೇಶಕ್ಕೆ ಸಶಕ್ತ 'ಸಂವಿಧಾನ' ನೀಡಿದ ಶಿಲ್ಪಿಯಾಗಿದ್ದು, ಇದು ಇಡೀ ವಿಶ್ವಕ್ಕೆ ಮಾದರಿ ಸಂವಿಧಾನವಾಗಿದ್ದು ಇದು ಇವರಿಗೆ ಸಂದ ಮಹಾ ಗೌರವವೇ ಸರಿ. ಅಧಿಕಾರ ಇರಲಿ ಇಲ್ಲದಿರಲಿ ಅಂಬೇಡ್ಕರ್‌ರವರು ಹೆಜ್ಜೆ ಇಟ್ಟಲೆಲ್ಲಾ ಅಸ್ಪೃಶ್ಯತಾ ನಿವಾರಣೆಗಾಗಿಯೇ ಅವರ ಹೆಜ್ಜೆಗಳು ತುಡಿಯುತ್ತಿದ್ದವು. ಅಂತೆಯೇ ದಲಿತರ ಪುರೋಭಿವೃದ್ಧಿಗಾಗಿಯೇ ಅವರ ಜೀವ ಸದಾ ಮಿಡಿಯುತ್ತಿತ್ತು.

ಭಾರತ ದೇಶದಲ್ಲಿ ಅಂಬೇಡ್ಕರ್ ಎಂಬ 'ಕ್ರಾಂತಿ ಪುರುಷ' ಜನಿಸಿದ್ದರಿಂದಲೇ ದೇಶದ ಅರ್ಧ ಭಾಗದಂತಿರುವ ಉತ್ತರ ಪ್ರದೇಶ ಕಾನ್ಷಿರಾಂರಂಥ ದಲಿತ ನಾಯಕನ ಹಿಡಿತಕ್ಕೆ ಸಿಕ್ಕಿದ್ದು. ಮಾಯಾವತಿಯಂತಹ ದಲಿತ ಮಹಿಳೆ ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಲು ಸಾಧ್ಯವಾದದ್ದು. ಅಂಬೇಡ್ಕರ್ ಎಂಬ ಮಹಾನದಿ ಈ ದೇಶದಲ್ಲಿ ಹುಟ್ಟಿ ಹರಿಯದಿದ್ದರೆ ಇದಾವುದೂ ಸಾಧ್ಯವಾಗುತ್ತಿರಲಿಲ್ಲ.


ಅಂಬೇಡ್ಕರರ ಇಡೀ ಜೀವನ ಅಸ್ಪೃಶ್ಯರೆನಿಸಿಕೊಂಡವರಿಗೆ ನ್ಯಾಯವನ್ನೂ, ಸಮಾನತೆಯನ್ನೂ ದೊರಕಿಸಿ ಕೊಡುವುದಕ್ಕೆ ಮುಡಿಪಾಗಿತ್ತು. ಇದರಲ್ಲಿ ಅವರು ಸಾಕಷ್ಟು ಯಶಸ್ಸನ್ನೂ ಸಾಧಿಸಿದ್ದರು. ಆದರೂ ಹಿಂದೂ ಧರ್ಮದ ಅಸಮಾನತೆಯಿಂದ ರೋಸು ಹೋಗಿದ್ದ ಅವರು ಬುದ್ಧನ ಕಾರುಣ್ಯದಲ್ಲಿ ಆಕರ್ಷಿತರಾಗಿ 1956ರ ಅಕ್ಟೋಬರ್ 14ರಂದು ನಾಗಪುರದಲ್ಲಿ ನಡೆದ ಬೃಹತ್ ಸಮಾರಂಭವೊಂದರಲ್ಲಿ ತಮ್ಮ ಪತ್ನಿ ಡಾ.ಶಾರದಾ ಸೇರಿದಂತೆ ತಮ್ಮ ಅಪಾರ ಅಭಿಮಾನಿಗಳೊಡನೆ ಬೌದ್ಧಧರ್ಮಕ್ಕೆ ಸೇರಿದರು.

1956ರ ಡಿಸೆಂಬರ್ 6ರಂದು ಇಡೀದೇಶವನ್ನು ಅನಾಥವಾಗಿಸಿ ಕಾಣದ ಊರಿನತ್ತ ಪಯಣಿಸಿದ ಅಂಬೇಡ್ಕರರಿಗೆ ಮರಣೋತ್ತರವಾಗಿ ಭಾರತ ಸರ್ಕಾರವು 1991ರಲ್ಲಿ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿದೆ. ನಿಜಕ್ಕೂ ಅಂಬೇಡ್ಕರ್ ಅವರು ಇಂದಿಗೂ ಸಹ ತಮ್ಮ ಸಾಧನೆಗಳ ಮೂಲಕ ಭಾರತ ರತ್ನವೇ ಆಗಿ ಪಳಪಳನೆ ಹೊಳೆಯುತ್ತಲೇ ಇದ್ದಾರೆ. Castes in India: Their Mechanism, Genesis and Development, Philosophy of Hinduism, Riddles in Hinduism, Who were the shudras?, The Buddha and his Dhamma ಮುಂತಾದವು ಅಂಬೇಡ್ಕರರ ಮುಖ್ಯ ಕೃತಿಗಳು. ಜಬ್ಬಾರ್ ಪಟೇಲ್ ನಿರ್ದೇಶನದಲ್ಲಿ 'ಡಾ.ಭೀಮ ಸಾಹೇಬ್ ಅಂಬೇಡ್ಕರ್' ಆಂಗ್ಲಚಿತ್ರ ನಿರ್ಮಾಣಗೊಂಡಿದೆ. ಇತಿಹಾಸಕಾರ ಡೇವಿಡ್ ಬ್ಲಂಡೆಲ್ ಅಂಬೇಡ್ಕರ್ ಜೀವನ ಕಥೆ ಆಧರಿಸಿ 'ಅರೈಸಿಂಗ್ ಲೈಟ್' ಎಂಬ ಚಿತ್ರ ನಿರ್ಮಿಸಿದ್ದರು. ರಾಜೇಶ್‌ಕುಮಾರ್ ರಚಿಸಿ, ಅರವಿಂದಗೌರ್ ನಿರ್ದೇಶಿಸಿದ 'ಅಂಬೇಡ್ಕರ್ ಔರ್ ಗಾಂಧಿ' ನಾಟಕ ಹಲವು ಪ್ರದರ್ಶನಗಳನ್ನು ಕಂಡಿದೆ. ಪುಣೆಯ ವೇದ ವಿದ್ವಾಂಸ ಪ್ರಭಾಕರ ಜೋಶಿ ಅಂಬೇಡ್ಕರ್ ಆತ್ಮಕತೆಯನ್ನು 'ಭೀಮ ಯಾನ' ಹೆಸರಿನಲ್ಲಿ ಸಂಸ್ಕೃತದಲ್ಲಿ ರಚಿಸಿದ್ದರು. ಇದು 1577 ಶ್ಲೋಕಗಳನ್ನು ಒಳಗೊಂಡಿದೆ.


ಬನ್ನೂರು ಕೆ.ರಾಜು
ಸಾಹಿತಿ, ಪತ್ರಕರ್ತ
ಮೊ.94815 33167

ತೆವಳುತ್ತಾ ಸಾಗಿರುವ ಮೈಸೂರಿನ ಡಾ.ಅಂಬೇಡ್ಕರ್ ಭವನ ಕಾಮಗಾರಿ

ಉಸ್ತುವಾರಿ ಸಚಿವರು ನೀಡಿರುವ ಗಡುವಿನಲ್ಲೂ ಪೂರ್ಣಗೊಳ್ಳುವುದು ಅನುಮಾನ



ಅದೇಕೋ.... ಕಳೆದ 14 ವರ್ಷಗಳಿಂದ ತೆವಳುತ್ತಾ ಸಾಗುತ್ತಿರುವ ಮೈಸೂರಿನ ಡಾ.ಬಿ.ಅರ್.ಅಂಬೇಡ್ಕರ್ ಭವನ ಕಾಮಗಾರಿ.

ಮೈಸೂರು, ಏ.13(ಎಂಕೆ)– ಮೈಸೂರಿನ ದಿನಾನ್ಸ್ ರಸ್ತೆಯ ಬಳಿ ಹಾಗೂ ದೇವರಾಜ ಪೊಲೀಸ್ ಠಾಣೆ ಸಮೀಪದಲ್ಲಿ ಕಳೆದ 14 ವರ್ಷಗಳಿಂದ ತೆವಳುತ್ತಾ ಸಾಗುತ್ತಿರುವ ಅಂಬೇಡ್ಕರ್ ಭವನ ಈ ವರ್ಷವೂ ಅಲಭ್ಯವಾಗಿದೆ.

ನಗರದ ಹೃದಯ ಭಾಗದಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಭವನ ಈ ವರ್ಷದ ಜಯಂತಿಗಾದರೂ ಅಂಬೇಡ್ಕರ್ ಅಭಿಮಾನಿಗಳಿಗೆ ದೊರೆಯಬಹುದೆಂಬ ನಿರೀಕ್ಷೆ ಹುಸಿಯಾಗಿದ್ದು, ಆಗಸ್ಟ್‌ನೊಳಗೆ ಕಾಮಗಾರಿ ಮುಕ್ತಾಯಗೊಳಿಸಲೇಬೇಕೆಂದು ಗುತ್ತಿಗೆದಾರರಿಗೆ ಡೆಡ್‌ಲೈನ್ ನೀಡಲಾಗಿದೆ.

2012–13ರಲ್ಲಿ ಪ್ರಾರಂಭವಾದ ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿಗೆ ಈಗಾಗಲೇ ಮೊದಲ ಹಂತದಲ್ಲಿ 20.66 ಕೋಟಿ ರೂ. ವೆಚ್ಚವಾಗಿದ್ದು, ಅದರಲ್ಲಿ ಮೈಸೂರು ಅಭಿವೃದ್ಧಿ ಪ್ರಾಧಿಕಾರದಿಂದ 10.56 ಕೋಟಿ ರೂ., ಸಮಾಜ ಕಲ್ಯಾಣ ಇಲಾಖೆಯಿಂದ 6.50 ಕೋಟಿ ರೂ. ನಗರಪಾಲಿಕೆಯಿಂದ 3 ಕೋಟಿ ರೂ. ಹಾಗೂ ಜಿಲ್ಲಾ ಪಂಚಾಯಿತಿಯಿಂದ 50 ಲಕ್ಷ ರೂ. ನೀಡಲಾಗಿತ್ತು.

ನಂತರ ಮೈಸೂರು ಅಭಿವೃದ್ಧಿ ಪ್ರಾಧಿಕಾರದಿಂದ 23.83 ಕೋಟಿ ರೂ. ವೆಚ್ಚದಲ್ಲಿ ವಾಲ್ ಪ್ಯಾನೆಲಿಂಗ್, ಅಕೋಸ್ಟಿಕ್ ಮತ್ತು ಫಾಲ್ಸ್ ಸೀಲಿಂಗ್, ಆವರಣದಲ್ಲಿನ ರಸ್ತೆ ಅಭಿವೃದ್ಧಿ, ಯುಜಿಡಿ ಮತ್ತು ಮಳೆ ನೀರು ಕೊಯ್ಲು ವ್ಯವಸ್ಥೆ, ನೆಲಹಾಸು, ವೇದಿಕೆ, ಒಳಾಂಗಣ ವಿದ್ಯುದ್ದೀಕರಣ, ಹವಾನಿಯಂತ್ರಿತ ವ್ಯವಸ್ಥೆ, ಧ್ವನಿ ವರ್ಧಕ ವ್ಯವಸ್ಥೆ, 1,800 ಜನರಿಗೆ ಆಸನ ವ್ಯವಸ್ಥೆ, 2 ಲಿಫ್ಟ್ ಅಳವಡಿಕೆ ಹಾಗೂ ಶೌಚಾಲಯಗಳ ನಿರ್ಮಾಣ ಸೇರಿದಂತೆ ಎರಡನೇ ಹಂತದ ಕಾಮಗಾರಿಗಳು ನಡೆಯುತ್ತಿದ್ದು ಇನ್ನೂ ಪೂರ್ಣವಾಗಿಲ್ಲ.

2025ರ ಸೆ.20 ರಂದು ಎರಡನೇ ಹಂತದ ಕಾಮಗಾರಿಗೆ ಚಾಲನೆ ನೀಡಿದ್ದ ಜಿಲ್ಲಾ ಉಸ್ತುವಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ನಿಧಾನಗತಿಯಲ್ಲಿ ಸಾಗುತ್ತಿರುವ ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ತಾಕೀತು ಮಾಡಿದ್ದಾರಲ್ಲದೆ ಆಗಸ್ಟ್ 15ರೊಳಗೆ ಪೂರ್ಣಗೊಳಿಸಬೇಕು ಎಂದು ಡೆಡ್‌ಲೈನ್ ಸಹ ನೀಡಿದ್ದಾರೆ.

ನೋಟಿಸ್: ಗುತ್ತಿಗೆದಾರರಿಂದಾದ ವಿಳಂಬದಿಂದಾಗಿ ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿಲ್ಲ. ಕೆಲ ದಿನಗಳ ಹಿಂದೆಯಷ್ಟೆ ಜಿಲ್ಲಾ ಉಸ್ತುವಾರಿ ಸಚಿವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಗುತ್ತಿಗೆದಾರರಿಗೆ ಡೆಡ್‌ಲೈನ್ ನೀಡಿದ್ದಾರೆ. ಅಲ್ಲದೆ ಪ್ರಾಧಿಕಾರದಿಂದಲೂ ಗುತ್ತಿಗೆದಾರರಿಗೆ ನೋಟಿಸ್ ನೀಡಲಾಗಿದೆ ಎಂದು ಮೈಸೂರು ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ಕೆ.ಆರ್.ರಕ್ಷಿತ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಆ.15ರ ಡೆಡ್‌ಲೈನ್ ಸಹ ಅನುಮಾನ...!

> ಕಳೆದ 14 ವರ್ಷಗಳಿಂದ ತೆವಳುತ್ತಾ ಸಾಗುತ್ತಿರುವ ಅಂಬೇಡ್ಕರ್ ಭವನ ನಿರ್ಮಾಣ ಆಗಸ್ಟ್ 15ಕ್ಕೂ ಪೂರ್ಣಗೊಳ್ಳುವುದು ಅನುಮಾನ. ಕಾಮಗಾರಿ ಕುಂಟುತ್ತಾ ಸಾಗಿದೆ. ಒಂದು ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಇಷ್ಟು ವರ್ಷಗಳು ತೆಗೆದುಕೊಂಡರೆ ಬೇರೆ ಅಭಿವೃದ್ಧಿ ಕಾಮಗಾರಿಗಳನ್ನು ತ್ವರಿತವಾಗಿ ಮಾಡುತ್ತಾರೆ ಎಂಬ ನಂಬಿಕೆ ಬರಲು ಸಾಧ್ಯವೇ. ಎರಡನೇ ಹಂತದ ಕಾಮಗಾರಿಗೆ ಅನುದಾನ ನೀಡುವುದರಲ್ಲಾದ ವಿಳಂಬ, ಗುತ್ತಿಗೆದಾರರ ವಿಳಂಬ, ಅಧಿಕಾರಿಗಳ ನಿರ್ಲಕ್ಷ್ಯತೆಯಿಂದಾಗಿ ಈ ವರ್ಷದ ಡಾ.ಅಂಬೇಡ್ಕರ್ ಜಯಂತಿಗೂ ಭವನ ದೊರೆಯದಂತಾಗಿದೆ.
>
> **–ಅಂಬೇಡ್ಕರ್ ಅಭಿಮಾನಿಗಳು.**

ಮಹರ್ಷಿ ವಾಲ್ಮೀಕಿ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಪ್ರೊ.ನಂಜುಂಡಸ್ವಾಮಿ ಆಯ್ಕೆ



ಮೈಸೂರು, ಏ. 13– ಮಹರ್ಷಿ ವಾಲ್ಮೀಕಿ ಸಾಹಿತ್ಯ ಪರಿಷತ್ತಿನ ಆಡಳಿತ ಮಂಡಳಿ ಸಭೆಯಲ್ಲಿ ಪ್ರೊ. ನಂಜುಂಡಸ್ವಾಮಿ ಬಿ ಅವರನ್ನು ಅಧ್ಯಕ್ಷರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಪ್ರೊ.ನಂಜುಂಡಸ್ವಾಮಿ ಅವರು ಪ್ರಸ್ತುತ ಪ್ರಾಧ್ಯಾಪಕರಾಗಿ ಪ್ರಾಂಶುಪಾಲರಾಗಿ ಪಿರಿಯಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿದ್ದು, ಸಾಹಿತ್ಯ ಕ್ಷೇತ್ರದಲ್ಲಿ ಹರದನಹಳ್ಳಿ ದರ್ಶನ, ಮರೆಯದಿರು ನನ್ನ, ಹರದಹಳ್ಳಿ ಸಾಂಸ್ಕೃತಿಕ ಅಧ್ಯಯನ, ಬೆತ್ತ, ಗಾಳ, ಸುಳಿ.(ವಿಮರ್ಶಾ ಸಂಕಲನ) ನೆಲೆ ನಿಲ್ಲದ ಮುಗಿಲು (ಕವನ ಸಂಕಲನ) ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಡಾ ಎಂ ಶಂಕರ ಮಧುವನ ಅವರ ಮಾರ್ಗದರ್ಶನದಲ್ಲಿ ಪಿಎಚ್.ಡಿ. ಪಡೆದ ಮಹಾ ಪ್ರಬಂಧ 'ಚಾಮರಾಜನಗರ ಕವಿ ಚರಿತೆ' ಪ್ರಕಟಿಸಿದ್ದಾರೆ.

ಚಿತ್ರಕಲೆ ಸ್ಪರ್ಧೆ: ದ್ವಿತೀಯ ಸ್ಥಾನ



ಮೈಸೂರು: ಕನ್ನಡ–ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ರಾಜ್ಯಮಟ್ಟದ ಕಾಲಪ್ರತಿಭೋತ್ಸವ ಕಿಶೋರ ಪ್ರತಿಭೆ ವಿಭಾಗದಲ್ಲಿ ರೋಹಿತ್ ಆರ್ಯ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ. ಬಹುಮಾನ ಹತ್ತು ಸಾವಿರ ನಗದು ಬಹುಮಾನ, ಪ್ರಶಸ್ತಿ ಪತ್ರ ಹೊಂದಿದೆ. ಈ ಹಿಂದೆ ಕನ್ನಡ ಪ್ರಭ ದಿನಪತ್ರಿಕೆ ಆಯೋಜಿಸಿದ್ದ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈತ ಶ್ರೀ ಸತ್ಯಸಾಯಿ ಬಾಬಾ ಶಾಲೆಯ ವಿದ್ಯಾರ್ಥಿ ಹಾಗೂ ನವ್ಯ ಮತ್ತು ದೀಪಕ್ ದಂಪತಿ ಪುತ್ರ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಅರಳಕುಪ್ಪೆಯ ಗ್ರಾಮ ದೇವತೆ ಶ್ರೀಬನ್ನಮ್ಮ ದೇವಿ ಹಬ್ಬದ ಪ್ರಯುಕ್ತ

ರಾಜ್ಯ ಮಟ್ಟದ ನಾಡಕುಸ್ತಿ ಪಂದ್ಯಾವಳಿ

ಪಾಂಡವಪುರ, ಏ.13– ತಾಲೂಕಿನ ಅರಳಕುಪ್ಪೆ ಗ್ರಾಮದ ಗ್ರಾಮದೇವತೆ ಶ್ರೀಬನ್ನಮ್ಮ ದೇವಿ ಹಬ್ಬದ ಪ್ರಯುಕ್ತ ಗ್ರಾಮದಲ್ಲಿ 30 ಜೊತೆ ರಾಜ್ಯ ಮಟ್ಟದ ನಾಡಕುಸ್ತಿ ಪಂದ್ಯಾವಳಿ ನಡೆಯಿತು.

ಪೈ.ಗುರುಮೂರ್ತಿ(ಸಿಂಗ್ರೀಗೌಡ)ಕುಸ್ತಿ ಪಂದ್ಯಾವಳಿಗೆ ಅಂತಾರಾಷ್ಟ್ರೀಯ ಕುಸ್ತಿ ತರಬೇತುದಾರ ಡಾ. ಎನ್.ವಿನೋದ್ ಕುಮಾರ್ ಹಾಗೂ ಜೆಡಿಎಸ್ ಯುವ ಮುಖಂಡ ಸಿ.ಪಿ.ಶಿವರಾಜ್ ಚಾಲನೆ ನೀಡಿದರು.

ಪಂದ್ಯಾವಳಿಯಲ್ಲಿ ಮಂಡ್ಯ, ಮೈಸೂರು, ಬೆಂಗಳೂರು, ರಾಮನಗರ, ದಾವಣಗೆರೆ ಸೇರಿದಂತೆ ರಾಜ್ಯದ ವಿವಿಧೆಡೆಗಳಿಂದ 30ಕ್ಕೂ ಅಧಿಕ ಕುಸ್ತಿಪಟುಗಳು ಭಾಗವಹಿಸಿದರು. ವಿಶೇಷವಾಗಿ 2 ಜೊತೆ ಮಹಿಳಾ ಕುಸ್ತಿಪಟುಗಳು ಸಹ ಭಾಗವಹಿಸಿ ಅಮೋಘ ಕುಸ್ತಿ ಮಾಡುವ ಮೂಲಕ ಎಲ್ಲರ ಗಮನ ಸೆಳೆದರು.

ಮಹಿಳಾ ಕುಸ್ತಿ ವಿಭಾಗದಲ್ಲಿ ಮೈಸೂರಿನ ದೀಕ್ಷಿತ ಹಾಗೂ ಬೆಂಗಳೂರಿನ ಮೇಘನ ನಡುವೆ ನಡೆದ ಕಾಳಗದಲ್ಲಿ ಮೈಸೂರಿನ ದೀಕ್ಷಿತ ಗೆಲುವು ಸಾಧಿಸಿದರು. ಮತ್ತೊಂದು ಕುಸ್ತಿ ಪಂದ್ಯದಲ್ಲಿ ಬೆಂಗಳೂರಿನ ಪೈಮಮತ ಕನಕಪುರದ ಶ್ರೀರಕ್ಷಾ ಗೌಡ ಗೆಲುವು ಸಾಧಿಸಿದರು.

ಪುರುಷರ ವಿಭಾಗದಲ್ಲಿ ದಾವಣಗೆರೆಯ ಪೈ.ಹನುಮಂತ ಮತ್ತು ಪುಣೆಯ ಪೈ.ರಾಯಪ್ಪ ನಡುವೆ ನಡೆದ 30 ನಿಮಿಷಗಳ ಕುಸ್ತಿ ಹಣಾಹಣಿ ರೋಚಕವಾಗಿತ್ತು. ಈ ವೇಳೆ ಪ್ರೇಕ್ಷಕರು, ಕುಸ್ತಿ ಪ್ರಿಯರು ಶಿಳ್ಳೆ, ಚಪ್ಪಾಳೆ ಹೊಡೆಯುವ ಮೂಲಕ ಕುಸ್ತಿಪಟುಗಳನ್ನು ಉತ್ತೇಜಿಸಿದರು. ಅಂತಿಮವಾಗಿ ಇಬ್ಬರು ಸಮಬಲ ಸಾಧಿಸಿದರು.



ರಾಜ್ಯಮಟ್ಟದ ನಾಡಕುಸ್ತಿ ಪಂದ್ಯಾವಳಿಗೆ ಯುವ ಮುಖಂಡ ಸಿ.ಪಿ.ಶಿವರಾಜು ಚಾಲನೆ ನೀಡಿದರು.

ಪ್ರಸಿದ್ಧ ಕುಸ್ತಿ ಪಟುಗಳಾದ ಅರಳಕುಪ್ಪೆ ಪೈ.ಅರ್ಜುನ್, ಪೈ.ಗಗನ್, ಪೈ.ಲಕ್ಷಣ್, ಪೈ.ಕಾರ್ತಿಕ್, ಪೈ.ಭೈರವ, ಡಾಮಡಹಳ್ಳಿ ಪೈ.ನಂದನ್ ಚಕ್ರವರ್ತಿ, ಹಾಗನಹಳ್ಳಿ ಪೈ.ದರ್ಶನ್, ಕಟ್ಟೇರಿಯ ಪೈ.ರಾಘು ಸೇರಿದಂತೆ ಹಲವು ಕುಸ್ತಿ ಪಟುಗಳು ಕುಸ್ತಿ ಮಾಡುವ ಮೂಲಕ ಎಲ್ಲರ ಗಮನ ಸೆಳೆದರು. ಕುಸ್ತಿಯಲ್ಲಿ ಭಾಗವಹಿಸಿದ ಎಲ್ಲಾ ಕುಸ್ತಿ ಪಟುಗಳಿಗೂ ನಗದು ಬಹುಮಾನ ವಿತರಿಸಲಾಯಿತು. ವಿಜೇತರಿಗೆ ಆಕರ್ಷಕ ಟ್ರೋಫಿ ವಿತರಣೆ ಮಾಡಲಾಯಿತು.

ಇದೇವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗ್ರಾಮದ ಸಾಧಕರನ್ನು ವಿಶೇಷವಾಗಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಕುಸ್ತಿಪಂದ್ಯಾವಳಿಯ ವ್ಯವಸ್ಥಾಪಕ ಪೈ.ಗುರುಮೂರ್ತಿ(ಸಿಂಗ್ರೀಗೌಡ), ಲಯನ್ ಎನ್.ಕೃಷ್ಣೇಗೌಡ, ಎಸ್.ಮಹದೇವು, ಪೇಡರವಿ, ಹೊಸಹಳ್ಳಿ ಶಿವು, ಪ್ರಶಾಂತ್, ಪೈ.ಗಿರೀಶ್, ಪೈ.ಸಿದ್ದರಾಮು, ಪೈ.ಸುದೀಪ್, ಎನ್.ನಾರಾಯಣಗೌಡ, ಎಸ್.ನಾಗರಾಜು, ಕೆ.ಯೋಗಣ್ಣ, ಲಿಂಗದೇವರಕೊಪ್ಪಲು ಪೈ.ಕುಮಾರ್, ಕುಸ್ತಿತರಬೇತುದಾರ ಶ್ರೀನಿವಾಸ್‌ಗೌಡ, ಕ್ಯಾತನಹಳ್ಳಿ ಪೈ.ಆನಂದ್, ಪಂಚಾಕ್ಷರಿ, ಮೈಸೂರಿನ ಚೊಕ್ಕಮೂರ್ತಿ, ಕುಮಾರ್, ರಾಜು, ಗಂಜಾಂ ರವಿಪ್ರಸಾದ್, ಮಂಜು, ಆರ್.ಸೋಮೇಗೌಡ, ಇಂದ್ರೇಶ್‌ಕುಮಾರ್, ಆರ್.ಗಿರೀಶ್, ಎಂ.ಜಯಂತ್, ರೂಪನಿತನ್, ಪದ್ಮಮ್ಮ, ಜಗದೀಶ್, ಟಿ.ಬೆಟ್ಟೇಗೌಡ, ಸೇರಿದಂತೆ ಅರಳಕುಪ್ಪೆ ಹಾಗೂ ಸುತ್ತಮುತ್ತಲ ಗ್ರಾಮದ ಎಲ್ಲಾ ಮುಖಂಡರು ಹಾಜರಿದ್ದರು.

> ಕುಸ್ತಿ ನಮ್ಮ ಗ್ರಾಮೀಣ ಕ್ರೀಡೆ. ಹಬ್ಬ ಹರಿದಿನಗಳಲ್ಲಿ ಕುಸ್ತಿ ಪಂದ್ಯಾವಳಿ ಆಯೋಜಿಸುವ ಮೂಲಕ ಪ್ರೋತ್ಸಾಹಿಸುತ್ತಿರುವುದು ಒಳ್ಳೆಯ ಬೆಳವಣಿಗೆ. ಅರಳಕುಪ್ಪೆ ಗ್ರಾಮದಲ್ಲಿ ಕಳೆದ 25 ವರ್ಷಗಳಿಂದ ಕುಸ್ತಿ ಪಂದ್ಯಾವಳಿ ಆಯೋಜಿಸಿಕೊಂಡು ಬರುತ್ತಿದ್ದಾರೆ. ಯುವ ಜನಾಂಗ ಹೆಚ್ಚು ಕುಸ್ತಿಯಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬಹುದು. **–ಸಿ.ಪಿ.ಶಿವರಾಜು, ಜೆಡಿಎಸ್ ಮುಖಂಡ**

ಕೈಗಾರಿಕಾ ಸಹಕಾರ ಸಂಘಕ್ಕೆ ಪಿ.ಶಿವಪ್ಪ ಅಧ್ಯಕ್ಷ



ನೂತನ ಅಧ್ಯಕ್ಷ ಪಿ.ಶಿವಪ್ಪ ಸೇರಿದಂತೆ ಆಯ್ಕೆಯಾದ ಪದಾಧಿಕಾರಿಗಳನ್ನು ಅಭಿನಂದಿಸಲಾಯಿತು.

ಮಂಡ್ಯ, ಏ.13– ಮಂಡ್ಯ ಜಿಲ್ಲಾ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ದೇಶಹಳ್ಳಿ ಪಿ.ಶಿವಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಗರದ ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ 5 ವರ್ಷಗಳ ಅವಧಿಗೆ ಸರ್ವಾನುಮತದಿಂದ ಮದ್ದೂರಿನ ದೇಶಹಳ್ಳಿ ಪಿ.ಶಿವಪ್ಪ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಉಪಾಧ್ಯಕ್ಷರಾಗಿ ಉಷಾ.ಎಂ ಗಾಮನಹಳ್ಳಿ, ನಿರ್ದೇಶಕರಾಗಿ ಜಿ.ಎಲ್.ರಾಮಲಿಂಗಯ್ಯ, ಚನ್ನಕೇಶವ ಪಾಂಡವಪುರ, ಕಜರ್ ಪಾಷ, ಅಮಾಸಯ್ಯ, ಶಿವಮೂರ್ತಿ.ಜಿ.ಎನ್, ಮಹೇಂದ್ರ.ಪಿ.ಸಿ, ರಾಮ್ ಕುಮಾರ್.ಆರ್, ಅನುಸೂಯ.ಕೆ ಆಯ್ಕೆಯಾದರು.

ನೂತನ ಅಧ್ಯಕ್ಷ ದೇಶಹಳ್ಳಿ ಪಿ.ಶಿವಪ್ಪ ಮಾತನಾಡಿ, ಜಿಲ್ಲಾ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಸಂಘದ ಆಡಳಿತ ಮಂಡಳಿಗೆ ಎಲ್ಲರೂ ಒಮ್ಮತದಿಂದ ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡುವ ಮೂಲಕ ಅಧ್ಯಕ್ಷರನ್ನಾಗಿ ಮಾಡಿದ್ದಾರೆ. ಎಲ್ಲರಿಗೂ ಧನ್ಯವಾದ ತಿಳಿಸುತ್ತೇನೆ. ಎಲ್ಲರ ಸಹಕಾರದೊಂದಿಗೆ ಸಂಘವನ್ನು ಉತ್ತಮ ರೀತಿಯಲ್ಲಿ ಕೊಂಡೊಯ್ಯಲು ಶ್ರಮಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭ ರಾಜ್ಯಾಧ್ಯಕ್ಷ ಕೆ.ಎಸ್.ಸಂತೋಷ್ ಕುಮಾರ್, ಮಾಜಿ ಅಧ್ಯಕ್ಷ ನಂಜುಂಡಸ್ವಾಮಿ, ಎಂ.ಡಿ.ದೊರೈರಾಜು, ಮಾಜಿ ನಿರ್ದೇಶಕ ನಾರಾಯಣ್ ಸೇರಿದಂತೆ ಮತ್ತಿತರರಿದ್ದರು.

ಏ.16ರಂದು ಪ್ರಗತಿ ಪರಿಶೀಲನಾ ಸಭೆ

ಮಂಡ್ಯ, ಏ.13– ಶಾಸಕ ಪಿ.ರವಿಕುಮಾರ್‌ಗೌಡರ ಅಧ್ಯಕ್ಷತೆಯಲ್ಲಿ ಏ.16ರಂದು ಬೆಳಗ್ಗೆ 11 ಗಂಟೆಗೆ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ (ಕೆಡಿಪಿ) ಜಿಪಂ ಕಾವೇರಿ ಸಭಾಂಗಣದಲ್ಲಿ ನಡೆಯಲಿದೆ ಎಂದು ತಾಪಂ ಇಓ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಈಜಲು ಹೋದ ವಿದ್ಯಾರ್ಥಿ ನೀರು ಪಾಲು

ಶ್ರೀರಂಗಪಟ್ಟಣ, ಏ.13– ಕಾವೇರಿ ನದಿಯಲ್ಲಿ ಈಜಲು ಹೋದ ವಿದ್ಯಾರ್ಥಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣ ಬಲಮುರಿಯಲ್ಲಿ ಭಾನುವಾರ ಸಂಜೆ ನಡೆದಿದೆ.

ಹೆಚ್.ಡಿ.ಕೋಟೆ ಮೂಲದ, ಸಿದ್ದಲಿಂಗಪುರ ಗ್ರಾಮದ ನಿವಾಸಿ ಥಾಮಸ್ ಇ.ಟಿ. ಎಂಬುವರ ಪುತ್ರ ಡೇನಿಯಲ್ ಇ. ಥಾಮಸ್(17) ಸಾವನ್ನಪ್ಪಿದ ವಿದ್ಯಾರ್ಥಿ. ಈತ ಮಂಡ್ಯದ ಕಾಳೇನಹಳ್ಳಿ ಬಳಿಯ ಮದರ್ ತೆರೇಸಾ ಚರ್ಚ್‌ನಲ್ಲಿ ಆಯೋಜಿಸಿದ್ದ ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡಿದ್ದ ಎನ್ನಲಾಗಿದೆ.

ಘಟನೆ ವಿವರ: ಪ್ರಥಮ ಪಿಯುಸಿ ಓದುತ್ತಿದ್ದ ಡೇನಿಯಲ್, ಬೇಸಿಗೆ ರಜೆ ಹಿನ್ನೆಲೆಯಲ್ಲಿ ಕ್ರೈಸ್ತ ಧರ್ಮ ಬೋಧನಾ ತರಬೇತಿ ಪಡೆಯಲು ಶನಿವಾರವಷ್ಟೇ ಶಿಬಿರಕ್ಕೆ ಆಗಮಿಸಿದ್ದನು. ಭಾನುವಾರ ಶಿಬಿರದ ಸುಮಾರು 50 ಸ್ನೇಹಿತರೊಂದಿಗೆ ಶ್ರೀರಂಗಪಟ್ಟಣ ಸೇರಿದಂತೆ ಸುತ್ತಮುತ್ತಲ ಪ್ರವಾಸಿ ತಾಣಗಳಿಗೆ ಭೇಟಿ ನೀಡಿದ್ದ. ಸಂಜೆ ವೇಳೆ ಬಲಮುರಿ ಪ್ರವಾಸಿ ತಾಣಕ್ಕೆ ಬಂದಿದ್ದ ವೇಳೆ ಕಾವೇರಿ ನದಿಯಲ್ಲಿ ಈಜಲು ಹೋಗಿ ನೀರಿನ ಸೆಳೆತಕ್ಕೆ ಸಿಲುಕಿ ನಾಪತ್ತೆಯಾಗಿದ್ದ. ತಕ್ಷಣ ಸ್ನೇಹಿತರು ಸ್ಥಳೀಯರು ಹಾಗೂ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದು ಕೆ.ಆರ್.ಸಾಗರ ಪೊಲೀಸರು ಸ್ಥಳಕ್ಕಾಗಮಿಸಿ ನುರಿತ ಸ್ಥಳೀಯ ಈಜುಗಾರರ ಸಹಾಯದಿಂದ ಶೋಧ ಕಾರ್ಯ ನಡೆಸಿದರು.

ಸೋಮವಾರ ಬೆಳಗ್ಗೆ ಡೇನಿಯಲ್ ಶವ ನದಿಯಲ್ಲಿ ಪತ್ತೆಯಾಗಿದ್ದು, ಬಳಿಕ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಂತರ ಶವವನ್ನು ವಾರಸುದಾರರಿಗೆ ಹಸ್ತಾಂತರಿಸಲಾಯಿತು. ಈ ಸಂಬಂಧ ಕೆಆರ್‌ಎಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸ್ಕಾಲರ್ಸ್ ಪದವಿ ಪೂರ್ವ ಕಾಲೇಜಿಗೆ ಶೇ.100 ಫಲಿತಾಂಶ

ಕೆ.ಆರ್.ಪೇಟೆ: ಪಟ್ಟಣದ ಸ್ಕಾಲರ್ಸ್ ಪದವಿ ಪೂರ್ವ ಕಾಲೇಜಿಗೆ ಸತತ 9ನೇ ವರ್ಷವೂ ಶೇ.100ರಷ್ಟು ಫಲಿತಾಂಶ ಲಭಿಸಿದೆ.

ಪರೀಕ್ಷೆ ಬರೆದಿದ್ದ ಎಲ್ಲಾ 151 ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಪಡೆದು ಉತ್ತೀರ್ಣರಾಗಿದ್ದಾರೆ. ಕಾಲೇಜಿನ ವಿಜ್ಞಾನ ವಿಭಾಗದ ಭವಾನಿ ಎಂ.ಗೌಡ ಎಂಬ ವಿದ್ಯಾರ್ಥಿನಿ 587 ಅಂಕಗಳನ್ನು ಪಡೆಯುವ ಮೂಲಕ ತಾಲೂಕಿಗೆ ಪ್ರಥಮ ಸ್ಥಾನ ಪಡೆದು ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ.

ಕಾಲೇಜಿನ ಪ್ರಾಂಶುಪಾಲ ಮಂಜುನಾಥ್ ಮಾತನಾಡಿ, ಕಾಲೇಜು ಸತತ 9ನೇ ವರ್ಷವೂ ಶೇ.100ರಷ್ಟು ಅಂಕ ಗಳಿಸಿರುವುದು ಸಂತಸದ ವಿಚಾರ. ವಿಜ್ಞಾನ ವಿಭಾಗದ 129 ವಿದ್ಯಾರ್ಥಿಗಳ ಪೈಕಿ 68 ಡಿಸ್ಟಿಂಕ್ಷನ್, ಉಳಿದ 61 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದ 21 ವಿದ್ಯಾರ್ಥಿಗಳ ಪೈಕಿ 8 ಮಂದಿ ಡಿಸ್ಟಿಂಕ್ಷನ್ ಮತ್ತು ಉಳಿದ 13 ಮಂದಿ ಪ್ರಥಮ ಶ್ರೇಣಿಯಲ್ಲಿ ಪಾಸ್ ಆಗುವ ಮೂಲಕ ಶ್ರೇಷ್ಠ ಸಾಧನೆ ಮಾಡಿದ್ದಾರೆ. ಈ ಪೈಕಿ ವಿಜ್ಞಾನ ವಿಭಾಗದ ಬೊಮ್ಮೇನಹಳ್ಳಿಯ ಭವಾನಿ.ಎಂ.ಗೌಡ 587 ಅಂಕ ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ ಎಂದರು.



ವಿದ್ಯಾರ್ಥಿನಿ ಭವಾನಿ ಎಂ.ಗೌಡ ಅವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಲಾಯಿತು.

ಇದೇ ವೇಳೆ ವಿದ್ಯಾರ್ಥಿನಿ ಭವಾನಿ ಎಂ.ಗೌಡ ಅವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಲಾಯಿತು. ಅಲ್ಲದೇ ಉತ್ತಮ ಫಲಿತಾಂಶಕ್ಕೆ ಕಾರಣರಾದ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲ ಮಂಜುನಾಥ್, ಸಂಸ್ಥೆ ಕಾರ್ಯದರ್ಶಿ ವಿದ್ಯಾಶ್ರೀ, ಉಪನ್ಯಾಸಕರು ಅಭಿನಂದನೆ ಸಲ್ಲಿಸಿದ್ದಾರೆ.

ಇಂದು ಅಂಬೇಡ್ಕರ್ ಜಯಂತಿ

ಮಂಡ್ಯ: ಜಿಲ್ಲಾಡಳಿತ, ಜಿಪಂ, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಏ.14 ರಂದು ಬೆಳಗ್ಗೆ 10 ಗಂಟೆಗೆ ಮಂಡ್ಯದ ಜಿಲ್ಲಾಧಿಕಾರಿ ಕಚೇರಿ ಎದುರಿನ ಉದ್ಯಾನವನದಲ್ಲಿರುವ ಡಾ.ಬಿ. ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಕಾರ್ಯಕ್ರಮ, ವೇದಿಕೆ ಕಾರ್ಯಕ್ರಮ ಬೆಳಗ್ಗೆ 11 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾರತಿ ಪಿಯು ಕಾಲೇಜಿಗೆ ಶೇ.90ರಷ್ಟು ಫಲಿತಾಂಶ



ಕಿಶನ್(97.33), ವಿನುತ(96.5), ತೇಜಸ್ವಿನಿ(94.5)

ಭಾರತೀನಗರ: ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಭಾರತೀ ಪದವಿ ಪೂರ್ವ ಕಾಲೇಜಿಗೆ ಶೇ. 90ರಷ್ಟು ಫಲಿತಾಂಶ ಲಭಿಸಿದೆ.

ಕಲಾ ವಿಭಾಗ ಶೇ.91, ವಿಜ್ಞಾನ ವಿಭಾಗ ಶೇ.90 ಹಾಗೂ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ ಶೇ. 90ರಷ್ಟು ಫಲಿತಾಂಶ ಲಭಿಸಿದೆ. ಕಾಲೇಜಿನ ಕಿಶನ್ ಎಂಬ ವಿದ್ಯಾರ್ಥಿ ಶೇ.97. 33, ವಿಜ್ಞಾನ ವಿಭಾಗದಲ್ಲಿ ವಿನುತ ಶೇ. 96.5, ಕಲಾ ವಿಭಾಗದಲ್ಲಿ ತೇಜಸ್ವಿನಿ ಶೇ.94.5ರಷ್ಟು ಅಂಕ ಗಳಿಸಿದ್ದಾರೆ.

ಒಟ್ಟು 677 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 65 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, 400 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಕನ್ನಡದಲ್ಲಿ 12 ವಿದ್ಯಾರ್ಥಿಗಳು, ಲೆಕ್ಕ ಶಾಸ್ತ್ರದಲ್ಲಿ ಹರೀಣ್, ಅರ್ಥಶಾಸ್ತ್ರದಲ್ಲಿ ಕಿಶಾನ್ 100ಕ್ಕೆ 100 ಅಂಕ ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾನೆ. ಗಣಿತ ಶಾಸ್ತ್ರದಲ್ಲಿ ವಿನುತ 100ಕ್ಕೆ 100 ಅಂಕ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕಾಲೇಜಿಗೆ ಉತ್ತಮ ಫಲಿತಾಂಶ ತಂದು ಕೊಟ್ಟ ವಿದ್ಯಾರ್ಥಿಗಳನ್ನು ಸಂಸ್ಥೆ ಅಧ್ಯಕ್ಷ ಮಧು ಜಿ.ಮಾದೇಗೌಡ, ಕಾರ್ಯದರ್ಶಿ ಬಿ.ಎಂ.ನಂಜೇಗೌಡ, ಸಿಇಓ ಆಶಯ್ ಮಧು, ಆಡಳಿತಾಧಿಕಾರಿ ಎಸ್.ಜವರೇಗೌಡ, ಪ್ರಾಂಶುಪಾಲೆ ಜಿ.ಬಿ.ಪಲ್ಲವಿ ಹಾಗೂ ಎಲ್ಲಾ ವಿಭಾಗದ ಉಪನ್ಯಾಸಕರು, ಬೋಧಕೇತರರು ಅಭಿನಂದಿಸಿದ್ದಾರೆ.

ಜಯಮ್ಮ ನಿಧನ



ಕೆ.ಆರ್.ಪೇಟೆ, ಏ.13– ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಮದ ಲೇ.ಭೀಮನ ಬೋರೇಗೌಡರ ಪತ್ನಿ ಜಯಮ್ಮ(75) ಸೋಮವಾರ ಮಧ್ಯಾಹ್ನ ನಿಧನರಾದರು. ಮೃತರು ಉದ್ಯಮಿ ಅಶೋಕ್ ಸೇರಿದಂತೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಸ್ವಗ್ರಾಮದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿದೆ.

ಅಪರಿಚಿತ ಶವ ಪತ್ತೆ

ಮೈಸೂರು: ಏ.6ರಂದು ಮೈಸೂರು ನಗರ ದೇವರಾಜ ಪೊಲೀಸ್ ಠಾಣಾ ವ್ಯಾಪ್ತಿಯ ಅರಮನೆಯ ದಕ್ಷಿಣ ದಿಕ್ಕಿಗಿರುವ ಬಿಸಿಲು ಮಾರಮ್ಮ ದೇವಸ್ಥಾನದ ಬಳಿ ಅಪರಿಚಿತ ವ್ಯಕ್ತಿ ಮೃತ ಪಟ್ಟಿರುವುದು ಕಂಡು ಬಂದಿದೆ. ಮುಂದಿನ ಕಾನೂನು ಕ್ರಮ ಕೈಗೊಳ್ಳುವಂತೆ ಠಾಣಾ 19/2026 ಕಲಂ–194 ರೀತ್ಯಾ ಪ್ರಕರಣ ದಾಖಲಿಸಿದೆ.

ಸುಮಾರು 45 ವರ್ಷ, ಸಾಧಾರಣ ಶರೀರ, ದುಂಡು ಮುಖ, ಕಪ್ಪು ಮತ್ತು ಬಿಳಿ ಬಣ್ಣದ ತಲೆ ಕೂದಲು ಇರುತ್ತದೆ. ಮೈಮೇಲೆ ಶರ್ಟ್ ಇರುವುದಿಲ್ಲ, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಮೃತನ ವಾರಸುದಾರರ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ದೂ. ಸಂಖ್ಯೆ 0821–2418100 ನ್ನು ಸಂಪರ್ಕಿಸಬಹುದೆಂದು ದೇವರಾಜ್ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವ ಜಯಂತಿ; ತಾಲೂಕು ಪ್ರಚಾರ ವಾಹನಕ್ಕೆ ಚಾಲನೆ



ಮೈಸೂರು ತಾಲೂಕು ಪ್ರಚಾರ ವಾಹನಕ್ಕೆ ದಂಡಿಕೆರೆ ಮಠಾಧ್ಯಕ್ಷರಾದ ಬಸವಲಿಂಗ ಸ್ವಾಮಿಗಳವರ ದಿವ್ಯ ಸಮ್ಮುಖದಲ್ಲಿ ಬಸವ ಜಯಂತಿ ಅಧ್ಯಕ್ಷ ಎಂ.ಚಂದ್ರಶೇಖರ್ ನೇತೃತ್ವದಲ್ಲಿ ಪ್ರಚಾರ ಸಮಿತಿ ಅಧ್ಯಕ್ಷ ಲೋಹಿತ್ ದೊರೆಸ್ವಾಮಿ ಅಧ್ಯಕ್ಷತೆಯಲ್ಲಿ ಎಲ್ಲಾ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸಮಾಜದ ಶರಣ, ಶರಣೆಯರ ಉಪಸ್ಥಿತಿಯಲ್ಲಿ ಮೈಸೂರಲ್ಲಿ ಚಾಲನೆ ನೀಡಲಾಯಿತು. ಈ ಸಂದರ್ಭ ಪ್ರಧಾನ ಕಾರ್ಯದರ್ಶಿ ಎ.ಪಿ.ವಿರೂಪಾಕ್ಷ, ಮೆರವಣಿಗೆ ಸಮಿತಿ ಅಧ್ಯಕ್ಷ ಕೆ.ವಿ.ಮಲ್ಲೇಶ್, ಖಜಾಂಚಿ ಜಯಶಂಕರ್, ವೇದಿಕೆ ಸಮಿತಿ ಅಧ್ಯಕ್ಷ ಶರತ್ ಪುಟ್ಟಬುದ್ಧಿ, ಒಕ್ಕೂಟದ ಮಾಜಿ ಅಧ್ಯಕ್ಷ ಹಡಜನ ಟಿ.ಲಿಂಗರಾಜು, ಸಾಮಾಜಿಕ ಮಾಧ್ಯಮ ಅಧ್ಯಕ್ಷರಾದ ದಾರಿಪುರ ಡಿ.ಚಂದ್ರಶೇಖರ್, ಮಹೇಂದ್ರ ಶೈವ, ಪ್ರಧಾನ ಕಾರ್ಯದರ್ಶಿ, ಮುಳ್ಳೂರು ರೇಚಣ್ಣ, ಕಾವಿಬಸಪ್ಪ, ಡಿ.ಪಿ ಸುರೇಶ್, ಪಿ.ಎಂ. ಮಹದೇವಸ್ವಾಮಿ, ಕಾವಿ ಬಸಪ್ಪ, ಗುರು ಬಸಳ್ಳಿಹುಂಡಿ, ಗಿರಿ ಮಾರ್ಬಳ್ಳಿ, ಪೂರ್ವ ವಲಯ ಅಧ್ಯಕ್ಷರು ಎಸ್.ಶಿವಸ್ವಾಮಿ, ಶ್ರೀಕಂಠ ಮೂರ್ತಿ, ಮಹದೇವಸ್ವಾಮಿ, ಕುಮಾರ ಸ್ವಾಮಿ, ವನಜ, ಜ್ಯೋತಿ ರೇಚಣ್ಣ, ಮಹೇಶ್, ಶಿವುಪ್ರಸಾದ್, ಪೂಜೆ ಮಾದಪ್ಪ, ಮಹೇಂದ್ರ, ಪ್ರಕಾಶ್, ಪ್ರಭಣ್ಣ, ಶಿವಮಣಿ ವಿರೂಪಾಕ್ಷ, ಉಮಾ ಪ್ರಕಾಶ್, ವನಜಾ ನಾಗರಾಜ್, ಪ್ರಗತಿಬಾಗ, ದನ್ಯ ಸತ್ಯೇಂದ್ರ ಮೂರ್ತಿ, ಮಲ್ಲಿಕಾ ಮಹದೇವ ಸ್ವಾಮಿ, ಮೀನಾ ಪ್ರಾಣೇಶ್, ಭಾರ್ಗವಿ ಮನೋಹರ್, ಉಷಾ ನಾಗೇಶ್ ಇತರರು ಉಪಸ್ಥಿತರಿದ್ದರು.

ಮಕ್ಕಳು ಮೊಬೈಲ್, ಟಿವಿಗೆ ದಾಸರಾಗಿ ಸಾಂಪ್ರದಾಯಿಕ ಆಟ ಮರೆತಿದ್ದಾರೆ

ಶಾಸಕ ಕೆ.ಹರೀಶ್‌ಗೌಡರ ವಿಷಾದ

ಮೈಸೂರು, ಏ.13(ಬಿಎಲ್ ಯು)– ಇತ್ತೀಚಿಗೆ ಮಕ್ಕಳು ಮೊಬೈಲ್, ಟಿವಿಗೆ ದಾಸರಾಗಿದ್ದು, ಸಾಂಪ್ರದಾಯಿಕ ಆಟಗಳನ್ನು ಮರೆತಿದ್ದಾರೆ ಎಂದು ಶಾಸಕ ಕೆ.ಹರೀಶ್‌ಗೌಡರು ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ಹೆಬ್ಬಾಳು ಕೈಗಾರಿಕಾ ಪ್ರದೇಶದ ಬಸವ ಮಾರ್ಗ ಫೌಂಡೇಷನ್ ಆಶ್ರಮ ಶಾಖೆಯಲ್ಲಿ ಆಯೋಜಿಸಿರುವ ಒಂದು ತಿಂಗಳ ಉಚಿತ ವಸತಿ ಸಹಿತ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬೇಸಿಗೆ ರಜಾ ಬಂದರೆ ಸಾಕು ನಾವು ಅಜ್ಜಿ ಮನೆಗೆ ಹೋಗುತ್ತಿದ್ದೆವು. ಅಜ್ಜಿ ಮನೆಯೇ ನಮಗೆ ಬೇಸಿಗೆ ಶಿಬಿರವಾಗಿತ್ತು ಎಂದು ಬಾಲ್ಯದ ನೆನಪು ಮೆಲಕು ಹಾಕಿದರು.

ಆದರೆ, ಅಜ್ಜಿ ಮನೆಗೆ ಹೋಗುವುದು, ಸಾಂಪ್ರದಾಯಿಕ ಆಟ ಆಡುವುದೆಲ್ಲಾ ಈಗ ಮರೆಯಾಗಿದ್ದು, ಮಕ್ಕಳು ಮೊಬೈಲ್, ಟಿವಿಗೆ ದಾಸರಾಗಿದ್ದಾರೆ ಎಂದು ಹೇಳಿದರು.

ಇಂತಹ ಸಂದರ್ಭದಲ್ಲಿ ಇಲ್ಲಿ ಆಯೋಜಿಸಿರುವ ಬೇಸಿಗೆ ಶಿಬಿರ ಮಕ್ಕಳಿಗೆ ಪ್ರಯೋಜನಕಾರಿಯಾಗಲಿದೆ. ರಜಾ ದಿನದ ಸಮಯವನ್ನು ವ್ಯರ್ಥ ಮಾಡದೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಮಕ್ಕಳು ತೊಡಗಿಸಿಕೊಳ್ಳಬೇಕು ಎಂದು ಹರೀಶ್ ಗೌಡ ಅವರು ಸಲಹೆ ನೀಡಿದರು.



ಮೈಸೂರಿನ ಹೆಬ್ಬಾಳು ಕೈಗಾರಿಕಾ ಪ್ರದೇಶದ ಬಸವ ಮಾರ್ಗ ಫೌಂಡೇಷನ್ ಆಶ್ರಮ ಶಾಖೆಯಲ್ಲಿ ಆಯೋಜಿಸಿರುವ ಒಂದು ತಿಂಗಳ ಉಚಿತ ವಸತಿ ಸಹಿತ ಬೇಸಿಗೆ ಶಿಬಿರಕ್ಕೆ ಶಾಸಕ ಕೆ.ಹರೀಶ್‌ಗೌಡರು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ವಿಘ್ನೇಶ್ ಎಂಟರ್ ಪ್ರೈಸಸ್ ವ್ಯವಸ್ಥಾಪಕ ಪಾಲುದಾರ ಮಹೇಶ್ ಅವರು, ಮನುಷ್ಯನ ಜೀವನದಲ್ಲಿ ಬಾಲ್ಯದ ಹಂತವೇ ಪರಿಶುದ್ಧ ಹಾಗೂ ಪರಿಪೂರ್ಣ ಎಂದು ಅಭಿಪ್ರಾಯಪಟ್ಟರು.

ಬಸವಮಾರ್ಗ ಫೌಂಡೇಷನ್ ಸಂಸ್ಥಾಪಕ ಎಸ್. ಬಸವರಾಜು ಮಾತನಾಡಿ, ವ್ಯಸನಕ್ಕೆ ದಾಸರಾದವರ ಮಕ್ಕಳಿಗೆ ಅನುಕೂಲವಾಗಲೆಂದು ಈ ಶಿಬಿರ ಆಯೋಜಿಸಲಾಗಿದೆ. ಇಲ್ಲಿ ಯೋಗ, ಕರಾಟೆ, ನೃತ್ಯ, ಸಂಗೀತ, ಈಜು ಸೇರಿದಂತೆ ಇತರೆ ಚಟುವಟಿಕೆಗಳಲ್ಲಿ ಮಕ್ಕಳನ್ನು ತೊಡಗಿಸಿಕೊಳ್ಳಲಾಗುವುದು ಎಂದರು.

ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಏ.21ರಿಂದ ಮೈಸೂರಲ್ಲಿ ಕಬ್ಬು ಬೆಳೆಗಾರರ ಅನಿರ್ದಿಷ್ಟಾವಧಿ ಧರಣಿ



ಮೈಸೂರಿನ ನಜರ್‌ಬಾದ್‌ನಲ್ಲಿರುವ ಲೋಕೋಪಯೋಗಿ ಇಲಾಖೆಯ ಅತಿಥಿ ಗೃಹದಲ್ಲಿ ನಡೆದ ಕಬ್ಬು ಬೆಳೆಗಾರರ ಸಂಘದ ಸಭೆಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿದರು.

ಮೈಸೂರು,ಏ.13(ಎಂಟಿವೈ)– ಬಾಕಿ ಪಾವತಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ, ಏ.21ರಿಂದ ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಧರಣಿ ನಡೆಸಲು ನಿರ್ಧರಿಸಿರುವುದಾಗಿ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಲೋಕೋಪಯೋಗಿ ಇಲಾಖೆಯ ಅತಿಥಿ ಗೃಹದಲ್ಲಿ ಸೋಮವಾರ ಆಯೋಜಿಸಿದ್ದ ಕಬ್ಬು ಬೆಳೆಗಾರರ ಸಭೆಯಲ್ಲಿ ಮಾತನಾಡಿದ ಅವರು, ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಗಾರರಿಗೆ ನೀಡ ಬೇಕಾಗಿರುವ ಬಾಕಿ ನೀಡದೆ ಸತಾಯಿಸುತ್ತಿವೆ. ರಾಜ್ಯ ಸರ್ಕಾರ ಆದೇಶಿಸಿದ್ದರೂ ಕೆಲ ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿ ಉದ್ಧಟ ತನ ಪ್ರದರ್ಶಿಸುತ್ತಿವೆ. ಈ ಹಿನ್ನೆಲೆಯಲ್ಲಿ ರೈತ ವಿರೋಧಿ ನೀತಿ ಅನುಸರಿಸುತ್ತಿರುವ ಸಕ್ಕರೆ ಕಾರ್ಖಾನೆಗಳಿಗೆ ಬಿಸಿ ಮುಟ್ಟಿಸುವ ಸಲುವಾಗಿ ಅನಿವಾರ್ಯವಾಗಿ ಪ್ರತಿಭಟನೆ ನಡೆಸಬೇಕಾಗಿದೆ ಎಂದರು.

ಕಬ್ಬು ಬೆಳೆಗಾರ ರೈತರ ಖಾತೆಗಳಿಗೆ ಹಣ ಜಮೆ ಮಾಡುವವರೆಗೂ ಹೋರಾಟ ನಿಲ್ಲಿಸುವುದಿಲ್ಲ. ರೈತರ ಹಣ ಬಾಕಿ ವಿಚಾರದಲ್ಲಿ ಜಿಲ್ಲಾಧಿಕಾರಿಗಳು ತಮ್ಮ ಅಧಿಕಾರ ಬಳಸಿ ರಿಕವರಿ ಸರ್ಟಿಫಿಕೇಟ್ ಜಾರಿ ಮಾಡಿ ಸಕ್ಕರೆ ದಾಸ್ತಾನು ಜಪ್ತಿ ಮಾಡಬೇಕು. ರಾಜ್ಯ ಸರ್ಕಾರ ನಿಗದಿ ಮಾಡಿದ ಹೆಚ್ಚುವರಿ ಕಬ್ಬಿನ ಹಣ ಪ್ರತಿ ಟನ್‌ಗೆ 100 ರೂ. ಬಣ್ಣಾರಿ ಮತ್ತು ಮಹದೇಶ್ವರ ಕಾರ್ಖಾನೆಯಿಂದ ತಕ್ಷಣವೇ ರೈತರಿಗೆ ಕೊಡಿಸಬೇಕು ಎಂದು ಒತ್ತಾಯಿಸಿದರು.

ಬ್ಯಾಂಕುಗಳಲ್ಲಿ ರೈತರು ತುರ್ತು ಅವಶ್ಯಕತೆಗಳಿಗೆ ಚಿನ್ನದ ಗಿರವಿ ಸಾಲಕ್ಕೆ ಸಿಬಿಲ್ ಸ್ಕೋರ್ ನೋಡಿ ಸಾಲ ನೀಡುವ ಪದ್ಧತಿ ರದ್ದು ಹಾಗೂ ಚಿನ್ನದ ಸಾಲ ನವೀಕರಣಕ್ಕೆ ಪ್ರತಿ ವರ್ಷ ಬಡ್ಡಿ ಕಟ್ಟಿಸಿಕೊಂಡು ಹಳೆಯ ಪದ್ಧತಿಯತೆ ನವೀಕರಿಸಬೇಕು. ಕೃಷಿ ಪಂಪಸೆಟ್‌ಗಳ ಅಕ್ರಮ ಸಕ್ರಮ ಹಳೆ ಪದ್ಧತಿಯಂತೆ ಮುಂದುವರಿಸಬೇಕು. ಇಲ್ಲದಿದ್ದರೆ ಸರ್ಕಾರವೇ ಎಲ್ಲಾ ವೆಚ್ಚ ಭರಿಸಬೇಕು ಎಂದು ಮನವಿ ಮಾಡಿದರು.

50 ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ರೈತರಿಗೆ ಸಾಗುವಳಿ ಚೀಟಿ ಕೊಡಲು ಹಾಗೂ ಸಾಗುವಳಿ ಜಮೀನುಗಳ ದುರಸ್ತಿ ಕಾರ್ಯ ಹಾಗೂ ಪೋಡಿ ಸರಳೀಕರಣಗೊಳಿಸಬೇಕು. ಈ ಎಲ್ಲಾ ಬೇಡಿಕೆಗಳ ಈಡೇರಿಕೆಗಾಗಿ ಡಿಸಿ ಕಚೇರಿ ಮುಂದೆ ಏ.21ರಿಂದ ನಿರಂತರ ಧರಣಿ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಸಭೆಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ಮಾರ್ಬಳ್ಳಿ ನೀಲ ಕಂಠಪ್ಪ ಲಕ್ಷ್ಮಿಪುರ ವೆಂಕಟೇಶ್, ವರಕೋಡು ನಾಗೇಶ್, ಕುರುಬೂರು ಸಿದ್ದೇಶ್, ಕೆಂಡಗಣಪ್ಪ, ಪರ ಶಿವಮೂರ್ತಿ, ಪ್ರಸಾದ್ ನಾಯಕ, ಬಸವರಾಜ, ನಂಜುಂಡಸ್ವಾಮಿ, ಅಂಬಳೆ ಮಂಜುನಾಥ್, ರಂಗರಾಜು, ನಾಗೇಂದ್ರ, ರವಿಕುಮಾರ್, ಜಯರಾಮು, ಮಹಾದೇವು, ಪ್ರಭಾಕರ್, ರಾಜು, ಬಾಲು, ಸತೀಶ್, ಶಿವಣ್ಣ, ಬಸವರಾಜ, ಮಹೇಶ್, ಕಮಲಮ್ಮ ಇತರರು ಪಾಲ್ಗೊಂಡಿದ್ದರು.

ಗಾಂಧೀಜಿ ಬಿಟ್ಟರೆ ನಾಲ್ವಡಿಯವರೆ ಅತೀ ಹೆಚ್ಚು ಜನಪ್ರಿಯ ದೊರೆ

ಇತಿಹಾಸ ಪ್ರಾಧ್ಯಾಪಕ ಡಾ.ಎನ್.ಜಿ.ಪ್ರಕಾಶ್ ಅಭಿಪ್ರಾಯ



ಮೈಸೂರಿನ ಮಹಿಳಾ ಮಹಾರಾಣಿ ಕಲಾ ಕಾಲೇಜಿನ ಇತಿಹಾಸ ವಿಭಾಗದಿಂದ 'ನಾಲ್ವಡಿ ಕೃಷ್ಣರಾಜ ಒಡೆಯರ್' ಉಪನ್ಯಾಸ ಕುರಿತ ಕಾರ್ಯಕ್ರಮ ಜರುಗಿತು.

ಮೈಸೂರು,ಏ.13(ಎಂಟಿವೈ)– ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರನ್ನು ಹೊರತುಪಡಿಸಿದರೆ ಯದುವಂಶದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಹೆಚ್ಚು ಜನಪ್ರಿಯ ರಾಜರೆನಿಸಿದ್ದಾರೆ ಎಂದು ಇತಿಹಾಸ ಪ್ರಾಧ್ಯಾಪಕ ಡಾ.ಎನ್.ಜಿ.ಪ್ರಕಾಶ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಇತಿಹಾಸ ವಿಭಾಗ ಆಯೋಜಿಸಿದ್ದ 'ನಾಲ್ವಡಿ ಕೃಷ್ಣರಾಜ ಒಡೆಯರ್' ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ವಿದ್ವತ್ಪೂರ್ಣರಾಗಿದ್ದರು. 'ಮದ್ರಾಸ್ ಮೇಲ್' ಪತ್ರಿಕೆ ನಾಲ್ವಡಿ ಅವರು ಭಾರತದ ಮಹಾರಾಜರುಗಳಲ್ಲಿ ಹೆಚ್ಚು ವಿದ್ವತ್‌ವುಳ್ಳವರಾಗಿದ್ದರು ಎಂದು ಬರೆದಿದೆ. ಹಲವು ಸಾಧನೆಗಳ ಸರದಾರರಾದ ನಾಲ್ವಡಿಯವರ ಕೆಲಸ ಕಾರ್ಯಗಳು ಸರ್ವಕಾಲಕ್ಕೂ ಪ್ರಸ್ತುತ ಮತ್ತು ಸ್ಮರಣೀಯ ಎಂದು ತಿಳಿಸಿದರು.

ನಾಲ್ವಡಿ ಅವರ ಆಡಳಿತದ ಕಾಲವನ್ನು 'ಕಲ್ಯಾಣ ರಾಜ್ಯ' ಎಂದೇ ಕರೆಯಲಾಗುತ್ತಿತ್ತು. ಕನ್ನಡ ನಾಡು–ನುಡಿಗಾಗಿ ನಾಲ್ವಡಿ ಅವರು ನೀಡಿರುವ ಕೊಡುಗೆ ಅಪಾರ. ಪ್ರಜಾಪ್ರಭುತ್ವ ಆಶಯಗಳಿಗೆ ಧಕ್ಕೆಯಾಗದಂತೆ ಪ್ರಜೆಗಳ ಧ್ವನಿಯಾಗಿದ್ದರು. ದೇಶ ಕಂಡ ಅಪರೂಪದ ರಾಜರೂ ಆಗಿದ್ದಾರೆ. ಶಿಕ್ಷಣ, ಆರೋಗ್ಯ, ಉದ್ಯೋಗ ಮೂರು ಪ್ರಮುಖ ಕಾರ್ಯಗಳ ಮೂಲಕ ಮೈಸೂರನ್ನು ಮಾದರಿ ಸಂಸ್ಥಾನವಾಗಿಸಿದ ಕೀರ್ತಿ ನಾಲ್ವಡಿ ಅವರಿಗೆ ಸಲ್ಲುತ್ತದೆ ಎಂದರು.

ಇದಕ್ಕೂ ಮುನ್ನ ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ.ಅಣ್ಣಯ್ಯ ತೈಲೂರು ಮಾತನಾಡಿ, ಮಹಿಳೆಯರಿಗೆ ಭಾರತದ ಸಂಸ್ಥಾನದಲ್ಲಿ ಪ್ರಪ್ರಥಮ ಬಾರಿಗೆ ಮತದಾನದ ಹಕ್ಕನ್ನು ಕೊಟ್ಟ ನಾಲ್ವಡಿ ಅವರು ಭಾರತ ಸಂವಿಧಾನದ ಮುನ್ನವೇ ಮೈಸೂರು ಸಂಸ್ಥಾನದ ಜನರಿಗೆ ಹಲವಾರು ಹಕ್ಕುಗಳನ್ನು ಕೊಟ್ಟಿದ್ದು ಇತಿಹಾಸ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಅನಿತಾ ವಹಿಸಿದ್ದರು. ಪ್ರೊ.ಆನಂದ್, ವ್ಯವಸ್ಥಾಪಕ ವೆಂಕಟೇಶ್, ಪ್ರೊ.ದೇವೇಗೌಡ, ಪ್ರಾಧ್ಯಾಪಕರಾದ ಪೂರ್ಣಿಮಾ ಶಾಂತಕುಮಾರಿ, ಡಾ.ಪ್ರಕಾಶ್, ಅನಿಲ್ ಹಾಗೂ ರಾಘವೇಂದ್ರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ವಿದ್ಯಾರ್ಥಿ ಪ್ರಿಯಾಂಕ ನಿರೂಪಣೆ ಮಾಡಿದರೆ, ನಂದಿನಿ ಪ್ರಾರ್ಥಿಸಿದರು.

ತನ್ನನ್ನೇ ಯೇಸು ಕ್ರಿಸ್ತನಿಗೆ ಹೋಲಿಸಿಕೊಂಡ ಟ್ರಂಪ್: ಜೀಸಸ್ ರೂಪದಲ್ಲಿ ಫೋಟೋ ಪೋಸ್ಟ್‌ಗೆ ಭಾರೀ ಟೀಕೆ



ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತಮ್ಮನ್ನು ತಾವು ಯೇಸು ಕ್ರಿಸ್ತನಂತೆ ಬಿಂಬಿಸುವ ಎಐ–ಸೃಷ್ಟಿತ ಚಿತ್ರವೊಂದನ್ನು ಹಂಚಿಕೊಂಡಿದ್ದು, ಈ ಚಿತ್ರಕ್ಕೆ ವ್ಯಾಪಕ ಟೀಕೆಗಳು ವ್ಯಕ್ತವಾಗುತ್ತಿವೆ.

ಈ ಚಿತ್ರದಲ್ಲಿ ಟ್ರಂಪ್ ಬಿಳಿ ನಿಲುವಂಗಿಯನ್ನು ಧರಿಸಿ, ಅನಾರೋಗ್ಯದಿಂದ ಮಲಗಿರುವ ವ್ಯಕ್ತಿಯ ಮೇಲೆ ಕೈ ಇಟ್ಟು ಪವಾಡ ಸದೃಶವಾಗಿ ಗುಣಪಡಿಸುತ್ತಿರುವಂತೆ ತೋರಿಸಲಾಗಿದೆ. ಇದು ಬೈಬಲ್‌ನಲ್ಲಿ ಯೇಸು ಕ್ರಿಸ್ತ ಲಾಜರಸ್‌ರನ್ನು ಜೀವಂತಗೊಳಿಸಿದ ಘಟನೆಯನ್ನು ಹೋಲುತ್ತದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ.

ಚಿತ್ರದ ಹಿನ್ನೆಲೆಯಲ್ಲಿ ಅಮೆರಿಕದ ಧ್ವಜ, ಯುದ್ಧ ವಿಮಾನಗಳು ಮತ್ತು ದೇವದೂತರ ಆಕೃತಿಗಳಿರುವುದು ಕಂಡು ಬಂದಿದೆ. ಪೋಪ್ ಲಿಯೋ ಘಿಬಗಿ ಅವರು ಇರಾನ್ ಯುದ್ಧದ ವಿಷಯದಲ್ಲಿ ಅಮೆರಿಕದ ಕ್ರಮಗಳನ್ನು ಟೀಕಿಸಿದ್ದರು. ಇದಕ್ಕೆ ಪ್ರತಿಯಾಗಿ ಟ್ರಂಪ್ ಅವರು ಪೋಪ್ ಅವರನ್ನು ದುರ್ಬಲ ಎಂದು ಕರೆದಿದ್ದರು.

ಪೋಪ್ ಅವರನ್ನು ದುರ್ಬಲ ಎಂದು ಟೀಕಿಸಿದ್ದ ಅವರು, ವಿದೇಶಾಂಗ ನೀತಿಯ ಕುರಿತು ಏನೂ ಗೊತ್ತಿಲ್ಲ. ನಾನು ಅವರ ಅಭಿಯಾನಿಯಲ್ಲ, ಅವರು ಪೋಪ್ ಆಗಿ ತಮ್ಮ ಕಾರ್ಯವನ್ನು ಮಾಡಿದರೆ ಸಾಕು ಎಂದು ಹೇಳಿದ್ದರು. ಅಲ್ಲದೆ, ನಾನು ಅಧ್ಯಕ್ಷನಾಗಿರದಿದ್ದರೆ ಲಿಯೋ ಪೋಪ್ ಆಗಿರಲಿಲ್ಲ ಎಂದು ಹೇಳಿದ್ದರು. ಇದರ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ ಈ ವಿವಾದಾತ್ಮಕ ಚಿತ್ರವನ್ನು ಹಂಚಿಕೊಂಡಿದ್ದಾರೆ. ಈ ಚಿತ್ರವು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ. ಅನೇಕ ಕ್ರಿಶ್ಚಿಯನ್ ಗುಂಪುಗಳು ಮತ್ತು ಟೀಕಾಕಾರರು ಇದು ಧರ್ಮಕ್ಕೆ ಮಾಡಿದ ಅಪಮಾನ ಎಂದು ಹೇಳುತ್ತಿದ್ದರೆ, ಅವರ ಬೆಂಬಲಿಗರು ಇದನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ



12ನೇ ವರ್ಷದ ಸವಿನೆನಪು



ಸಿದ್ದಯ್ಯ.ಎಂ

ನೀವು ನಮ್ಮನ್ನಗಲಿ ಇಂದಿಗೆ 12 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖಿತಪ್ತರು: ಪತ್ನಿ ಮತ್ತು ಕುಟುಂಬವರ್ಗದವರು

ಭಾವಪೂರ್ಣ ಶ್ರದ್ಧಾಂಜಲಿ



ಹೆಚ್.ಆರ್.ಮಹದೇವಸ್ವಾಮಿ (ಸಮಾಜ ಶಾಸ್ತ್ರ ಸಹಾಯಕ ಪ್ರಾಧ್ಯಾಪಕರು, ಮಹಿಳಾ ಪ್ರಥಮ ದರ್ಜೆ ಕಾಲೇಜು, ವಿಜಯನಗರ, ಮೈಸೂರು ಹಾಗೂ ಸ್ವರ್ಣ ಜಯಂತಿ ರೋಜ್‌ಗಾರ್ ಯೋಜನೆ(1997–2009) ಪ್ರೊಜೆಕ್ಟ್ ಆಫೀಸರ್)

ಇವರು ದಿ: 03–04–2026 ರಂದು ದೈವಾಧೀನರಾಗಿದ್ದು, ಇವರ ಉತ್ತರಕ್ರಿಯಾದಿ ಕಾರ್ಯವನ್ನು ದಿ:14–04–2026 ಮಂಗಳವಾರ, ಸ್ವಗೃಹ, ಎನ್. ಹೊಸಕೋಟೆ ಗ್ರಾಮದಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.
ದುಃಖಿತಪ್ತರು : ಕುಟುಂಬವರ್ಗ.

ಮೈಸೂರು ಮಿತ್ರ ಮಂಗಳವಾರ 14 ಏಪ್ರಿಲ್ 2026

ಡಾ.ಅಂಬೇಡ್ಕರ್ ಜೀವನ ಸಾಧನೆ, ವಿಚಾರಧಾರೆಗಳ ಜಾಗೃತಿ ಅಗತ್ಯ

ವಿಚಾರ ಸಂಕಿರಣದಲ್ಲಿ ಜಿಲ್ಲಾಧಿಕಾರಿ ಶ್ರೀರೂಪ ಅಭಿಮತ



ಅಂಬೇಡ್ಕರ್‌ರವರ ವಿಚಾರಧಾರೆಗಳ ಕುರಿತ ವಿಚಾರ ಸಂಕಿರಣವನ್ನು ಜಿಲ್ಲಾಧಿಕಾರಿ ಶ್ರೀರೂಪ ಉದ್ಘಾಟಿಸಿದರು.

ಚಾಮರಾಜನಗರ, ಏ.13– ಸಂವಿಧಾನ ರಚನೆ ಮೂಲಕ ದೇಶದ ಎಲ್ಲಾ ವರ್ಗಗಳ ಜನರಿಗೆ ಸಮಾನವಕಾಶ ಕಲ್ಪಿಸಿದ ಜಗತ್ತಿನ ಮಹಾನ್ ಮೇಧಾವಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ ಸಾಧನೆ, ಮೌಲ್ಯಯುತ ವಿಚಾರಧಾರೆಗಳ ಬಗ್ಗೆ ಜನಸಾಮಾನ್ಯರು ಜಾಗೃತರಾಗುವುದು ಅವಶ್ಯವಾಗಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್‌ರವರ 135ನೇ ಜನ್ಮ ದಿನಾಚರಣೆ ಅಂಗವಾಗಿ ನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ.ಬಿ.ಆರ್. ಅಂಬೇಡ್ಕರ್‌ರವರ ವಿಚಾರಧಾರೆಗಳ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ಡಾ.ಅಂಬೇಡ್ಕರ್ ಅಸಾಧಾರಣ ವಿಚಾರಧಾರೆಗಳ ಕುರಿತು ಜನಸಾಮಾನ್ಯರಿಗೆ ಬೆಳಕು ಚೆಲ್ಲುವ ಉದ್ದೇಶದಿಂದ ಜಯಂತಿ ಹಿಂದಿನ ದಿನವೇ ವಿಚಾರಸಂಕಿರಣ ಆಯೋಜಿಸಿರುವುದು ಜಿಲ್ಲೆಯ ವಿಶೇಷವಾಗಿದೆ. ಅಂಬೇಡ್ಕರ್ ಸ್ಮರಣೆ ಪ್ರತಿಯೊಬ್ಬರಿಗೂ ಗೌರವದ ಸಂಕೇತ. ವಿಶ್ವದ ಪ್ರಸಿದ್ಧ ಸಮಾಜಶಾಸ್ತ್ರಜ್ಞ, ಅರ್ಥಶಾಸ್ತ್ರಜ್ಞರಾದ ಇವರು ಆರ್‌ಬಿಐ ಸ್ಥಾಪನೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಸಂವಿಧಾನದಲ್ಲಿ ಅಂಬೇಡ್ಕರ್ ಅಡಕಗೊಳಿಸಿರುವ ಹಕ್ಕು, ಕರ್ತವ್ಯಗಳು ಹಾಗೂ ಕಾನೂನುಗಳ ಅನುಷ್ಠಾನದಿಂದ ದೇಶ ಅಭಿವೃದ್ಧಿ ಪಥದತ್ತ ಸಾಗಲಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಗೆ ಪೂರ್ವಭಾವಿಯಾಗಿ ಆಯೋಜಿಸಿರುವ ಈ ವಿಚಾರ ಸಂಕಿರಣವು ಅಂಬೇಡ್ಕರ್ ವಿಚಾರಧಾರೆಗಳನ್ನು ವಿದ್ಯಾರ್ಥಿಗಳು ಹಾಗೂ ನಾಗರಿಕರಿಗೆ ಮನದಟ್ಟು ಮಾಡಲು ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ತಿ.ನರಸೀಪುರ ನಳಂದ ಬುದ್ಧವಿಹಾರದ ಪೂಜ್ಯ ಬೋಧಿರತ್ನ ಬಂತೇಜಿ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಆಶಯವನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಅವರ ವಿಚಾರಧಾರೆಗಳು ಸಂಪೂರ್ಣ ಜಾರಿಯಾಗಬೇಕು. ಸರ್ವರಿಗೂ ಸಮಬಾಳು–ಸರ್ವರಿಗೂ ಸಮಪಾಲು ನೀತಿ ಅನುಷ್ಠಾನಗೊಳ್ಳಬೇಕು ಎಂದು ನುಡಿದರು.

ಮುಖ್ಯ ಭಾಷಣಕಾರರಾಗಿ ಭಾಗವಹಿಸಿದ್ದ ಮೈಸೂರು ಕೆ.ಆರ್.ಆಸ್ಪತ್ರೆಯ ಕೀಲು ಮತ್ತು ಮೂಳೆ ತಜ್ಞ ಡಾ. ಡಿ.ಜಗನ್ನಾಥ್ ಅವರು 'ಡಾ.ಬಿ.ಆರ್.ಅಂಬೇಡ್ಕರ್ ದೃಷ್ಟಿಕೋನದಲ್ಲಿ ಧಮ್ಮ ಮತ್ತು ಸಾಮಾಜಿಕ ಸಾಮರಸ್ಯ' ಮತ್ತು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ ಭಾಷಾಂತರ ನಿರ್ದೇಶನಾಲಯದ ನಿರ್ದೇಶಕ ಡಾ.ಎಂ.ವೆಂಕಟೇಶ್ ಅವರು 'ಡಾ.ಬಿ.ಆರ್. ಅಂಬೇಡ್ಕರ್‌ರವರ ವೈಚಾರಿಕತೆ ಮತ್ತು ಪ್ರಸ್ತುತ ಸನ್ನಿವೇಶ' ಕುರಿತು ವಿಚಾರ ಮಂಡಿಸಿದರು.

ಕಾರ್ಯಕ್ರಮದಲ್ಲಿ ಡಿವೈಎಸ್ಪಿ ಸ್ನೇಹರಾಜ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮುನಿರಾಜು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರಾಜು ಮತ್ತಿತರರು ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಗಣ್ಯರು ಮಾಲಾರ್ಪಣೆ ಮಾಡಿದರು.

ವನ್ಯಜೀವಿಗಳ ಸಂತಾನ ಶಕ್ತಿ ಹರಣ ಪ್ರಸ್ತಾಪ ಖಂಡಿಸಿ ರಸ್ತೆ ತಡೆದು ಪ್ರತಿಭಟನೆ



ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ರಸ್ತೆ ತಡೆದು ಪ್ರತಿಭಟಿಸಲಾಯಿತು.

ಚಾಮರಾಜನಗರ, ಏ.13– ಮಾನವ ಮತ್ತು ವನ್ಯಜೀವಿ ಸಂಘರ್ಷ ತಡೆಯುವ ನಿಟ್ಟಿನಲ್ಲಿ ವನ್ಯಜೀವಿಗಳ ಸಂತಾನ ಶಕ್ತಿ ಹರಣ ಮಾಡಬೇಕೆಂಬ ಅರಣ್ಯ ಇಲಾಖೆ ಚಿಂತನೆಯನ್ನು ಖಂಡಿಸಿ, ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘ ಪ್ರತಿಭಟಿಸಿತು.

ನಗರದ ಹೊರವಲಯದ ಮರೆಯಾಲ ಸೇತುವೆ ಬಳಿ ಸಮಾವೇಶಗೊಂಡ ಸಂಘದ ಸದಸ್ಯರು, ಚಾಮರಾಜನಗರ–ಮೈಸೂರು ರಸ್ತೆ ತಡೆದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ವನ್ಯಜೀವಿಗಳಿಗೆ ಸಂತಾನ ಶಕ್ತಿ ಹರಣ ಮಾಡುವ ಚಿಂತನೆ ಅಮಾನವೀಯ ಹಾಗೂ ಅವೈಜ್ಞಾನಿಕವಾಗಿದೆ. ಈ ರೀತಿಯ ಸಲಹೆ ನೀಡಿದ ವ್ಯಕ್ತಿಯನ್ನು ಮೊದಲು ಮಾನಸಿಕ ಆಸ್ಪತ್ರೆಗೆ ದಾಖಲಿಸಬೇಕು. ಸಂತಾನ ಹರಣ ಚಿಕಿತ್ಸೆ ಮಾಡಬೇಕಿರುವುದು ಕುಟುಂಬ ರಾಜಕಾರಣಕ್ಕೆ, ಭ್ರಷ್ಟಾಚಾರಕ್ಕೆ, ಅಕ್ರಮ ಸಂಪತ್ತು ಸಂಗ್ರಹಕ್ಕೇ ಹೊರತು ಮೂಕ ಪ್ರಾಣಿಗಳಿಗಲ್ಲ ಎಂದು ಕಿಡಿಕಾರಿದರು.

ರಾಜ್ಯದ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ಸಮ್ಮುಖದಲ್ಲೇ ಪ್ರಿಯಾಂಕಾ ವಾದ್ರಾ ಅವರು ಬಂಡೀಪುರ ರಾತ್ರಿ ಸಂಚಾರ ತೆರವು, ನೀಲಂಬೂರು ರೈಲ್ವೆ ಯೋಜನೆ ಬಗ್ಗೆ ಭರವಸೆ ನೀಡಿದ್ದಾರೆ. ಕೇರಳ ರಾಜ್ಯದ ಜನರ ಮತಕ್ಕಾಗಿ ಕರ್ನಾಟಕದ ಹಿತಾಸಕ್ತಿಯನ್ನು ಬಲಿ ಕೊಡುತ್ತಿದ್ದಾರೆ ಎಂದು ಇದೇ ವೇಳೆ ಆರೋಪಿಸಿದರು.

ನಂತರ ಪರಿಸರ ಪ್ರೇಮಿ ಜೋಸೆಫ್ ಹೂವರ್ ಮಾತನಾಡಿ, ಸಂಶೋಧಕರು ಎಂದಿಗೂ ವನ್ಯಜೀವಿಗಳ ಸಂಖ್ಯೆ ಮಿತಿ ಮೀರಿ ಹೆಚ್ಚಾಗಿದೆ ಎಂದು ಹೇಳಿಲ್ಲ. ಆನೆಗಳ ಸಂತತಿ ಹೆಚ್ಚಾಗಿದೆ ಎಂಬುದಕ್ಕೆ ದಾಖಲೆ ನೀಡಲಿ. ಇಂತಹ ಅವೈಜ್ಞಾನಿಕ ಪ್ರಯೋಗಗಳನ್ನು ಬಿಟ್ಟು ವನ್ಯಜೀವಿ ಸಂಘರ್ಷ ತಡೆಗೆ ಸೂಕ್ತ ಮಾರ್ಗೋಪಾಯ ಕೈಗೊಳ್ಳಲಿ ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಹಾಲಿನ ನಾಗರಾಜು, ಮಾದಪ್ಪ, ರಾಜಣ್ಣ, ಗಣೇಶ್ ಚಿರು, ಮಲೆಯೂರು ಮಹೇಂದ್ರ, ಪ್ರಭು, ಶ್ರೀಕಂಠ, ಮೋಹನ್, ಪ್ರಕಾಶ್ ಮತ್ತಿತರರು ಭಾಗವಹಿಸಿದ್ದರು.

ಇಂದು ಅಂಬೇಡ್ಕರ್ ಜಯಂತಿ, ಬಿಎಸ್‌ಪಿ ಸಂಸ್ಥಾಪನಾ ದಿನಾಚರಣೆ

ಚಾಮರಾಜನಗರ, ಏ.13– ಬಹುಜನ ಸಮಾಜ ಪಕ್ಷ(ಬಿಎಸ್‌ಪಿ) ಮೈಸೂರು ವಲಯ ಮಟ್ಟದಿಂದ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಹಾಗೂ ಬಿಎಸ್‌ಪಿ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಕೊಳ್ಳೇಗಾಲ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಸಂತೇಮರಹಳ್ಳಿಯಲ್ಲಿ ಏ.14ರಂದು ಬೆಳಗ್ಗೆ 11ಕ್ಕೆ ನಡೆಯಲಿದೆ ಎಂದು ಬಿಎಸ್‌ಪಿ ರಾಜ್ಯ ಕಾರ್ಯದರ್ಶಿ ಎನ್.ನಾಗಯ್ಯ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಬಿಎಸ್‌ಪಿ ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ, ರಾಜ್ಯ ಉಸ್ತುವಾರಿ ಗಂಗಾಧರ್ ಬಹುಜನ್, ಹ.ರಾ.ಮಹೇಶ್ ಸೇರಿದಂತೆ ಪಕ್ಷದ ವಿವಿಧ ಮುಂಚೂಣಿ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸುವರು ಎಂದರು.

ಈ ವೇಳೆ ರಾಜ್ಯ ಕಾರ್ಯಕಾರಣಿ ಸದಸ್ಯ ಬ್ಯಾಡಮೂಡ್ಲು ಬಸವಣ್ಣ, ಜಿಲ್ಲಾಧ್ಯಕ್ಷ ಬಾ.ಮ. ಕೃಷ್ಣಮೂರ್ತಿ, ರಾಮಸಮುದ್ರ ಪುಟ್ಟಸ್ವಾಮಿ, ಅಮಚವಾಡಿ ಪ್ರಕಾಶ್, ಚಂದ್ರಕಾಂತ ಇದ್ದರು.

ಶ್ರೀ ಯೋಗೇಶ್ವರಿ ಅಮ್ಮನವರ ಮೆರವಣಿಗೆ



ಗುಂಡ್ಲುಪೇಟೆ: ತಾಲೂಕಿನ ಚಿಕ್ಕತುಪ್ಪೂರು ಗ್ರಾಮದಲ್ಲಿ ಶ್ರೀ ಯೋಗೇಶ್ವರಿ ಅಮ್ಮನವರ ಮೆರವಣಿಗೆ ಅದ್ಧೂರಿಯಾಗಿ ನೆರವೇರಿತು.

ಗ್ರಾಮದ ಯೋಗೇಶ್ವರಿ ದೇವಾಲಯದಿಂದ ಉತ್ಸವ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಂಗಳವಾದ್ಯ ಹಾಗೂ ವಿವಿಧ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಸಲಾಯಿತು. ಈ ವೇಳೆ ಗ್ರಾಮಸ್ಥರು ದೇವಿಗೆ ಪೂಜೆ ಸಲ್ಲಿಸಿ, ಪುನೀತರಾದರು. ಗ್ರಾಮದ ಮುಖಂಡರು, ಯುವಕರು ಸೇರಿದಂತೆ ಅಪಾರ ಭಕ್ತರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಇಂದು ಡಾ.ಅಂಬೇಡ್ಕರ್ ಜನ್ಮ ದಿನಾಚರಣೆ



ಮಡಿಕೇರಿ, ಏ.13– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಸಮಾರಂಭವನ್ನು ಏ.14 ರಂದು ಬೆಳಗ್ಗೆ 10.30ಕ್ಕೆ ನಗರದ ಗಾಂಧಿ ಭವನದಲ್ಲಿ ಏರ್ಪಡಿಸಲಾಗಿದೆ.

ಸಭಾ ಕಾರ್ಯಕ್ರಮಕ್ಕೂ ಮುನ್ನ ಅಂದು ಬೆಳಗ್ಗೆ 8 ಗಂಟೆಗೆ ವಿವಿಧ ಕಲಾತಂಡದೊಂದಿಗೆ ಜನರಲ್ ತಿಮ್ಮಯ್ಯ ವೃತ್ತದಿಂದ ಆರಂಭವಾಗಿ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದವರೆಗೆ ಮೆರವಣಿಗೆ ನಡೆಯಲಿದೆ.

ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು, ಮಡಿಕೇರಿ ಕ್ಷೇತ್ರದ ಶಾಸಕ ಡಾ.ಮಂತರ್ ಗೌಡ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರೂ ಆದ ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ, ಸಂಸದ ಯದುವೀರ್, ರಾಜ್ಯಸಭಾ ಸದಸ್ಯ ಅಜಯ್ ಮಾಕನ್, ವಿಧಾನ ಪರಿಷತ್ ಸದಸ್ಯರಾದ ಎಂ.ಪಿ. ಸುಜಾ ಕುಶಾಲಪ್ಪ, ಎಸ್.ಎಲ್. ಭೋಜೇಗೌಡ, ಡಾ.ಧನಂಜಯ ಸರ್ಜಿ, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷ ಸಿ.ಎಸ್.ಅರುಣ್ ಮಾಚಯ್ಯ, ನಗರಸಭೆ ಅಧ್ಯಕ್ಷೆ ಪಿ.ಕಲಾವತಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ತೀತಿರ ಧರ್ಮಜ ಉತ್ತಪ್ಪ, ಕೊಡಗು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಮಂಡ್ಯ ಜಿಲ್ಲೆಯ ಹೆಚ್.ಕೆ.ವೀರಣ್ಣ ಗೌಡ ಪದವಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ.ಸಂದೀಪ್ ಎಸ್.ರಾವಣಿ ಕರ್, ಡಿಸಿ ಎಸ್.ಜೆ.ಸೋಮಶೇಖರ್, ಎಸ್ಪಿ ಆರ್.ಎನ್.ಬಿಂದುಮಣಿ, ಜಿ.ಪಂ. ಸಿಇಒ ಆನಂದ್ ಪ್ರಕಾಶ್ ಮೀನಾ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶೇಖರ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

ಇಂದು ಬಾಬೂಜಿ, ಬಾಬಾ ಸಾಹೇಬರ ಜಯಂತಿ



ಮಡಿಕೇರಿ, ಏ.13– ತಾಲೂಕು ಆಡಳಿತ, ತಾಲೂಕು ಪಂಚಾಯತ್, ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆ, ವಿರಾಜಪೇಟೆ ತಾಲೂಕು ಹಾಗೂ ಪೊನ್ನಂಪೇಟೆ ಪಟ್ಟಣ ಪಂಚಾಯಿತಿ ವತಿಯಿಂದ ಭಾರತರತ್ನ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಹಾಗೂ ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನ್ ರಾಂ ಅವರ 119ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಏ.14 ರಂದು ಬೆಳಗ್ಗೆ 10.30ಕ್ಕೆ ಪೊನ್ನಂಪೇಟೆ ಸರ್ಕಾರಿ ಜೂನಿಯರ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ವಿರಾಜಪೇಟೆ ಹಾಗೂ ಪೊನ್ನಂಪೇಟೆ ತಾಲೂಕು ಮಟ್ಟದ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಪೊನ್ನಂಪೇಟೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಮನವಿ ಮಾಡಿದ್ದಾರೆ.

ಮುಂಗಾರಿಗೆ ಸಮರ್ಪಕ ರಸಗೊಬ್ಬರ ಪೂರೈಸಿ

ಜಿಲ್ಲಾಧಿಕಾರಿ ಸೋಮಶೇಖರ್ ಸೂಚನೆ



ಮಡಿಕೇರಿ ಏ.13– ಮುಂಗಾರು ಕೃಷಿಗೆ ಬೇಡಿಕೆ ಅನುಗುಣವಾಗಿ ಸಮರ್ಪಕವಾಗಿ ರಸಗೊಬ್ಬರ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎಸ್.ಜೆ ಸೋಮಶೇಖರ್, ಪೂರೈಕೆದಾರರು ಹಾಗೂ ವಿತರಕರಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಸಗೊಬ್ಬರ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯಲ್ಲಿ ಯೂರಿಯಾ, ಡಿಎಪಿ ಮತ್ತು ಎಂಒಪಿ ರಸಗೊಬ್ಬರಕ್ಕೆ ಬೇಡಿಕೆ ಇದ್ದು, ಅಗತ್ಯ ಪ್ರಮಾಣದಲ್ಲಿ ದಾಸ್ತಾನು ಮಾಡಿಕೊಳ್ಳಬೇಕು. ಜೊತೆಗೆ ಮಣ್ಣಿನ ಆರೋಗ್ಯದ ಬಗ್ಗೆ ತಿಳಿದು ಅಗತ್ಯದಷ್ಟು ಮಾತ್ರ ಬಳಕೆ ಮಾಡಬೇಕೆಂಬ ಮಾಹಿತಿಯನ್ನು ರೈತರಿಗೆ ಮನವರಿಕೆ ಮಾಡಿಕೊಡಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು, ಮಾರಾಟಗಾರರು ಮತ್ತು ವಿತರಕರು ಸಮನ್ವಯದಿಂದ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಕೃಷಿ, ತೋಟಗಾರಿಕೆ, ಕಾಫಿ ಮಂಡಳಿ ಹಾಗೂ ಸಾಂಬಾರ ಮಂಡಳಿ ವತಿಯಿಂದ ಕೃಷಿಕರು ಯಾವೆಲ್ಲಾ ರಸಗೊಬ್ಬರ ಬಳಸಬೇಕು ಎಂಬುದರ ಬಗ್ಗೆ ಜಾಗೃತಿ ಮೂಡಿಸಬೇಕು. ಜಿಲ್ಲೆಯಲ್ಲಿ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗದಂತೆ ಗಮನಹರಿಸಬೇಕು. ಏನಾದರೂ ಸಮಸ್ಯೆಗಳಿದ್ದಲ್ಲಿ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಈ ವೇಳೆ ಯೂರಿಯಾ, ಡಿಎಪಿ, ಎಂಒಪಿ, ಎನ್‌ಪಿಕೆ, ಕಾಂಪ್ಲೆಕ್ಸ್, ಎಸ್‌ಪಿ ರಸಗೊಬ್ಬರ ದಾಸ್ತಾನು ಬಗ್ಗೆ ಮಾಹಿತಿ ನೀಡಿದ ಕೃಷಿ ಇಲಾಖೆ ಜಂಟಿ ನಿರ್ದೇಶಕ ಬಿ.ಎಸ್. ಚಂದ್ರಶೇಖರ್, ವಿತರಕರು ಹಾಗೂ ಮಾರಾಟಗಾರರು ನಕಲಿ ಹಾಗೂ ಅಸಲಿ ರಸಗೊಬ್ಬರದ ಬಗ್ಗೆ ರೈತರಿಗೆ ಅರಿವು ಮೂಡಿಸುವ ಮೂಲಕ ಅವರು ಮೋಸ ಹೋಗದಂತೆ ಸಹಾಯ ಮಾಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಕೃಷಿ ಇಲಾಖೆ ಉಪ ನಿರ್ದೇಶಕ ಡಾ.ಡಿ.ಎಸ್.ಸೋಮಶೇಖರ್, ಸಹಾಯಕ ಕೃಷಿ ನಿರ್ದೇಶಕ ಪರಮೇಶ್, ಸೋಮವಾರಪೇಟೆ ಸಹಾಯಕ ಕೃಷಿ ನಿರ್ದೇಶಕ ಕೆ.ಪಿ. ವೀರಣ್ಣ ಮಡಿಕೇರಿ ತಾಂತ್ರಿಕ ಅಧಿಕಾರಿ ಎಂ.ವಿ. ವರದರಾಜು, ರಸಗೊಬ್ಬರ ಕಂಪನಿ ಸರಬರಾಜುದಾರರು ಹಾಗೂ ಮಾರಾಟಗಾರರು, ವಿತರಕರು ಭಾಗವಹಿಸಿದ್ದರು.

ಕನ್ನಡ ಭಾಷೆ ಉಳಿಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ

'ಹೊಂಬೆಳಕು ಕಿರಣ-242' ಮಾಸಿಕ ತತ್ವ ಚಿಂತನಾಗೋಷ್ಠಿಯಲ್ಲಿ ಲೇಖಕಿ ಜಯಲಕ್ಷ್ಮೀ ಅಭಿಮತ

ವಿರಾಜಪೇಟೆ, ಏ.13– ಸಹಸ್ರಾರು ಭಾಷೆಗಳು ಜಗತ್ತಿನಲ್ಲಿದ್ದರೂ ಕನ್ನಡ ಭಾಷೆಗೆ ವಿಶೇಷವಾದ ಸ್ಥಾನಮಾನವಿದೆ. ಆದ್ದರಿಂದ ನಮ್ಮ ಭಾಷೆಯನ್ನು ಕಾಪಾಡಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಮಡಿಕೇರಿಯ ಲೇಖಕಿ ಕೆ.ಜಯಲಕ್ಷ್ಮಿ ಹೇಳಿದರು.

ವಿರಾಜಪೇಟೆ ಸಮೀಪದ ಅರಮೇರಿ ಕಳಂಚೇರಿ ಮಠದ ಶ್ರೀ ಲಿಂಗರಾಜೇಂದ್ರ ಭವನದಲ್ಲಿ ನಡೆದ 'ಹೊಂಬೆಳಕು ಕಿರಣ–242' ಮಾಸಿಕ ತತ್ವ ಚಿಂತನಾಗೋಷ್ಠಿ ಕಾರ್ಯಕ್ರಮದಲ್ಲಿ 'ಭಾಷಾ ಬೆಳವಣಿಗೆಯಲ್ಲಿ ಸಾಮಾಜಿಕ ಮಾಧ್ಯಮಗಳ ಪಾತ್ರ' ಕುರಿತು ಮಾತನಾಡಿದ ಅವರು, ಮನುಷ್ಯನ ಅತಿದೊಡ್ಡ ಸಂಶೋಧನೆ ಭಾಷೆ. ಇದನ್ನು ಬೆಳಕಿಗೆ ಹೋಲಿಸಲಾಗಿದೆ. ಆದರೆ, ಸಾಮಾಜಿಕ ಮಾಧ್ಯಮಗಳ ಭರಾಟೆಯಿಂದ ಪುಸ್ತಕ ಓದುವ ಹವ್ಯಾಸ ಕಡಿಮೆಯಾಗಿದೆ. ಇಂಗ್ಲಿಷ್‌ನಲ್ಲಿ ಮಾತನಾಡುವುದೇ ಹೆಗ್ಗಳಿಕೆ ಎಂಬ ಭ್ರಮೆಯಿಂದ ಕನ್ನಡ ಭಾಷೆ ಗೌರವಕ್ಕೆ ಚ್ಯುತಿ ತರುವುದು ಸರಿಯಲ್ಲ. ತಮ್ಮ ಮಕ್ಕಳಿಗೆ ಪುಸ್ತಕ ಓದುವ ಹವ್ಯಾಸ ರೂಢಿಸಬೇಕು ಎಂದು ಸಲಹೆ ನೀಡಿದರು.



ಕಾರ್ಯಕ್ರಮ ಉದ್ಘಾಟಿಸಿದ ಕೊಡಗು ಜಾನಪದ ಪರಿಷತ್ತಿನ ಅಧ್ಯಕ್ಷರು, ಶಕ್ತಿ ದಿನಪತ್ರಿಕೆಯ ಸಲಹಾ ಸಂಪಾದಕರಾದ ಬಿ.ಜಿ. ಅನಂತಶಯನ ಮಾತನಾಡಿದರು.

ಸಾನಿಧ್ಯ ವಹಿಸಿದ್ದ ಅರಮೇರಿ ಕಳಂಚೇರಿ ಶ್ರೀ ಮಠದ ಪೀಠಾಧಿಪತಿಗಳಾದ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಅವರು, ಕೆ.ಜಯಲಕ್ಷ್ಮಿ ಅವರ 'ನಡೆದಷ್ಟೂ ದಾರಿ' ಪುಸ್ತಕ ಬಿಡುಗಡೆ ಮಾಡಿದರು. ಸಾಹಿತಿ, ಶಿಕ್ಷಕಿ ಸುನೀತಾ ಲೋಕೇಶ್, ಉಪನ್ಯಾಸಕರಾದ ಸುಶ್ಮಿತಾ, ಕಿಗ್ಗಾಲು ಹರೀಶ್, ಕೊಡಗು ಜಿಲ್ಲಾ ಕಸಾಪ ಅಧ್ಯಕ್ಷ ಕೇಶವ ಕಾಮತ್, ಮಾಜಿ ಅಧ್ಯಕ್ಷ ಲೋಕೇಶ್ ಸಾಗರ್, ಸಮರ್ಥ, ಕು.ಮಿನುಗು ಇದ್ದರು.

ಪಾಳು ಬಾವಿಯಿಂದ ಕಾಡಾನೆ ರಕ್ಷಣೆ



ಮಡಿಕೇರಿ/ನಾಪೋಕ್ಲು, ಏ.13– ಸಂಪಾಜೆ ಸಮೀಪದ ಪೆರಾಜೆ ಕಲ್ಚರ್ಪೆಯಲ್ಲಿ ಆಹಾರ ಅರಸಿ ಬಂದು ಪಾಳು ಬಾವಿಗೆ ಬಿದ್ದಿದ್ದ ಕಾಡಾನೆಯನ್ನು ರಕ್ಷಿಸಲಾಗಿದೆ.

ಭಾನುವಾರ ರಾತ್ರಿ ಕಾಡಾನೆ ಘೀಳಿಡುವ ಶಬ್ದ ಕೇಳಿದ ಸ್ಥಳೀಯ ನಿವಾಸಿಗಳು ಈ ಕುರಿತು ಅರಣ್ಯ ಇಲಾಖೆಗೆ ಮಾಹಿತಿ ನೀಡಿದರು. ಅರಣ್ಯ ಇಲಾಖೆ ಸಿಬ್ಬಂದಿ ಮತ್ತು ಅಧಿಕಾರಿಗಳು ಸ್ಥಳಕ್ಕಾಗಮಿಸಿ, ಅಗ್ನಿಶಾಮಕ ದಳದ ಸಿಬ್ಬಂದಿ ಸಹಾಯದೊಂದಿಗೆ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಡ್ರೋನ್ ಮೂಲಕ ಆನೆಯ ಸುರಕ್ಷತೆ ಗಮನಿಸಿಕೊಂಡು ಅದು ಹೊರಬರಲು ಜೆಸಿಬಿ ಮೂಲಕ ಅನುವು ಮಾಡಿ ಕೊಡಲಾಯಿತು. ನಿರಂತರ ಕಾರ್ಯಾಚರಣೆಯಿಂದ ಸೋಮವಾರ ಆನೆಯನ್ನು ರಕ್ಷಿಸಲಾಯಿತು. ಈ ಸಂದರ್ಭದಲ್ಲಿ ಅರಣ್ಯ ಇಲಾಖೆ ಸಿಸಿಎಫ್ ಕರಿಕಾಳನ್, ಡಿಎಫ್‌ಓ ಅಂಥೋನಿ, ಮರಿಯಪ್ಪ, ಎಸಿಎಫ್‌ಗಳಾದ ಪ್ರಶಾಂತ್ ಪೈ, ಪುತ್ತೂರು ಎಸಿಎಫ್ ಸುಬ್ಬಯ್ಯ ನಾಯ್ಕ ರೇಂಜರ್‌ಗಳಾದ ಕಿರಣ್, ವಿಮಲ್ ಬಾಬು ಮತ್ತು ಸಿಬ್ಬಂದಿ ಇದ್ದರು.

ಏ.16ಕ್ಕೆ 7ನೇ ಕೊಡವ ಪುಸ್ತಕ ಪತ್ತಾಯ

ಮಡಿಕೇರಿ, ಏ.13– ಕೊಡವ ಸಾಹಿತ್ಯ ಅಕಾಡೆಮಿಯ '7ನೇ ಕೊಡವ ಪುಸ್ತಕ ಪತ್ತಾಯ' ಕಾರ್ಯಕ್ರಮ ಏ.16 ರಂದು ಸುಂಟಿಕೊಪ್ಪ ಕೊಡವ ಸಮಾಜದಲ್ಲಿ ನಡೆಯಲಿದೆ. ಕೊಡವ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸುಂಟಿಕೊಪ್ಪ ಕೊಡವ ಸಮಾಜದ ಅಧ್ಯಕ್ಷ ಚೇಂದ್ರಮಡ ಕರುಂಬಯ್ಯ ಅಧ್ಯಕ್ಷತೆ ವಹಿಸಲಿದ್ದಾರೆ.

ಹಿರಿಯರು ಹಾಗೂ ಸಮಾಜ ಸೇವಕರಾದ ಪುಡಿಯಂಡ ಮುತ್ತಣ್ಣ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ವೇಳೆ ಕುಶಾಲನಗರ ಕೊಡವ ಕಲ್ಚರಲ್ ಅಸೋಸಿಯೇಷನ್ ಅಧ್ಯಕ್ಷ ಕರ್ನಂಡ ಅರುಣ್ ಮೊಣ್ಣಪ್ಪ 'ಕೊಡವ ಪುದಿಯಾಂಡ್, ಬಿಸು ಚಂಗ್ರಾಂದಿ' ಕುರಿತು ವಿಚಾರ ಮಂಡಿಸಲಿದ್ದಾರೆ.

ಪಾರ್ವತಿ ನಿಧನ



ನಾಪೋಕ್ಲು: ಇಲ್ಲಿಗೆ ಸಮೀಪದ ಚೆರಿಯಪರಂಬು ನಿವಾಸಿ, ದಿವಂಗತ ಕೃಷ್ಣಯ್ಯ ಅವರ ಧರ್ಮಪತ್ನಿ ಪಾರ್ವತಿ (77) ಅವರು ಭಾನುವಾರ ನಿಧನರಾದರು. ಮೃತರು ಓರ್ವ ಪುತ್ರ, ಮೂವರು ಪುತ್ರಿಯರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಜರುಗಿತು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಇನ್ನು 525 ಅಂಕ ಪರಿಗಣನೆ

ಕರಡು ಅಧಿಸೂಚನೆ ಹೊರಡಿಸಿದ ಶಿಕ್ಷಣ ಇಲಾಖೆ

ಬೆಂಗಳೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ 525 ಅಂಕ ನೀಡುವ ನಿಯಮ ಬದಲಾವಣೆ ಮಾಡಿರುವ ವಿಚಾರದಲ್ಲಿ ಶಿಕ್ಷಣ ಇಲಾಖೆ ಕರಡು ಅಧಿಸೂಚನೆ ಹೊರಡಿಸಿದೆ. ಕರಡು ಅಧಿಸೂಚನೆಗೆ ಆಕ್ಷೇಪಣೆ ಸಲ್ಲಿಸಲು 7 ದಿನ ಅವಕಾಶ ನೀಡಲಾಗಿದ್ದು ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ಅಧಿಸೂಚನೆಯಲ್ಲಿ 525 ಅಂಕಗಳ ಅನುಷ್ಠಾನ ಹೇಗೆ ನಡೆಯಲಿದೆ ಎಂಬುದನ್ನು ತಿಳಿಸಲಾಗಿದೆ. ಅದರಂತೆ ತೃತೀಯ ಭಾಷೆ ವಿಷಯದಲ್ಲಿ ಅಂಕಗಳ ಬದಲಾಗಿ ಗ್ರೇಡ್ ಸಿಸ್ಟಮ್ ವಿವರಿಸಲಾಗಿದೆ.

ಈ ಮೊದಲು 625 ಅಂಕಗಳಿಗೆ ಪರೀಕ್ಷೆ ನಡೆಸಲಾಗುತ್ತಿತ್ತು. ಈಗ ತೃತೀಯ ಭಾಷೆಗೆ ನೀಡಲಾಗುತ್ತಿದ್ದ 100 ಅಂಕ ತೆಗೆಯಲಾಗಿದೆ. ಹಾಗಾಗಿ ಐದು ಭಾಷೆಯ ವಿಷಯಗಳಿಗೆ 525 ಅಂಕಗಳಿಗೆ ಫಲಿತಾಂಶ ನೀಡಲಾಗುತ್ತದೆ. ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ಒಟ್ಟು 525 ಅಂಕಗಳಲ್ಲಿ ಕನಿಷ್ಠ 173 ಅಂಕಗಳನ್ನು ಗಳಿಸಬೇಕು. ಅಂದರೆ ಶೇ.33ರಷ್ಟು ಅಂಕ ಗಳಿಸಬೇಕು. ಅಲ್ಲದೇ ಪ್ರತಿ ವಿಷಯದಲ್ಲಿ ಕನಿಷ್ಠ ಶೇ.30 ರಷ್ಟು ಅಂಕಗಳನ್ನು ಪಡೆಯುವುದು ಕಡ್ಡಾಯವಾಗಲಿದೆ. ತೃತೀಯ ಭಾಷೆಯ ಪರೀಕ್ಷೆಯಲ್ಲಿ ಅಂಕಗಳ ಬದಲಾಗಿ ಗ್ರೇಡ್ ನೀಡಲಾಗುತ್ತದೆ. 80–100 ರಷ್ಟು ಅಂಕ ಗಳಿಸಿದರೆ ಎ ಗ್ರೇಡ್, 50–79 ರಷ್ಟು ಅಂಕ ಗಳಿಸಿದ್ರೆ ಬಿ ಗ್ರೇಡ್ 49 ರಷ್ಟು ಅಂಕ ಗಳಿಸಿದ್ರೆ ಸಿ ಗ್ರೇಡ್ ಅಂತ ಕೊಡಲಾಗುತ್ತದೆ. ಹೊಸ ನಿಯಮ 2025–26ನೇ ಸಾಲಿನಿಂದಲೇ ಜಾರಿಗೆ ಬರಲಿದೆ.

ಎಸ್‌ಆರ್‌ಹೆಚ್‌ಗೆ ರಾಯಲ್ ಗೆಲುವು



ಹೈದರಾಬಾದ್, ಏ.13– ನಾಯಕ ಇಶಾನ್ ಕಿಶನ್ ಅವರ ಅರ್ಧಶತಕ ಹಾಗೂ ಪ್ರಫುಲ್ ಹಿಂಗೆ ಮತ್ತು ಸಕೀಬ್ ಹೊಸೈನ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಬಲಿಷ್ಠ ರಾಜಸ್ಥಾನ ರಾಯಲ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ 57 ರನ್‌ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ಎಸ್‌ಆರ್‌ಹೆಚ್ 2ನೇ ಗೆಲುವು ಸಾಧಿಸಿದರೇ, ರಿಯಾನ್ ಪರಾಗ್ ನೇತೃತ್ವದ ರಾಜಸ್ಥಾನ ರಾಯಲ್ಸ್‌ಗೆ ಟೂರ್ನಿಯಲ್ಲಿ ಮೊದಲ ಸೋಲು ಅನುಭವಿಸಿತು.

ಇಲ್ಲಿನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ಸ್ ಹೈದರಾಬಾದ್ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 216 ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. ಬಳಿಕ 217 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ರಾಜಸ್ಥಾನ್ ರಾಯಲ್ಸ್ 19 ಓವರ್‌ಗಳಲ್ಲಿ 159 ರನ್‌ಗಳಿಗೆ ಆಲೌಟಾಯಿತು. ಆ ಮೂಲಕ ಎಸ್‌ಆರ್‌ಹೆಚ್ ಗೆಲುವಿನ ನಗೆ ಬೀರಿತು. ಮೊದಲ ಓವರ್‌ನಲ್ಲೇ ದಾಖಲೆಯ 3 ವಿಕೆಟ್ ಕಬಳಿಸಿದ ಪ್ರಫುಲ್ ಸನ್‌ರೈ ಸರ್ಸ್ ಹೈದರಾಬಾದ್ ತಂಡದ ಗೆಲುವಿನ ರೂವಾರಿ ಎನಿಸಿಕೊಂಡರು.

ಕಠಿಣ ಗುರಿ ಬೆನ್ನತ್ತಿದ ರಾಜಸ್ಥಾನ ರಾಯಲ್ಸ್ ಮೊದಲ ಓವರ್‌ನಲ್ಲೇ ಪ್ರಫುಲ್ ಹಿಂಗೆ ಮಾರಕ ದಾಳಿಗೆ ತಬ್ಬಿಬ್ಬಾಗಿ ಹೋಯಿತು. ಐಪಿಎಲ್‌ಗೆ ಪಾದಾರ್ಪಣೆ ಮಾಡಿದ ಮೊದಲ ಓವರ್‌ನಲ್ಲೇ ವೈಭವ್ ಸೂರ್ಯವಂಶಿ, ಧ್ರುವ್ ಜುರೆಲ್ ಹಾಗೂ ಲೂನ್ ಡ್ರೆ ಪ್ರಿಟೋರಿಯಸ್ ಮೂವ ರನ್ನೂ ಖಾತೆ ತೆರೆಯುವ ಮೊದಲೇ ಪೆವಿಲಿಯನ್ನಿಗಟ್ಟುವಲ್ಲಿ ಯಶಸ್ವಿಯಾದರು. ಅಲ್ಲದೇ ಐಪಿಎಲ್ ಇತಿಹಾಸದಲ್ಲೇ ಇನ್ನಿಂಗ್ಸ್‌ನ ಮೊದಲ ಓವರ್‌ನಲ್ಲಿ 3 ವಿಕೆಟ್ ಕಬಳಿಸಿದ ಮೊದಲ ಬೌಲರ್ ಎನ್ನುವ ಹಿರಿಮೆಗೆ ಪ್ರಫುಲ್ ಹಿಂಗೆ ಪಾತ್ರರಾದರು. ಇನ್ನು ಇಂಪ್ಯಾಕ್ಟ್ ಆಟಗಾರನಾಗಿ ಕಣಕ್ಕಿಳಿದ ಸಕೀಬ್ ಹುಸೈನ್ ರಾಯಲ್ಸ್ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್‌ಗೆ ಪೆವಿಲಿಯನ್ ಹಾದಿ ತೋರಿಸಿದರು. ರಿಯಾನ್ ಪರಾಗ್ 4 ರನ್ ಗಳಿಸಿ ಪ್ರಫುಲ್‌ಗೆ ನಾಲ್ಕನೇ ಬಲಿಯಾದರು. ಆಗ ರಾಜಸ್ಥಾನ ರಾಯಲ್ಸ್ ತಂಡದ ಮೊತ್ತ 3 ಓವರ್ ಅಂತ್ಯಕ್ಕೆ 5 ವಿಕೆಟ್ ನಷ್ಟಕ್ಕೆ ಕೇವಲ 9 ರನ್ ಆಗಿತ್ತು.

ಈ ವೇಳೆ 6ನೇ ವಿಕೆಟ್‌ಗೆ ಜೊತೆಯಾದ ಡೊನೊವನ್ ಪೆರೆರಿಯಾ ಹಾಗೂ ಆಲ್ರೌಂಡರ್ ರವೀಂದ್ರ ಜಡೇಜಾ ಶತಕದ ಜತೆಯಾಟವಾಡುವ ಮೂಲಕ ತಂಡಕ್ಕೆ ಆಸರೆಯಾದರು. ಈ ಜೋಡಿ 72 ಎಸೆತಗಳಲ್ಲಿ 118 ರನ್‌ಗಳ ಜತೆಯಾಟವಾಡಿತು. ಈ ವೇಳೆ ಉತ್ತಮವಾಗಿ ಆಡುತ್ತಿದ್ದ ಡೊನೊವನ್ ಪೆರೆರಿಯಾ 44 ಎಸೆತಗಳಲ್ಲಿ 7 ಬೌಂಡರಿ, 3 ಸಿಕ್ಸರ್ ಒಳಗೊಂಡ 69 ರನ್ ಗಳಿಸಿ ಔಟಾದರೇ, ಜಡೇಜಾ 45, ತುಷಾರ್ ದೇಶಪಾಂಡೆ 25 ರನ್ ಗಳಿಸಿದರು. ಎಸ್‌ಆರ್‌ಹೆಚ್ ಪರ ಪ್ರಫುಲ್ ಹಿಂಗೆ, ಸಕೀಬ್ ಹೊಸೈನ್ ತಲಾ 4, ಇಶಾನ್ ಮಲಿಂಗಾ 2 ವಿಕೆಟ್ ಕಬಳಿಸಿದರು.

ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಹೈದರಾಬಾದ್ ಪರ ಮೊದಲ ಎಸೆತದಲ್ಲೇ ಅಭಿಷೇಕ್ ಶರ್ಮಾ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಟ್ರಾವಿಸ್ ಹೆಡ್ ಕೂಡ 18 ರನ್ ಗಳಿಸಿ ನಿರ್ಗಮಿಸಿದರು. ಆದರೆ ನಾಯಕನಿಗೆ ತಕ್ಕ ಆಟವಾಡಿದ ಇಶಾನ್ ಕಿಶನ್ ಕೇವಲ 44 ಎಸೆತಗಳಲ್ಲಿ 6 ಸಿಕ್ಸರ್, 8 ಬೌಂಡರಿ ಒಳಗೊಂಡ 91 ರನ್ ಗಳಿಸಿ ವಿಕೆಟ್ ಒಪ್ಪಿಸಿದರೇ, ಇವರಿಗೆ ಉತ್ತಮ ಸಾಥ್ ನೀಡಿದ ಹೆನ್ರಿಚ್ ಕ್ಲಾಸೆನ್ ಬಿರುಸಿನ 40 ರನ್ ಗಳಿಸಿ ಔಟಾದರು. ಉಳಿದಂತೆ ನಿತೀಶ್ ಕುಮಾರ್ ರೆಡ್ಡಿ 28, ಸಲಿಲ್ ಆರೋರ 24 ರನ್ ಗಳಿಸಿ ತಂಡದ ಮೊತ್ತವನ್ನು 200ರ ಗಡಿ ದಾಟಿಸಿದರು. ರಾಜಸ್ಥಾನದ ಪರ ಜೋಫ್ರಾ ಆರ್ಚರ್ 2, ಸಂದೀಪ್ ಶರ್ಮಾ, ತುಷಾರ್ ದೇಶಪಾಂಡೆ, ರಿಯಾನ್ ಪರಾಗ್ ಹಾಗೂ ನಾಂದ್ರೆ ಬರ್ಗರ್ ಒಂದೊಂದು ವಿಕೆಟ್ ಉರುಳಿಸಿದರು. ಪ್ರಫುಲ್ ಹಿಂಗೆ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಗಲ್ಫ್ ದೇಶಗಳ ಯಾವುದೇ ಬಂದರು ಸುರಕ್ಷಿತವಲ್ಲ

ಅಮೆರಿಕದ ಕ್ರಮ ಕಡಲ್ಗಳ್ಳತನಕ್ಕೆ ಸಮ: ಇರಾನ್ ಖಡಕ್ ವಾರ್ನಿಂಗ್

ಟೆಹ್ರಾನ್: ಕದನ ವಿರಾಮ ಒಪ್ಪಂದಕ್ಕೆ ಬರಲು ವಿಫಲವಾದ ನಂತರ, ಹಾರ್ಮುಜ್ ಜಲಸಂಧಿ ಮೂಲಕ ಸಾಗುವ ಹಡಗುಗಳಿಗೆ ದಿಗ್ಬಂಧನ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ ಬೆನ್ನಲ್ಲೇ, ಇರಾನ್ ಸೋಮವಾರ ಪರ್ಷಿಯನ್ ಕೊಲ್ಲಿ ಮತ್ತು ಒಮಾನ್ ಕೊಲ್ಲಿಯ ಯಾವುದೇ ಬಂದರುಗಳ ಮೇಲೆ ಯಾವುದೇ ಕ್ಷಣದಲ್ಲೂ ದಾಳಿ ಮಾಡುವುದಾಗಿ ಪ್ರತಿಜ್ಞೆ ಮಾಡಿದೆ.

ತನ್ನ ಬಂದರುಗಳ ಮೇಲೆ ದಿಗ್ಬಂಧನ ಹೇರುವ ಅಮೆರಿಕದ ಬೆದರಿಕೆಯನ್ನು ಇರಾನ್ ಸೋಮವಾರ ಕಟುವಾಗಿ ಟೀಕಿಸಿದೆ, ಒಂದು ವೇಳೆ ದಿಗ್ಬಂಧನ ವಿಧಿಸುವ ದುಸ್ಸಾಹಸಕ್ಕೆ ಕೈ ಹಾಕಿದರೆ ಪರ್ಷಿಯನ್ ಕೊಲ್ಲಿ ಪ್ರದೇಶದಾದ್ಯಂತ ಸಮುದ್ರ ಭದ್ರತೆಗೆ ಗಂಭೀರ ಅಪಾಯವಿದೆ ಎಂದು ಎಚ್ಚರಿಸಿದೆ.

ಪರ್ಷಿಯನ್ ಕೊಲ್ಲಿ ಮತ್ತು ಒಮಾನ್ ಸಮುದ್ರದಲ್ಲಿನ ಸಮುದ್ರ ಭದ್ರತೆಯನ್ನು ಸಾಮೂಹಿಕವಾಗಿ ಎತ್ತಿಹಿಡಿಯಬೇಕು, ಇಸ್ಲಾಮಿಕ್ ಗಣರಾಜ್ಯದ ಸಶಸ್ತ್ರ ಪಡೆಗಳು ತನ್ನ ಪ್ರಾದೇಶಿಕ ನೀರಿನಲ್ಲಿ ದೇಶದ ಹಕ್ಕುಗಳು ಮತ್ತು ಸಾರ್ವಭೌಮತ್ವವನ್ನು ಕಾಪಾಡುವುದನ್ನು ನೈಸರ್ಗಿಕ ಮತ್ತು ಕಾನೂನುಬದ್ಧ ಕರ್ತವ್ಯ ಎಂದು ಪರಿಗಣಿಸುತ್ತವೆ ಎಂದು ಎಂದು ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ ಬ್ರಾಡ್‌ಕಾಸ್ಟಿಂಗ್ ವರದಿ ಮಾಡಿದೆ.

ಈ ಪ್ರದೇಶದ ಯಾವುದೇ ಬಂದರು ಸುರಕ್ಷಿತವಾಗಿರುವುದಿಲ್ಲ' ಎಂದು ಇರಾನಿನ ಮಿಲಿಟರಿ ಮತ್ತು ಕ್ರಾಂತಿಕಾರಿ ಗಾರ್ಡ್ ಪ್ರಕಟಣೆಯಲ್ಲಿ ತಿಳಿಸಿರುವುದಾಗಿ ಹೇಳಿದೆ.

ಇರಾನ್ ತನ್ನ ನೀರಿನಲ್ಲಿ ಭದ್ರತೆ ಜಾರಿಗೊಳಿಸುವುದನ್ನು ಮುಂದುವರಿಸುತ್ತದೆ ಮತ್ತು ವೈರಿ ದೇಶಗಳಿಗೆ ಸಂಬಂಧಿಸಿದ ಹಡಗುಗಳನ್ನು ಆಯಕಟ್ಟಿನ ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗಲು ಅನುಮತಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ಒತ್ತಿಹೇಳಲಾಗಿದೆ. ಆದರೆ ಇತರ ಹಡಗುಗಳಿಗೆ ಇರಾನಿನ ಅಧಿಕಾರಿಗಳು ನಿಗದಿಪಡಿಸಿದ ನಿಯಮಗಳಿಗೆ ಅನುಸಾರವಾಗಿ ಸಾಗಣೆಗೆ ಅವಕಾಶ ನೀಡಲಾಗುವುದು ಎಂದು ಪುನರುಚ್ಚರಿಸಿದೆ.

ಇರಾನ್ ಇಸ್ಲಾಮಿಕ್ ಗಣರಾಜ್ಯದ ಪ್ರಾದೇಶಿಕ ನೀರಿನಲ್ಲಿ ಸಶಸ್ತ್ರ ಪಡೆಗಳಿಂದ ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು ದೃಢನಿಶ್ಚಯದಿಂದ ಮುಂದುವರಿಯುತ್ತದೆ ಮತ್ತು ಪದೇ ಪದೇ ಘೋಷಿಸಿದಂತೆ, ಶತ್ರು-ಸಂಯೋಜಿತ ಹಡಗುಗಳು ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವ ಹಕ್ಕನ್ನು ಹೊಂದಿರುವುದಿಲ್ಲ ಮತ್ತು ಹೊಂದುವುದೂ ಇಲ್ಲ ಇತರ ಹಡಗುಗಳು ಇಸ್ಲಾಮಿಕ್ ಗಣರಾಜ್ಯದ ಇರಾನ್ ಸಶಸ್ತ್ರ ಪಡೆಗಳ ನಿಯಮಗಳಿಗೆ ಒಳಪಟ್ಟು ಜಲ ಸಂಧಿಯ ಮೂಲಕ ಹಾದುಹೋಗಲು ಅನುಮತಿಸಲಾಗುವುದು ಎಂದು ಪ್ರಕಟಣೆಯಲ್ಲಿ ಉಲ್ಲೇಖಿಸಲಾಗಿದೆ

ಅಮೆರಿಕದ ಕ್ರಮಗಳನ್ನು ಕಾನೂನುಬಾಹಿರ ಎಂದು ಟೀಕಿಸಿದ ಇರಾನ್, ಅಂತರರಾಷ್ಟ್ರೀಯ ನೀರಿನಲ್ಲಿ ಹಡಗುಗಳ ಚಲನೆಯ ಮೇಲಿನ ನಿರ್ಬಂಧಗಳು ಕಡಲ್ಗಳ್ಳತನಕ್ಕೆ ಸಮನಾಗಿರುತ್ತದೆ ಮತ್ತು ಅಂತರರಾಷ್ಟ್ರೀಯ ಮಾನದಂಡಗಳನ್ನು ಉಲ್ಲಂಘಿಸುತ್ತದೆ ಎಂದು ವಕ್ತಾರರು ಹೇಳಿದ್ದಾರೆ. ಶನಿವಾರ ಇಸ್ಲಾಮಾಬಾದ್ ನಲ್ಲಿ ನಡೆದ ಅಮೆರಿಕಾ–ಇರಾನ್ ಸಂಧಾನ ಮಾತುಕತೆಗಳು ವಿಫಲವಾದ ನಂತರ ಡೊನಾಲ್ಡ್ ಟ್ರಂಪ್ ಅವರು ಹಾರ್ಮುಜ್ ಜಲಸಂಧಿಯಲ್ಲಿ ಅಮೆರಿಕಾ ನೌಕಾಪಡೆಯಿಂದ ದಿಗ್ಬಂಧನ ವಿಧಿಸುವುದಾಗಿ ಘೋಷಿಸಿದ್ದರು.

ಪಿಯುಸಿ ಎರಡೂ ಪರೀಕ್ಷೆಗಳಲ್ಲಿ ಪಡೆದ ಅತ್ಯಧಿಕ ಅಂಕಗಳ ಸಿಇಟಿ ಫಲಿತಾಂಶಕ್ಕೆ ಪರಿಗಣನೆ: ಕೆಇಎ

ಬೆಂಗಳೂರು: ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಪರೀಕ್ಷೆ–1 ಮತ್ತು ಪರೀಕ್ಷೆ–2ರಲ್ಲಿ ಪಡೆದ ಅಂಕಗಳ ಪೈಕಿ ಯಾವುದು ಅತ್ಯಧಿಕವೋ ಆ ಅಂಕಗಳನ್ನೇ ಸಿಇಟಿ ಫಲಿತಾಂಶಕ್ಕೆ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಗೊಂದಲ ಬೇಡ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (KEA) ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಸ್ಪಷ್ಟಪಡಿಸಿದ್ದಾರೆ.

ಕೆಲ ಅಭ್ಯರ್ಥಿಗಳು ಪರೀಕ್ಷೆ–1ರಲ್ಲಿ ಪಡೆದ ಅಂಕಗಳನ್ನು ಉತ್ತಮಪಡಿಸಿಕೊಳ್ಳಲು ಎರಡನೇ ಪರೀಕ್ಷೆ ಕೂಡ ತೆಗೆದುಕೊಳ್ಳುತ್ತಿದ್ದಾರೆ. ಅಂತಹವರಿಗೆ ಕಳೆದ ವರ್ಷದಂತೆ ಎರಡೂ ಪರೀಕ್ಷೆಗಳಲ್ಲಿ ಪಡೆದ ಅತ್ಯಧಿಕ ಅಂಕಗಳನ್ನು ಸಿಇಟಿ ರ್‍ಯಾಂಕ್‌ಗೆ ಪರಿಗಣಿಸಲಾಗುತ್ತದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ದ್ವಿತೀಯ ಪಿಯುಸಿಯ ಎರಡೂ ಪರೀಕ್ಷೆಗಳ ಫಲಿತಾಂಶ ಬಂದ ನಂತರವೇ ಸಿಇಟಿ ಫಲಿತಾಂಶ ಪ್ರಕಟಿಸುವುದು. ಹೀಗಾಗಿ ಎರಡನೇ ಪರೀಕ್ಷೆಯ ಅಂಕಗಳನ್ನು ಪರಿಗಣಿಸುವುದಿಲ್ಲ ಎನ್ನುವುದು ಸುಳ್ಳು. ಇಂತಹ ವದಂತಿಗಳಿಗೆ ಕಿವಿ ಕೊಡಬೇಡಿ ಎಂದು ಹೇಳಿದರು. ಕರ್ನಾಟಕ ರಾಜ್ಯ ಪಠ್ಯಕ್ರಮದ ಪಿಯುಸಿ ಅಭ್ಯರ್ಥಿಗಳಿಗೆ ಮಾತ್ರ ಈ ಎರಡು ಪರೀಕ್ಷೆಗಳ ನಿಯಮ ಅನ್ವಯವಾಗುತ್ತದೆ. ಉಳಿದಂತೆ ಕೇಂದ್ರ ಹಾಗೂ ಇತರ ರಾಜ್ಯಗಳ ಬೋರ್ಡ್ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳಿಗೆ ಇದು ಅನ್ವಯಿಸುವುದಿಲ್ಲ ಎಂದು ಅವರು ವಿವರಿಸಿದ್ದಾರೆ.

ಸರ್ಕಾರಿ ಗೌರವದೊಂದಿಗೆ ಗಾಯಕಿ ಆಶಾ ಭೋಸ್ಲೆ ಅಂತ್ಯಕ್ರಿಯೆ



ಮುಂಬೈ: ಅನಾರೋಗ್ಯದಿಂದ ನಿಧನರಾದ ಖ್ಯಾತ ಹಿನ್ನೆಲೆ ಗಾಯಕಿ ಆಶಾ ಭೋಸ್ಲೆ ಅವರ ಅಂತ್ಯಕ್ರಿಯೆ ಇಂದು ಮುಂಬೈನ ಶಿವಾಜಿ ಪಾರ್ಕ್‌ನಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ನೆರವೇರಿತು. ಅಪಾರ ಸಂಖ್ಯೆಯ ಅಭಿಮಾನಿಗಳು ಆಶಾ ಭೋಸ್ಲೆ ಅವರ ಅಂತಿಮ ದರ್ಶನ ಪಡೆದರು. ಕುಟುಂಬದವರು, ಆಪ್ತರು ಮತ್ತು ಚಿತ್ರರಂಗದ ಅನೇಕರು ಅಂತಿಮ ನಮನ ಸಲ್ಲಿಸಿದರು. ಸಾವಿರಾರು ಗೀತೆಗಳ ಮೂಲಕ ಎಲ್ಲರ ಮನ ಗೆದ್ದಿದ್ದ ಆಶಾ ಭೋಸ್ಲೆ ಅವರು ಈಗ ಪಂಚಭೂತಗಳಲ್ಲಿ ಲೀನವಾಗಿದ್ದಾರೆ.

ಬಹುಅಂಗಾಂಗ ವೈಫಲ್ಯದಿಂದ ಬಳಲುತ್ತಿದ್ದ ಆಶಾ ಭೋಸ್ಲೆ ಅವರು ಏಪ್ರಿಲ್ 12ರಂದು ಮುಂಬೈನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 92 ವರ್ಷ ವಯಸ್ಸಾಗಿತ್ತು. ವೈಯಕ್ತಿಕ ಬದುಕಿನಲ್ಲಿ ಸಾಕಷ್ಟು ಏಳು-ಬೀಳುಗಳನ್ನು ಕಂಡಿದ್ದ ಆಶಾ ಭೋಸ್ಲೆ ಅವರು ಸಂಗೀತ ಲೋಕದಲ್ಲಿ ಸಾಧನೆ ಮಾಡಿದ್ದರು. ಅವರ ಅಗಲಿಕೆಗೆ ವಿವಿಧ ಕ್ಷೇತ್ರಗಳ ಗಣ್ಯರು ಸಂತಾಪ ಸೂಚಿಸಿದ್ದಾರೆ.

'ಧುರಂಧರ್ 2' ಸಿನಿಮಾದ ನಟ ರಣವೀರ್ ಸಿಂಗ್ ಅವರು ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡರು. ಕಣ್ಣೀರು ಹಾಕುತ್ತಾ ಅಂತಿಮ ನಮನ ಸಲ್ಲಿಸಿದ ಅವರು ಆಶಾ ಭೋಸ್ಲೆ ಕುಟುಂಬಕ್ಕೆ ಸಾಂತ್ವನ ಹೇಳಿದರು. ಆಮಿರ್ ಖಾನ್, ಟಬು, ರಿತೇಶ್ ದೇಶಮುಖ್, ಎ.ಆರ್. ರೆಹಮಾನ್, ಸಚಿನ್ ತೆಂಡೂಲ್ಕರ್, ರಾಕೇಶ್ ರೋಷನ್, ಜಾಕಿ ಶ್ರಾಫ್ ಸೇರಿದಂತೆ ಅನೇಕ ಸೆಲೆಬ್ರಿಟಿಗಳು ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡರು.

ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಉಪ ಮುಖ್ಯಮಂತ್ರಿ ಏಕನಾಥ್ ಶಿಂಧೆ, ಸುನೇತ್ರಾ ಪವಾರ್ ಮುಂತಾದವರು ಬಂದು ಆಶಾ ಭೋಸ್ಲೆ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಸೋಶಿಯಲ್ ಮೀಡಿಯಾ ಮೂಲಕ ನರೇಂದ್ರ ಮೋದಿ, ಮಮತಾ ಬ್ಯಾನರ್ಜಿ, ಸಲ್ಮಾನ್ ಖಾನ್, ಅಕ್ಷಯ್ ಕುಮಾರ್ ಮುಂತಾದವರು ಆಶಾ ಭೋಸ್ಲೆ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.

80 ವರ್ಷಗಳ ಕಾಲ ಆಶಾ ಭೋಸ್ಲೆ ಅವರು ಗಾಯನದಲ್ಲಿ ಸಕ್ರಿಯರಾಗಿದ್ದರು. ಸಾವಿರಾರು ಗೀತೆಗಳ ಮೂಲಕ ಅವರು ಜನಪ್ರಿಯತೆ ಗಳಿಸಿದ್ದರು. ಹಿಂದಿ ಮಾತ್ರವಲ್ಲದೇ ಹಲವು ಭಾಷೆಗಳ ಗೀತೆಗಳಿಗೆ ಧ್ವನಿ ನೀಡುವ ಮೂಲಕ ಅವರು ಪ್ರಖ್ಯಾತರಾಗಿದ್ದರು. 'ದಾದಾಸಾಹೇಬ್ ಫಾಲ್ಕೆ' ಪ್ರಶಸ್ತಿ, 'ಪದ್ಮ ವಿಭೂಷಣ' ಪ್ರಶಸ್ತಿ ಸೇರಿದಂತೆ ಹಲವು ಗೌರವಗಳಿಗೆ ಆಶಾ ಭೋಸ್ಲೆ ಪಾತ್ರರಾಗಿದ್ದರು.

ಇಂದು ಶ್ರೀ ವೆಂಕಟೇಶ್ವರ ಧ್ಯಾನಕೇಂದ್ರದಲ್ಲಿ ಸಭೆ; ಅಧಿಕಮಾಸದ ಆಮಂತ್ರಣ ಪತ್ರಿಕೆ ವಿತರಣೆ

ಮೈಸೂರು,ಏ.13(ಪಿಎಂ)- ಮುಂಬರುವ ಮೇ 17ರಿಂದ ಜೂನ್ 15ರವರೆಗೆ ಮೈಸೂರಿನ ಅಗ್ರಹಾರದಲ್ಲಿರುವ ಧನ್ವಂತರಿ ಸನ್ನಿಧಾನದಲ್ಲಿ ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ಶ್ರೀ ಉತ್ತರಾದಿ ಮಠದ ಶ್ರೀ ಸತ್ಯಾತ್ಮತೀರ್ಥ ಸ್ವಾಮೀಜಿಯವರ ಅಧಿಕ ಜ್ಯೇಷ್ಠ ಮಾಸದ ಕಾರ್ಯಕ್ರಮ ನಡೆಯಲಿದೆ.

ಒಂದು ತಿಂಗಳ ಪರ್ಯಂತ ಹತ್ತಾರು ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ವೇದಿಕೆಯಲ್ಲಿ ವಿಜೃಂಭಿಸಲಿವೆ. ಈ ಹಿನ್ನೆಲೆಯಲ್ಲಿ ಭಕ್ತ ಸಮೂಹಕ್ಕೆ ಆಮಂತ್ರಣ ಪತ್ರ ವಿತರಿಸಲು ಹಾಗೂ ಮಾಹಿತಿ ನೀಡಲು ಸಭೆಯನ್ನು ಶ್ರೀರಾಮಪುರದ ಉತ್ತರಾದಿ ಮಠದ ಶಾಖೆಯಾದ ಶ್ರೀ ವೆಂಕಟೇಶ್ವರ ಧ್ಯಾನಕೇಂದ್ರದಲ್ಲಿ ಏ.14ರ ಸಂಜೆ 6ಕ್ಕೆ ಆಯೋಜನೆ ಮಾಡಲಾಗಿದೆ. ಪಂಡಿತರಾದ ಅನಿರುದ್ಧಾಚಾರ್ಯ ಪಾಂಡುರಂಗಿ, ಹೇಮಂತ ಆಚಾರ್ಯ ಗುಡಿ ಮಾಹಿತಿ ನೀಡಲಿದ್ದಾರೆ. ಭಕ್ತರು ಆಗಮಿಸಬೇಕೆಂದು ಹಿರಿಯ ಕಾರ್ಯಕರ್ತ ಎ.ಎನ್.ರಮೇಶ್ ಕೋರಿದ್ದಾರೆ.

ನಾಗಮಂಗಲದ ಆದಿಚುಂಚನಗಿರಿ ಮಠಕ್ಕೆ ಪ್ರಧಾನಿ ನರೇಂದ್ರ ಮೋದಿಯವರ ಭೇಟಿ ಹಿನ್ನೆಲೆ

ನಾಳೆ ಗಣ್ಯರು ಸಂಚರಿಸುವ ಮಾರ್ಗದಲ್ಲಿ ಸಾರ್ವಜನಿಕ ವಾಹನಗಳಿಗೆ ನಿರ್ಬಂಧ

ಮದ್ಯ ಮಾರಾಟ, ಡ್ರೋನ್ ಹಾರಾಟಕ್ಕೂ ನಿಷೇಧ ; ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರಿಂದ ಆದೇಶ

ಮೈಸೂರು,ಏ.13(ಪಿಎಂ)- ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಮಠಕ್ಕೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಭದ್ರತೆ-ಸುರಕ್ಷತೆ ಕಲ್ಪಿಸಲು ಹಾಗೂ ಕಾನೂನು-ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರು, ಏ.15ರಂದು ಗಣ್ಯರು ಸಂಚರಿಸುವ ಮಾರ್ಗದಲ್ಲಿ ಸಾರ್ವಜನಿಕ ವಾಹನಗಳಿಗೆ ನಿರ್ಬಂಧ ವಿಧಿಸಿದ್ದು, ಮದ್ಯ ಮಾರಾಟ ಹಾಗೂ ಡ್ರೋನ್ ಹಾರಾಟಕ್ಕೂ ನಿಷೇಧ ವಿಧಿಸಿ ಪ್ರತ್ಯೇಕ ಆದೇಶಗಳನ್ನು ಹೊರಡಿಸಿದ್ದಾರೆ.



ಪ್ರಧಾನಮಂತ್ರಿಯವರ ಭದ್ರತೆ ದೃಷ್ಟಿಯಿಂದ ಗಣ್ಯರು ಸಂಚರಿಸುವ ಮಾರ್ಗದಲ್ಲಿ ಸಾರ್ವಜನಿಕ ವಾಹನಗಳ ಸಂಚಾರ ನಿರ್ಬಂಧಿಸಿ ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ಆದೇಶಿಸಲಾಗಿದೆ. ಏ.15ರ ಬೆಳಗ್ಗೆ 6ರಿಂದ ಸಂಜೆ 6ರವರೆಗೆ ಎನ್‌ಹೆಚ್ 150ಎ ರಾಷ್ಟ್ರೀಯ ಹೆದ್ದಾರಿಯಲ್ಲಿ ತುರುವೇಕೆರೆ ಕಡೆಯಿಂದ ಮೈಸೂರು ಕಡೆಗೆ ಸಂಚರಿಸುವ ವಾಹನಗಳನ್ನು ತುರುವೇಕೆರೆಯಿಂದ ಮಾಯಸಂದ್ರ-ಬಿಳಿಗುಂದ-ಗೊಂದಿಹಳ್ಳಿ, ಎನ್‌ಹೆಚ್-75ಎ ರಾಷ್ಟ್ರೀಯ ಹೆದ್ದಾರಿ ಮಾರ್ಗವಾಗಿ ಮೈಸೂರಿಗೆ ಅಥವಾ ಮಾಯಸಂದ್ರ-ಬಿಳಿಗುಂದ-ಗೊಂದಿಹಳ್ಳಿ-ನೆಲ್ಲಿಗೆರೆ ಕ್ರಾಸ್-ನಾಗಮಂಗಲ ಮಾರ್ಗವಾಗಿ ಮೈಸೂರಿಗೆ ಸಂಚರಿಸಲು ಹಾಗೂ ಮೈಸೂರಿನಿಂದ ತುಮಕೂರಿಗೆ ಬರುವ ವಾಹನಗಳನ್ನು, ನಾಗಮಂಗಲ ನೆಲ್ಲಿಗೆರೆ ಕ್ರಾಸ್‌ನಿಂದ ಗೊಂದಿಹಳ್ಳಿ, ಗೊಂದಿಹಳ್ಳಿಯಿಂದ ತುರುವೇಕೆರೆ ಮಾರ್ಗದಲ್ಲಿ ಸಂಚರಿಸಲು (ಎಲ್ಲಾ ಮಾದರಿಯ ವಾಹನಗಳು) ಆದೇಶಿಸಲಾಗಿದೆ.

ಮದ್ಯ ಮಾರಾಟ ನಿಷೇಧ: ಪ್ರಧಾನಿ ನರೇಂದ್ರ ಮೋದಿಯವರು ಭೇಟಿ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಏ.15ರ ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಬೆಳ್ಳೂರು ಪಟ್ಟಣ ಪಂಚಾಯಿತಿ ಸುತ್ತಳತೆಯ 8 ಕಿ.ಮೀ. ವ್ಯಾಪ್ತಿಯಲ್ಲಿ ಎಲ್ಲಾ ಮಾದರಿಯ ಮದ್ಯದ ಅಂಗಡಿಗಳು, ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಹಾಗೂ ಮದ್ಯ ಮಾರಾಟ, ಸಾಗಾಣಿಕೆ ಮತ್ತು ಶೇಖರಣೆ ಮಾಡುವುದನ್ನು ನಿಷೇಧಿಸಿ ಆದೇಶಿಸಲಾಗಿದೆ.

ಡ್ರೋನ್ ನಿಷೇಧ: ಅಂತೆಯೇ ಏ.15ರ ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಬೆಳ್ಳೂರು ಪಟ್ಟಣ ಪಂಚಾಯಿತಿಯ ಸುತ್ತಮುತ್ತ 12 ಕಿ.ಮೀ. ಸುತ್ತಳತೆ ವ್ಯಾಪ್ತಿಯಲ್ಲಿ ಮಾನವ ರಹಿತ ಏರ್‌ಕ್ರಾಫ್ಟ್ (Unmanned Aerial Vehicle/UAV)/(Unmanned Aircraft Systems/UAS), ಡ್ರೋನ್ ಕ್ಯಾಮರಾ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಿ ಆದೇಶಿಸಲಾಗಿದೆ.

ನಾನು ಟ್ರಂಪ್ ಆಡಳಿತಕ್ಕೆ ಹೆದರಲ್ಲ: ಜಾಗತಿಕ ಶಾಂತಿಗೆ ಕರೆಕೊಟ್ಟ ಪೋಪ್ ಲಿಯೊ


ಅಲ್ಜೀರ್ಸ್ (ಅಲ್ಜೇರಿಯಾ): ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಡಳಿತದೊಂದಿಗೆ ಯಾವುದೇ ಮುಖಾಮುಖಿ ಚರ್ಚೆಯಲ್ಲಿ ತೊಡಗಿಸಿಕೊಳ್ಳುವ ಇಚ್ಛೆ ನನಗಿಲ್ಲ ಎಂದು ಹೇಳಿರುವ ಪೋಪ್ 14ನೇ ಲಿಯೊ, ರಾಜಕೀಯ ಘರ್ಷಣೆಗಿಂತ ಆಧ್ಯಾತ್ಮಿಕ ವಕಾಲತ್ತಿಗೆ ಹೆಚ್ಚು ಬದ್ಧತೆ ಹೊಂದಿರುವುದಾಗಿ ಪುನರುಚ್ಚರಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಓದುವ ಜನರು ತಮ್ಮದೇ ತೀರ್ಮಾನಗಳನ್ನು ತೆಗೆದುಕೊಳ್ಳಲು ಶಕ್ತರಾಗಿರುತ್ತಾರೆ ಎಂದು ನಾನು ಭಾವಿಸುತ್ತೇನೆ. ನಾನು ರಾಜಕಾರಣಿಯಲ್ಲ. ಹಾಗಾಗಿ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಚರ್ಚೆಗೆ ಇಳಿಯುವ ಉದ್ದೇಶವು ನನಗಿಲ್ಲ' ಎಂದು ಮಾರ್ಮಿಕವಾಗಿ ನುಡಿದಿದ್ದಾರೆ.

ಜಾಗತಿಕ ಸಾಮರಸ್ಯದ ಮೇಲೆ ಗಮನ ಕೇಂದ್ರೀಕರಿಸುವ ತಮ್ಮ ನಿರ್ಧಾರವನ್ನು ಪುನರುಚ್ಚರಿಸಿದ ಅವರು, ನಾವು ಯಾವಾಗಲೂ ಶಾಂತಿಯನ್ನು ಹುಡುಕೋಣ, ಯುದ್ಧಗಳನ್ನು ಕೊನೆಗೊಳಿಸೋಣ. ನಾನು ಟ್ರಂಪ್ ಆಡಳಿತಕ್ಕೆ ಹೆದರುವುದಿಲ್ಲ ಎಂದು ಪ್ರತಿಪಾದಿಸಿದ್ದಾರೆ.

ಯುದ್ಧ ವಿರೋಧಿಸಿ ನಾನು ಗಟ್ಟಿಯಾಗಿ ಧ್ವನಿ ಎತ್ತುವುದನ್ನು ಮುಂದುವರಿಸುತ್ತೇನೆ. ಶಾಂತಿ ಮತ್ತು ರಾಷ್ಟ್ರಗಳ ನಡುವೆ ಬಹುಪಕ್ಷೀಯ ಸಂವಾದವನ್ನು ಉತ್ತೇಜಿಸಲು ಪ್ರಯತ್ನಿಸುತ್ತೇನೆ. ಇದರಿಂದ ಸಮಸ್ಯೆಗಳಿಗೆ ಸರಿಯಾದ ಪರಿಹಾರ ಕಂಡುಕೊಳ್ಳಬಹುದು ಎಂದಿದ್ದಾರೆ.

ಚರ್ಚ್‌ನ ಸಂದೇಶವು ಸುವಾರ್ತೆಯ ಸಂದೇಶವಾಗಿದೆ. ಶಾಂತಿ ಸ್ಥಾಪಿಸುವವರು ಧನ್ಯರು. ನನ್ನ ಪಾತ್ರವನ್ನು ನಾನು ರಾಜಕಾರಣಿಯ ಪಾತ್ರವೆಂದು ನೋಡುವುದಿಲ್ಲ. ಅವರೊಂದಿಗೆ (ಟ್ರಂಪ್) ಚರ್ಚೆಗೆ ಇಳಿಯಲು ನಾನು ಬಯಸುವುದಿಲ್ಲ. ಜಗತ್ತಿನಲ್ಲಿ ಈಗಾಗಲೇ ಅತೀ ಹೆಚ್ಚು ಜನರು ಸಂಕಷ್ಟ



ಅನುಭವಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಪೋಪ್‌ಗೆ ಟ್ರಂಪ್ ತಿರುಗೇಟು: ಜೀಸಸ್ ಶಾಂತಿಯ ಸಂಕೇತ. ಅವರು ಯಾವ ಯುದ್ಧವನ್ನೂ ಬೆಂಬಲಿಸುವುದಿಲ್ಲ. ಯೇಸು ಬೆಂಬಲದ ಹೆಸರಿನಲ್ಲಿ ಯಾರೂ ಯುದ್ಧವನ್ನು ಸಮರ್ಥಿಸಲಾಗದು ಎಂದು ಪೋಪ್ 14ನೇ ಲಿಯೊ ಹೇಳಿಕೆ ನೀಡಿದ್ದರು.

ಧರ್ಮದ ಹೆಸರಿನಲ್ಲಿ ಯುದ್ಧ ಮಾಡುವುದನ್ನು ಪೋಪ್ ಟೀಕಿಸಿದ್ದರು. ದೇವರು ಹಿಂಸೆಯನ್ನು ಒಪ್ಪುವುದಿಲ್ಲ, ಯುದ್ಧ ಮಾಡುವವರು ಪ್ರಾರ್ಥನೆಯನ್ನೂ ಆಲಿಸುವುದಿಲ್ಲ. ಜೀಸಸ್, ತುಳಿತಕ್ಕೊಳಗಾದವರನ್ನು ಸಾಂತ್ವನಗೊಳಿಸುವ ದೇವರು. ಯುದ್ಧವು ಮನುಕುಲದ ಘೋರ ದುರಂತ ಎಂದು ಹೇಳಿದ್ದರು.

ಇದಕ್ಕೆ ತಿರುಗೇಟು ನೀಡಿದ್ದ ಟ್ರಂಪ್, ಅಪರಾಧಗಳ ಕುರಿತು ಮೃದುಧೋರಣೆ ಹೊಂದಿರುವ ಪೋಪ್ ಲಿಯೊ ಅವರಿಗೆ ವಿದೇಶಾಂಗ ನೀತಿಯ ಕುರಿತು ಏನೂ ಗೊತ್ತಿಲ್ಲ. ನಾನು ಅವರ ಅಭಿಯಾನಿಯಲ್ಲ, ಅವರು ಪೋಪ್ ಆಗಿ ತನ್ನ ಕಾರ್ಯವನ್ನು ಮಾಡಿದರೆ ಸಾಕು ಎಂದು ತಿರುಗೇಟು ನೀಡಿದ್ದರು.

ರೋಹಿಣಿ ಸಿಂಧೂರಿ ವಿರುದ್ಧ ತನಿಖೆ: ಹೈಕೋರ್ಟ್ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆ

ನವದೆಹಲಿ: ಪರಿಸರ ಸ್ನೇಹಿ ಬಟ್ಟೆಯ ಕೈಚೀಲಗಳನ್ನು ಖರೀದಿಸುವ ಪ್ರಕ್ರಿಯೆಯಲ್ಲಿ ಕೋಟ್ಯಂತರ ರೂಪಾಯಿಗಳ ಅಕ್ರಮ ಎಸಗಿದ ಆರೋಪದಲ್ಲಿ ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ವಿರುದ್ಧ ತನಿಖೆ ನಡೆಸಲು ಪೂರ್ವಾನುಮತಿ ನೀಡಲು ಕರ್ನಾಟಕ ಸರ್ಕಾರಕ್ಕೆ ನಿರ್ದೇಶಿಸಿದ್ದ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ಸೋಮವಾರ ತಡೆಯಾಜ್ಞೆ ನೀಡಿದೆ.



ರೋಹಿಣಿ ಸಲ್ಲಿಸಿದ್ದ ವಿಶೇಷ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ದೀಪಂಕರ ದತ್ತ ಹಾಗೂ ಸತೀಶ್ ಚಂದ್ರ ಶರ್ಮಾ ಪೀಠವು ಪ್ರತಿವಾದಿಗಳಾದ ರಾಜ್ಯ ಸರ್ಕಾರ ಹಾಗೂ ಎನ್.ಆರ್. ರವಿಚಂದ್ರೇಗೌಡ ಅವರಿಗೆ ನೋಟಿಸ್ ಜಾರಿ ಮಾಡಿದೆ.

ಸ್ವಚ್ಛ ಭಾರತ ಅಭಿಯಾನದ ಅಂಗವಾಗಿ ಮೈಸೂರು ಜಿಲ್ಲೆಯಲ್ಲಿ ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಿಸಬೇಕು ಮತ್ತು ಪ್ಲಾಸ್ಟಿಕ್ ಬಳಕೆಗೆ ಇತಿಶ್ರೀ ಹಾಡಿ ಬಟ್ಟೆಯ ಕೈಚೀಲಗಳನ್ನು ಬಳಸಬೇಕು ಎಂದು ಜಿಲ್ಲಾಧಿಕಾರಿಯಾಗಿದ್ದ ರೋಹಿಣಿ ಸಿಂಧೂರಿ ಅವರು ಜಿಲ್ಲೆಯ ನಗರ, ಗ್ರಾಮಾಂತರ ಮತ್ತು ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶಿಸಿದ್ದರು.

ಈ ನಿಟ್ಟಿನಲ್ಲಿ ಮುಕ್ತ ಮಾರುಕಟ್ಟೆಯಲ್ಲಿ ಪ್ರತಿ ಚೀಲಕ್ಕೆ 13 ಇದ್ದರೆ ಅವುಗಳನ್ನು ಪ್ರತಿ ಚೀಲಕ್ಕೆ 52ರಷ್ಟು ದರ ನೀಡಿ ಖರೀದಿಸಲಾಗಿದೆ. ಈ ಮೂಲಕ ಸರ್ಕಾರದ ಬೊಕ್ಕಸಕ್ಕೆ 7.65 ಕೋಟಿ ನಷ್ಟ ಉಂಟು ಮಾಡಲಾಗಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಪ್ರಯೋಜನ ನೀಡುವ ಉದ್ದೇಶದಿಂದ ಕಲ್ಯಾಣ ಯೋಜನೆಗಳಿಗೆ ಮೀಸಲಿಟ್ಟ ಹಣವನ್ನು ಈ ಕೈಚೀಲಗಳ ಖರೀದಿಗೆ ಬಳಸಲಾಗಿದೆ. ಗ್ರಾಮ ಸ್ವರಾಜ್ಯದ ಎಲ್ಲ ಕನಸುಗಳನ್ನು ಗಾಳಿಗೆ ತೂರಿ ಭ್ರಷ್ಟಾಚಾರ ಎಸಗಲಾಗಿದೆ ಎಂದು ಅರ್ಜಿದಾರರು ಆರೋಪಿಸಿದ್ದರು.

ಅಕ್ರಮದ ಕುರಿತಂತೆ, ಭ್ರಷ್ಟಾಚಾರ ನಿಗ್ರಹ ಕಾಯ್ದೆ-1988ರ ಅಡಿಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಕೋರಿ ಎನ್.ಆರ್.ರವಿಚಂದ್ರೇಗೌಡ ಅವರು ಮೈಸೂರು ಜಿಲ್ಲಾ ಭ್ರಷ್ಟಚಾರ ನಿಗ್ರಹ ದಳಕ್ಕೆ (ಎಸಿಬಿ) 2021ರ ಅಕ್ಟೋಬರ್ 13ರಂದು ದೂರು ನೀಡಿದ್ದರು.

ಗುಜರಾತ್‌ನ ಅಪಘಾತದಲ್ಲಿ 7 ಜನ ಸಾವು; ರಾಷ್ಟ್ರಪತಿ, ಪ್ರಧಾನಿ ಮೋದಿ ಸಂತಾಪ

ನವದೆಹಲಿ, ಏ. 13: ಇಂದು ಬೆಳಗಿನ ಜಾವ ಗುಜರಾತ್‌ನ ಸುರೇಂದ್ರನಗರ ಜಿಲ್ಲೆಯಲ್ಲಿ ದುರಂತ ಸಂಭವಿಸಿದ್ದು, ವೇಗವಾಗಿ ಬಂದ ಟ್ರಕ್ ಯಾತ್ರಿಕರ ಗುಂಪಿನ ಮೇಲೆ ಹರಿದ ಪರಿಣಾಮವಾಗಿ 7 ಜನರು ಸಾವನ್ನಪ್ಪಿದ್ದು, ಇತರ ನಾಲ್ವರು ಗಾಯಗೊಂಡಿದ್ದಾರೆ. ಲಖ್ತಾರ್-ವಿರಮ್‌ಗಮ್ ಹೆದ್ದಾರಿಯಲ್ಲಿ ಇಂದು ಬೆಳಗಿನ ಜಾವ ಸುಮಾರು 1.30 ಗಂಟೆಗೆ ಭಕ್ತರು ರಾಜ್‌ಕೋಟ್‌ನಿಂದ ಬಹುಚರಾಜಿ ದೇವಸ್ಥಾನಕ್ಕೆ ಕಾಲ್ನಡಿಗೆಯಲ್ಲಿ ಹೋಗುತ್ತಿದ್ದಾಗ ಈ ಭೀಕರ ಅಪಘಾತ ಸಂಭವಿಸಿದೆ. ಈ ದುರಂತಕ್ಕೆ ಪ್ರಧಾನಿ ನರೇಂದ್ರ ಮೋದಿ ಹಾಗೂ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂತಾಪ ಸೂಚಿಸಿದ್ದಾರೆ.

ಲಖ್ತಾರ್ ಪೊಲೀಸ್ ಇನ್ಸ್‌ಪೆಕ್ಟರ್ ಯೋಗೇಶ್ ಪಟೇಲ್ ಅವರ ಪ್ರಕಾರ, ಈ ಗುಂಪು ಸುಮಾರು 500 ಯಾತ್ರಿಕರ ದೊಡ್ಡ ಮೆರವಣಿಗೆಯ ಭಾಗವಾಗಿತ್ತು. ಅವರು ಭಾಸ್ಕರ್‌ಪಾರ ಗ್ರಾಮದ ಹೊರವಲಯವನ್ನು ತಲುಪುತ್ತಿದ್ದಂತೆ ಹತ್ತಿಯನ್ನು ತುಂಬಿದ್ದ ಟ್ರಕ್ ಹಿಂದಿನಿಂದ ಅತಿ ವೇಗದಲ್ಲಿ ಬಂದಿತು. ಯಾತ್ರಿಕರು ರಸ್ತೆಯ ಪಕ್ಕದಲ್ಲಿ ನಿಲ್ಲಿಸಿದ್ದ ಡಂಪರ್ ಟ್ರಕ್ ಅನ್ನು ದಾಟಿ ಹೋಗಲು ಪ್ರಯತ್ನಿಸುತ್ತಿದ್ದಾಗ ಡಿಕ್ಕಿ ಸಂಭವಿಸಿದೆ. ಇದರ ಪರಿಣಾಮ ಭೀಕರವಾಗಿದ್ದು, ನಾಲ್ವರು ಮಹಿಳೆಯರು ಮತ್ತು ಸ್ಥಿರ ಡಂಪರ್‌ನ ಚಾಲಕ ಸೇರಿದಂತೆ 6 ಜನರು ತಕ್ಷಣವೇ ಸಾವನ್ನಪ್ಪಿದ್ದಾರೆ. ಇನ್ನೊರ್ವ ವ್ಯಕ್ತಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ.

ಮೈಸೂರು ಮಿತ್ರ

ಮಹಾನ್ ಸಮಾಜ ಸುಧಾರಕ ಡಾ.ಬಿ.ಆರ್.ಅಂಬೇಡ್ಕರ್

ವರುಣ ಕ್ಷೇತ್ರದ ಬಿಜೆಪಿ ಅಧ್ಯಕ್ಷ ನಗರ್ಲೆ ಮಹದೇವಸ್ವಾಮಿ

ತಿ.ನರಸೀಪುರ, ಏ.13– ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಮಹಾನ್ ಸಮಾಜ ಸುಧಾರಕ ಮತ್ತು ದಲಿತರ ಹಕ್ಕುಗಳ ರಕ್ಷಕ. ಅವರು ತಮ್ಮ ಜೀವನದ ಉದ್ದಕ್ಕೂ ಜಾತಿವಾದ, ತಾರತಮ್ಯ ಮತ್ತು ಸಾಮಾಜಿಕ ಅನ್ಯಾಯದ ವಿರುದ್ಧ ಹೋರಾಡಿದರು. ಅಲ್ಲದೇ ಎಲ್ಲಾ ಸಮುದಾಯದ ವರಿಗೆ ಸಮಾನ ಹಕ್ಕುಗಳನ್ನು ನೀಡಲು ಸಂವಿಧಾನಕ್ಕೆ ಮಹತ್ವದ ಕೊಡುಗೆ ನೀಡಿದರು ಎಂದು ವರುಣ ಕ್ಷೇತ್ರದ ಬಿಜೆಪಿ ಅಧ್ಯಕ್ಷ ನಗರ್ಲೆ ಮಹದೇವಸ್ವಾಮಿ ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ವರುಣ ವಿಧಾನಸಭಾ ಕ್ಷೇತ್ರದ ದಂಡಿಕೇರಿ ಗ್ರಾಮದಲ್ಲಿ ಅಂಬೇಡ್ಕರ್ ಪುತ್ಥಳಿ ಸ್ವಚ್ಛಗೊಳಿಸಿ ಮಾತನಾಡಿದ ಅವರು, ಸಮಾಜದಲ್ಲಿ ಶಿಕ್ಷಣ, ಸಮಾನತೆ ಮತ್ತು ಮಾನವ ಹಕ್ಕುಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಡಾ.ಅಂಬೇಡ್ಕರ್ ಆನೇಕ ಪ್ರಮುಖ ನಿರ್ಧಾರ ತೆಗೆದುಕೊಂಡರು. ಅಂಬೇಡ್ಕರ್ ಜಯಂತಿ ಅವರ ಆದರ್ಶ ಮತ್ತು ಆಲೋಚನೆಗಳನ್ನು ಅಳವಡಿಸಿಕೊಳ್ಳುವ ಮೂಲಕ ಸಮಾನ ಮತ್ತು ನ್ಯಾಯಯುತ ಸಮಾಜದತ್ತ ಸಾಗಲು ನಮಗೆ ಸ್ಫೂರ್ತಿ ನೀಡುತ್ತದೆ ಎಂದರು.

ಜಿಪಂ ಮಾಜಿ ಸದಸ್ಯ ಬಿ.ಎನ್.ಸದಾನಂದ ಮಾತನಾಡಿ, ಅಂಬೇಡ್ಕರ್ ಅವರು ದೇಶಕ್ಕೆ ಸಂವಿಧಾನ ರಚಿಸುವ ಮೂಲಕ ಪ್ರತಿ ಸಮುದಾಯಕ್ಕೂ ಹಕ್ಕು ಮತ್ತು ಸ್ವಾತಂತ್ರ್ಯ ನೀಡಿ ಪ್ರಜಾಪ್ರಭುತ್ವದ ಮೂಲಕ ಸಮ ಸಮಾಜ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು ಎಂದರು.



ದಂಡಿಕೇರಿ ಗ್ರಾಮದಲ್ಲಿ ಅಂಬೇಡ್ಕರ್ ಪುತ್ಥಳಿ ಸ್ವಚ್ಛಗೊಳಿಸಲಾಯಿತು.

ಶಕ್ತಿ ಕೇಂದ್ರದ ಅಧ್ಯಕ್ಷ ಶ್ರೀಧರ್ ಮಾತನಾಡಿ, ಅಸ್ಪೃಶ್ಯತೆ ಜೊತೆಗೆ ಜಾತಿ ವ್ಯವಸ್ಥೆ ನಿರ್ಮೂಲನೆಗೂ ಬಾಬಾ ಸಾಹೇಬರು ಕೊಡುಗೆ ನೀಡಿದರು. ಅವರ ಸಾಟಿ ಇಲ್ಲದ ಕೆಲಸ ಮತ್ತು ದಲಿತ ಬೌದ್ಧ ಚಳವಳಿ ಪ್ರಾರಂಭಕ್ಕಾಗಿ ಇಡೀ ದೇಶ ಅವರನ್ನು ನೆನಪಿಸಿಕೊಳ್ಳುತ್ತದೆ. ಸಂವಿಧಾನ ಶಿಲ್ಪಿಯಾಗಿ ದೇಶದ ಕಾನೂನು ಸಚಿವರಾಗಿದ್ದ ಅವರ ಅತ್ಯುನ್ನತ ಸಾಧನೆಗಾಗಿ 1990ರಲ್ಲಿ ಭಾರತ ರತ್ನ ಪ್ರಶಸ್ತಿ ನೀಡಲಾಯಿತು ಎಂದರು.

ಈ ವೇಳೆ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಮಹಾದೇವಯ್ಯ, ಜಿಲ್ಲಾ ಎಸ್‌ಸಿ ಮೋರ್ಚಾ ಅಧ್ಯಕ್ಷ ಅನಿಲ್ ಕುಮಾರ್, ಮಾಜಿ ಜಿಪಂ ಸದಸ್ಯ ಗುರುಸ್ವಾಮಿ, ಮಾಜಿ ತಾಪಂ ಸದಸ್ಯ ಶಂಕ್ರಣ್ಣ, ಮಹಿಳಾ ಮೋರ್ಚಾ ಅಧ್ಯಕ್ಷೆ ಲಕ್ಷ್ಮಿ, ವರುಣ ಮಂಡಲ ಪ್ರಧಾನ ಕಾರ್ಯದರ್ಶಿ ನಂಜುಂಡಸ್ವಾಮಿ, ಅಂಬೇಡ್ಕರ್ ಸಂಘದ ಗೌರವಾಧ್ಯಕ್ಷ ಶಿವಣ್ಣ, ಅಧ್ಯಕ್ಷ ಬಸವಣ್ಣ, ಯಜಮಾನ ಕುಮಾರ್, ದಂಡಿಕೆರೆ ಗ್ರಾಮದ ದೊಡ್ಡ ಯಜಮಾನರು ಹಾಗೂ ಅಂಬೇಡ್ಕರ್ ಸಂಘದ ಪದಾಧಿಕಾರಿಗಳು, ಬಿಜೆಪಿ ಮುಖಂಡರು ಹಾಜರಿದ್ದರು.

> "ಅಂಬೇಡ್ಕರ್ ಸಾಮಾಜಿಕ ಅಸಮಾನತೆ, ಜಾತಿ ಪದ್ಧತಿ, ನಿರುದ್ಯೋಗ, ಬಡತನ ಹೋಗಲಾಡಿಸಲು ಬಹಳಷ್ಟು ಶ್ರಮಿಸಿದ್ದಾರೆ. ಅಂಬೇಡ್ಕರ್ ಕೇವಲ ವ್ಯಕ್ತಿಯಲ್ಲ. ಪ್ರತಿಯೊಬ್ಬರಿಗೂ ಬಹುದೊಡ್ಡ ಶಕ್ತಿಯಾಗಿದ್ದಾರೆ. ವಿಶ್ವದ ಭವ್ಯ ಭವಿಷ್ಯಕ್ಕಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡು ಉರಿಯುವ ಕರ್ಪೂರದಂತೆ ಬೆಳಗಿದ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಇಂದಿನ ಸಮಾಜಕ್ಕೆ ತಲುಪಿಸುವ ಕೆಲಸ ಮಾಡಬೇಕಿದೆ. ಮೂಢನಂಬಿಕೆ, ಕಂದಾಚಾರ ದೇಶದ ಪ್ರಗತಿಯನ್ನು ಹಿಂದಕ್ಕೆ ತಳ್ಳುತ್ತಿರುವುದು ವಿಪರ್ಯಾಸ. ಮಹಾತ್ಮರ ವಿಚಾರಗಳನ್ನು ಆಚರಣೆಗೆ ತರುವ ಮೂಲಕ ಅವರ ಕನಸಿನ ಭಾರತ ಕಟ್ಟಬೇಕಾಗಿದೆ.
> – ಬಿ.ಎನ್.ಸದಾನಂದ, ಜಿಪಂ ಮಾಜಿ ಸದಸ್ಯ.

ಇಂದು 'ಕೈ' ಮುಖಂಡರು ಜೆಡಿಎಸ್ ಸೇರ್ಪಡೆ



ಭೇರ್ಯ, ಏ.13– ಸಾಲಿಗ್ರಾಮ ತಾಲೂಕಿನ ಕೆಂಚನಹಳ್ಳಿ ಗ್ರಾಮದಲ್ಲಿ ಏ.14ರಂದು ಮಾಜಿ ಸಚಿವರೂ ಆದ ಜೆಡಿಎಸ್ ಕಾರ್ಯಾಧ್ಯಕ್ಷ ಸಾ.ರಾ.ಮಹೇಶ್ ಸಮ್ಮುಖದಲ್ಲಿ ಕುರುಬ ಸಮುದಾಯದ ಯುವಕರು, ಮುಖಂಡರು ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆಗೊಳ್ಳಲಿದ್ದಾರೆ ಎಂದು ಜಿಪಂ ಮಾಜಿ ಸದಸ್ಯ ಅಮಿತ್ ವಿ.ದೇವರಹಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲೂಕಿನ ಕೆಂಚನಹಳ್ಳಿಯಲ್ಲಿ ಬೆಳಗ್ಗೆ 10.30ಕ್ಕೆ ನಡೆಯುವ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ದುರಾಡಳಿತದಿಂದ ಬೇಸತ್ತು ಕುರುಬ ಸಮುದಾಯದ ಗ್ರಾಮಗಳಾದ ಸಾಲಿಗ್ರಾಮ ತಾಲೂಕಿನ ಬಾಚಹಳ್ಳಿ, ಕುರುಬಹಳ್ಳಿ, ಕೆಂಚನಹಳ್ಳಿ ಮತ್ತು ಕೆ.ಆರ್.ನಗರ ತಾಲೂಕಿನ ದೆಗ್ಗನಹಳ್ಳಿ ಗ್ರಾಮ ಸೇರಿದಂತೆ ಇನ್ನಿತರ ಗ್ರಾಮಗಳ ಸಾವಿರಾರು ಕುರುಬ ಸಮುದಾಯದ ಯುವಕರು, ಮುಖಂಡರು ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆಗೊಳ್ಳಲಿದ್ದು, ಅವರನ್ನು ಮಾಜಿ ಸಚಿವ ಸಾ.ರಾ.ಮಹೇಶ್ ಆತ್ಮೀಯವಾಗಿ ಪಕ್ಷಕ್ಕೆ ಬರಮಾಡಿಕೊಳ್ಳಲಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಅಧಿಕ ಮತಗಳಿಂದ ಸಾ.ರಾ.ಮಹೇಶ್ ಅವರನ್ನು ಗೆಲ್ಲಿಸಲಿದ್ದೇವೆ ಇದು ಶತಸಿದ್ಧ ಎಂದಿದ್ದಾರೆ.

ಮಾಜಿ ಸಚಿವ ಸಾ.ರಾ.ಮಹೇಶ್ ಅವರ ನಾಯಕತ್ವ ಮೆಚ್ಚಿ ಕುರುಬ ಸಮುದಾಯದ ಪ್ರಭಾವಿ ಮುಖಂಡರು ಪಕ್ಷ ಸೇರುವ ಬಗ್ಗೆ ಚರ್ಚಿಸಲಾಗಿದ್ದು, ಚುನಾವಣೆ ವೇಳೆ ಸಾಕಷ್ಟು ಸಮುದಾಯದವರು ಪಕ್ಷ ಸೇರ್ಪಡೆಯಾಗಲಿದ್ದಾರೆ. ಮೈತ್ರಿ ಸರ್ಕಾರದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಮತ್ತೊಮ್ಮೆ ರಾಜ್ಯದ ಮುಖ್ಯಮಂತ್ರಿ ಆಗಲಿದ್ದು, ನಮ್ಮ ನಾಯಕ ಮಾಜಿ ಸಚಿವ ಸಾ.ರಾ.ಮಹೇಶ್ ಸಚಿವರಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಭವಿಷ್ಯ ನುಡಿದಿದ್ದಾರೆ.

ಕಾರು ಡಿಕ್ಕಿ: ಬೈಕ್ ಸವಾರ ಸಾವು

ತಿ.ನರಸೀಪುರ, ಏ.13– ಬೈಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿ, ಹಿಂಬದಿ ಕುಳಿತಿದ್ದ ಆತನ ಮಗಳು ಗಾಯಗೊಂಡಿರುವ ಘಟನೆ ತಾಲೂಕಿನ ಕೆಂಪಯ್ಯನಹುಂಡಿ ಗ್ರಾಮದ ಬಳಿ ಸಂಭವಿಸಿದೆ.

ತಾಲೂಕಿನ ಇಂಡುವಾಳು ಗ್ರಾಮದ ನಿವಾಸಿ ಮೂರ್ತಿ ಸಾವನ್ನಪ್ಪಿದವರು. ಹಿಂಬದಿ ಕುಳಿತಿದ್ದ ಅವರ ಮಗಳು ಮಂಜುಳಾ ಗಾಯಗೊಂಡವರು.

ವಿವರ: ಮೂರ್ತಿ ಅವರ ಪುತ್ರಿ ಮಂಜುಳಾ ನಂಜನಗೂಡು ತಾಲೂಕಿನ ಕಡಕೊಳ ಗ್ರಾಮದ ಆಟೋ ಲಿವ್ ಎಂಬ ಫ್ಯಾಕ್ಟರಿಯಲ್ಲಿ ಲೇಜರ್ ವರ್ಕ್ ಕೆಲಸ ಮಾಡುತ್ತಿದ್ದು, ಎಂದಿನಂತೆ ಭಾನುವಾರ ಬೆಳಗ್ಗೆ ಕೆಲಸಕ್ಕೆ ಹೋಗಿ ಸಂಜೆ ಕೆಲಸ ಮುಗಿಸಿಕೊಂಡು ಹಳೇ ಕೆಂಪಯ್ಯನಹುಂಡಿ ಬಸ್ ನಿಲ್ದಾಣಕ್ಕೆ ಬಸ್‌ನಲ್ಲಿ ಆಗಮಿಸಿ ಮನೆಗೆ ಕರೆದುಕೊಂಡು ಹೋಗುವಂತೆ ತಮ್ಮ ತಂದೆಗೆ ಫೋನ್ ಮಾಡಿದ್ದಾರೆ. ಈ ವೇಳೆ ಇಂಡುವಾಳು ಗ್ರಾಮದಿಂದ ತನ್ನ ಪಲ್ಸರ್ ಬೈಕ್(KA.06, HP.1558)ನಲ್ಲಿ ಆಗಮಿಸಿದ ಮೂರ್ತಿ ತನ್ನ ಮಗಳನ್ನು ಬೈಕ್‌ನಲ್ಲಿ ಕೂರಿಸಿ ಕೊಂಡು ಸ್ವಗ್ರಾಮಕ್ಕೆ ಹೋಗುತ್ತಿದ್ದ ವೇಳೆ ಮೈಸೂರು ಮುಖ್ಯ ರಸ್ತೆಯ ಹೊಸ ಕೆಂಪಯ್ಯನಹುಂಡಿ ಗ್ರಾಮದ ನಾಗಣ್ಣ ಎಂಬುವರ ಮನೆ ಬಳಿ ತಮ್ಮ ಗ್ರಾಮಕ್ಕೆ ಬರಲು ರಸ್ತೆಯ ಎಡ ಬದಿಯಲ್ಲಿ ನಿಧಾನವಾಗಿ ಬೈಕ್ ಓಡಿಸಿಕೊಂಡು ಹೋಗುತ್ತಿದ್ದ ವೇಳೆ ತಿ.ನರಸೀಪುರ ಕಡೆಯಿಂದ ಅತಿ ವೇಗವಾಗಿ ಬಂದ ಸ್ವಿಫ್ಟ್ (KA.11, B.0860) ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡ ಮೂರ್ತಿ ಸ್ಥಳದಲ್ಲೇ ಸಾವನ್ನಪ್ಪಿದರೇ, ಗಾಯಗೊಂಡ ಮಂಜುಳಾ ಅವರನ್ನು ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆ ಸಂಬಂಧ ಮೂರ್ತಿ ಅವರ ಪತ್ನಿ ಭಾಗ್ಯ ನೀಡಿದ ದೂರಿನ ಮೇರೆಗೆ ತಿ.ನರಸೀಪುರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ. ಸ್ಥಳಕ್ಕೆ ಸಿಪಿಐ ಧನಂಜಯ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂಬಂಧ ತಿ.ನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉನ್ನತ ಶ್ರೇಣಿಯಲ್ಲಿ ಉತ್ತೀರ್ಣ



ಭೇರ್ಯ, ಏ.13– ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕೆ.ಆರ್.ಪೇಟೆ ಪಟ್ಟಣದ ಕ್ರೈಸ್ಟ್ ದ ಕಿಂಗ್ ಪಿಯು ಕಾಲೇಜಿನ ವಿದ್ಯಾರ್ಥಿ ದಿಗಂತ್ ಸಿ.ಗೌಡ, ವಿಜ್ಞಾನ ವಿಭಾಗದಲ್ಲಿ 600ಕ್ಕೆ 530 (89%) ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಈತ ಭೇರ್ಯ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕಿ ತಾರಾ ಮತ್ತು ಸಿ.ಎಂ.ಚಂದ್ರಶೇಖರ್ ದಂಪತಿ ಪುತ್ರ. ವಿದ್ಯಾರ್ಥಿ ದಿಗಂತ್, ಸಿ.ಗೌಡ ಅವರನ್ನು ಮಾಜಿ ಸಚಿವ ಸಾ.ರಾ.ಮಹೇಶ್ ಅಭಿನಂದಿಸಿದ್ದಾರೆ.

ವಿಜೃಂಭಣೆಯ ರಾಕಸಮ್ಮನವರ ಪೂಜಾ ಮಹೋತ್ಸವ



ಹುಣಸೂರು, ಏ.13– ನಗರದ ಶಿವಜ್ಯೋತಿ ನಗರ ಬಡಾವಣೆಯಲ್ಲಿರುವ ಶ್ರೀರಾಕಸಮ್ಮ ದೇವಾಲಯದ 52ನೇ ಪೂಜಾ ಮಹೋತ್ಸವ ವಿಜೃಂಭಣೆಯಿಂದ ಜರುಗಿತು.

3 ದಿನ ನಡೆದ ಪೂಜಾ ಕೈಂಕರ್ಯದಲ್ಲಿ ಹುಣಸೂರು, ಹೆಚ್.ಡಿ.ಕೋಟೆ ತಾಲೂಕಿನ ಗಾಣಿಗ ಸಮುದಾಯದ ನೂರಾರು ಮಂದಿ ಭಾಗವಹಿಸಿ ಪೂಜೆ ಸಲ್ಲಿಸಿದರು. ಹರಕೆ ಹೊತ್ತಿದ್ದವರು ಬಲಿ ಸಮರ್ಪಿಸಿ ಹರಕೆ ತೀರಿಸಿದರು. ದೇವಾಲಯ ಹಾಗೂ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿತ್ತು.

ಮೊದಲ ದಿನ ಶ್ರೀರಾಕಸಮ್ಮ ದೇವಿ ಉತ್ಸವ ಮೂರ್ತಿಯನ್ನು ಲಕ್ಷ್ಮಣತೀರ್ಥ ನದಿಗೆ ತಂದು ಸಂಪ್ರದಾಯದಂತೆ, ಪೂಜಾರಿ ಚಿಕ್ಕರಾಜ ನೇತೃತ್ವದಲ್ಲಿ ಹೋಮ–ಹವನ ನಡೆಸಿದರು. ನಂತರ ಛತ್ರಿ–ಚಾಮರ, ಮಂಗಳವಾದ್ಯ, ನಗಾರಿ ಸದ್ದಿನೊಂದಿಗೆ ಅಲಂಕೃತ ಪಲ್ಲಕ್ಕಿಯಲ್ಲಿ ರಾಕಸಮ್ಮ ಉತ್ಸವಮೂರ್ತಿ ಮೆರವಣಿಗೆ ಪಂಪ್ ಹೌಸ್ ವೃತ್ತ, ದಾವಣಿ ಬೀದಿ ವೃತ್ತ, ಹೆಚ್.ಡಿ.ಕೋಟೆ ವೃತ್ತ, ಜೆಎಲ್‌ಬಿ ರಸ್ತೆ, ಗಣೇಶಗುಡಿ ಬೀದಿ, ದೊಡ್ಡ ಮಸೀದಿ ರಸ್ತೆ, ಲಾಲ್‌ನ್ ಬೀದಿ ಮೂಲಕ ಸಾಗಿ ಶಿವಜ್ಯೋತಿ ನಗರದ ದೇವಸ್ಥಾನದಲ್ಲಿ ಅಂತ್ಯಗೊಂಡಿತು.

ಪೂಜಾ ಮಹೋತ್ಸವದಲ್ಲಿ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ತಮಟೆ ಸದ್ದಿಗೆ ಹೆಜ್ಜೆ ಹಾಕಿದರು. ಶಾಸಕರ ಪತ್ನಿ ವರ್ಷ ಹರೀಶ್‌ಗೌಡ, ರಾಜ್ಯ ಗಾಣಿಗರ ಅಭಿವೃದ್ಧಿ ನಿಗಮದ ಅಧ್ಯಕ್ಷ ಅನಂತು, ರಾಜ್ಯ ಗಾಣಿಗರ ಸಂಘದ ನಿರ್ದೇಶಕ ಡಾ.ಯೋಗೇಶ್, ಜಿಲ್ಲಾಧ್ಯಕ್ಷ ಉಮೇಶ್, ಶಿವಕುಮಾರ್, ಸುಬ್ರಹ್ಮಣ್ಯ, ತಾಲೂಕು ಅಧ್ಯಕ್ಷರಾದ ಮಾದಶೆಟ್ಟಿ, ಗಾಣಿಗ ವಿದ್ಯಾರ್ಥಿ ನಿಲಯದ ಅಧ್ಯಕ್ಷ ಪಾರ್ಥ ಸಾರಥಿ, ಗಾಣಿಗ ಹಿತೈಷಿ ಬಳಗದ ಅಧ್ಯಕ್ಷ ಚನ್ನಕೇಶವ, ಮಾಜಿ ನಗರ ಪಾಲಿಕೆ ಸದಸ್ಯ ನಂದಕುಮಾರ್ ಮತ್ತಿತರ ಮುಖಂಡರು ದೇವರ ದರ್ಶನ ಪಡೆದರು. ಸುಮಾರು 10 ಸಾವಿರ ಮಂದಿ ಭಕ್ತರು ಅನ್ನದಾಸೋಹದಲ್ಲಿ ಪ್ರಸಾದ ಸ್ವೀಕರಿಸಿದರು.

ಮನೆಗಳಿಗೆ ಸಿಲಿಂಡರ್ ಸರಬರಾಜು ಮಾಡಲು ಕ್ರಮ ಕೈಗೊಳ್ಳಿ

ಗ್ಯಾಸ್ ವಿತರಕರಿಗೆ ಶಾಸಕ ದರ್ಶನ್ ಧ್ರುವನಾರಾಯಣ್ ಸೂಚನೆ

ನಂಜನಗೂಡು, ಏ.13– ಸಾರ್ವಜನಿಕರಿಗೆ ತೊಂದರೆಯಾಗದಂತೆ ಗ್ಯಾಸ್ ವಿತರಕರು ಮನೆಗಳಿಗೆ ಸಿಲಿಂಡರ್ ಸರಬರಾಜು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಧ್ರುವನಾರಾಯಣ್ ಸೂಚಿಸಿದರು.

ನಗರದ ತಾಪಂನಲ್ಲಿರುವ ಶಾಸಕರ ಕಚೇರಿಯಲ್ಲಿ ಗ್ಯಾಸ್ ವಿತರಕರ ಸಭೆ ನಡೆಸಿ ಮಾತನಾಡಿದ ಅವರು, ಸಾರ್ವಜನಿಕರಿಂದ ಸರಿಯಾಗಿ ಗ್ಯಾಸ್ ಸಿಲಿಂಡರ್ ಸರಬರಾಜು ಆಗುತ್ತಿಲ್ಲ. ಗ್ಯಾಸ್ ಬುಕ್ ಮಾಡಿದರೆ ಓಟಿಪಿ ಬರುತ್ತಿಲ್ಲ ಎಂಬ ಬಗ್ಗೆ ವ್ಯಾಪಕ ದೂರು ಕೇಳಿ ಬಂದಿದೆ. ವಾಸ್ತವವಾಗಿ ನಾನೇ ನಮ್ಮ ಮನೆಗೆ ಗ್ಯಾಸ್ ಬುಕ್ ಮಾಡಿದರೆ ಓಟಿಪಿಯೇ ಬರುತ್ತಿಲ್ಲ. ಆದ್ದರಿಂದ ಏಜೆನ್ಸಿಯವರು ಕ್ರಮ ಕೈಗೊಂಡು ಸಾರ್ವಜನಿಕರಿಗೆ ತೊಂದರೆ ಆಗದಂತೆ ಸಿಲಿಂಡರ್ ಸರಬರಾಜು ಮಾಡಬೇಕು. ದೇಶಾದ್ಯಂತ ಸಿಲಿಂಡರ್ ಸರಬರಾಜಿನಲ್ಲಿ ಅಭಾವವಿದೆ. ಹೀಗಾಗಿ ತಾಲೂಕಿನಲ್ಲಿ ತೊಂದರೆಯಾಗದಂತೆ ಜವಾಬ್ದಾರಿಯುತವಾಗಿ ಕೆಲಸ ನಿರ್ವಹಿಸಬೇಕು. ಒಂದು ವೇಳೆ ಸಿಲಿಂಡರ್ ಕಾಳಸಂತೆಯಲ್ಲಿ ಮಾರಾಟವಾದರೆ ನಿಮ್ಮ ಮೇಲೆ ಕ್ರಮ ವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ಶಾಸಕ ದರ್ಶನ್ ಧ್ರುವನಾರಾಯಣ್ ಗ್ಯಾಸ್ ವಿತರಕರೊಂದಿಗೆ ಸಭೆ ನಡೆಸಿದರು.

ಈಗಾಗಲೇ ಸಾರ್ವಜನಿಕರು ಸಿಲಿಂಡರ್‌ಗಾಗಿ ಸಾಲುಗಟ್ಟಿ ನಿಲ್ಲುತ್ತಿದ್ದಾರೆ. ಗ್ಯಾಸ್ ವಿತರಣೆಯಲ್ಲಿ ತೊಂದರೆ ಇಲ್ಲ. ನಿಮ್ಮ ಮನೆಗೆ ಸರಬರಾಜು ಮಾಡುತ್ತಿವೆ ಎಂದು ಗ್ಯಾಸ್ ಸರಬರಾಜುದಾರರು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಮುಂದಾಗಬೇಕು. ಸಿಲಿಂಡರ್‌ಗಾಗಿ ಸಾಲುಗಟ್ಟಿ ನಿಲ್ಲಿಸದೆ ಅವರ ಮನೆಗಳಿಗೆ ಸಿಲಿಂಡರ್ ಸರಬರಾಜು ಆಗುವಂತೆ ಕ್ರಮ ವಹಿಸಬೇಕು ಎಂದರು.

ಗ್ಯಾಸ್ ವಿತರಕ ಗೋವರ್ಧನ್ ಮಾತನಾಡಿ, ಕೊಲ್ಲಿ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದಿಂದಾಗಿ ಸಿಲಿಂಡರ್ ಸಿಗುವುದಿಲ್ಲ ಎಂದು ಸಾರ್ವಜನಿಕರು ಭಯದಿಂದ ಸಿಲಿಂಡರ್ ಬುಕ್ ಮಾಡುತ್ತಿದ್ದಾರೆ. ಸರಬರಾಜಿಗಿಂತ ಬೇಡಿಕೆ ಹೆಚ್ಚಾಗಿರುವುದರಿಂದ ತೊಂದರೆಯಾಗುತ್ತಿದೆ. ನಿತ್ಯ 500 ರಿಂದ 500 ಬುಕ್ಕಿಂಗ್ ಬರುತ್ತಿದೆ. ಆದರೆ 340 ಸಿಲಿಂಡರ್ ಸರಬರಾಜು ಮಾಡಲಾಗುತ್ತಿದೆ. ತಾವು ಸಿಲಿಂಡರ್‌ಗಾಗಿ ಏಜೆನ್ಸಿ ಕಚೇರಿಗೆ ಬರಬೇಡಿ. ಒಂದು ದಿನ ತಡವಾದರೂ ಸಹ ನಿಮ್ಮ ಮನೆ ಬಾಗಿಲಿಗೆ ಸಿಲಿಂಡರ್ ಬರುತ್ತದೆ ಎಂದು ಮೈಕ್ ಮೂಲಕ ಜನರಿಗೆ ತಿಳುವಳಿಕೆ ಮೂಡಿಸಲಾಗುತ್ತಿದೆ ಎಂದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ನಗರಸಭಾ ಮಾಜಿ ಅಧ್ಯಕ್ಷ ಶ್ರೀಕಂಠಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ತಾಪಂ ಇಓ ಜೆರಾಲ್ಡ್ ರಾಜೇಶ್, ತಹಸೀಲ್ದಾರ್ ಸ್ಮಿತಾ ರಾಮು ಸೇರಿದಂತೆ ಇತರರಿದ್ದರು.

ಮೂರನೇ ಪುಟದಿಂದ

ಪುನರ್ರಚನೆಗೆ ಕೇಳುವ ಸಮಯವಲ್ಲ...!

ಸಂಪುಟ ಪುನರ್ರಚನೆಗೆ ಅವಕಾಶ ನೀಡಬೇಡಿ: ಸುದ್ದಿಗಾರರ ಭೇಟಿಗೂ ಮುನ್ನ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಸುಮಾರು 30 ನಿಮಿಷಗಳ ಕಾಲ ಮುಖಾಮುಖಿ ಚರ್ಚೆ ನಡೆಸಿದರು. ಮಾತುಕತೆ ವೇಳೆ ಅಧಿಕಾರ ಹಸ್ತಾಂತರ ಕುರಿತ ವಿಷಯ ಬಗೆಹರಿಯುವವರೆಗೂ ಸಂಪುಟ ಪುನರ್ರಚನೆಗೆ ಅವಕಾಶ ನೀಡಬಾರದು ಎಂದು ಖರ್ಗೆ ಅವರಲ್ಲಿ ಶಿವಕುಮಾರ್ ಮನವಿ ಮಾಡಿಕೊಂಡಿದ್ದಾರೆ. ಸಿದ್ದರಾಮಯ್ಯ ಅಧಿಕಾರ ವಹಿಸಿ ಕೊಂಡು ಬರುವ ಮೇ 20ಕ್ಕೆ ಮೂರು ವರ್ಷ ಪೂರ್ಣಗೊಳ್ಳಲಿದೆ. ಅವರು ತಮಗೆ ಕೊಟ್ಟ ಭರವಸೆಯಂತೆ ಅಧಿಕಾರ ಹಸ್ತಾಂತರ ಮಾಡಲು ಮುಂದಾಗುತ್ತಿಲ್ಲ. ನೀವು ಮಧ್ಯ ಪ್ರವೇಶ ಮಾಡಿ, ನನಗೆ ಅಧಿಕಾರ ಕೊಡಿಸಿ, ಅಲ್ಲಿಯವರೆಗೂ ಸಿದ್ದರಾಮಯ್ಯ ಯಾವುದೇ ರಾಜಕೀಯ ನಿರ್ಧಾರಗಳನ್ನು ಕೈಗೊಳ್ಳಲು ಅವಕಾಶ ಮಾಡಿಕೊಡಬೇಡಿ ಎಂದು ಮನವಿ ಮಾಡಿಕೊಂಡಿದ್ದಾರಂತೆ.

ಇದೇ ಸಂದರ್ಭದಲ್ಲಿ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನ ಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯಲ್ಲಿ ಕೆಲವು ಅಲ್ಪಸಂಖ್ಯಾತ ನಾಯಕರು ಪಕ್ಷ ವಿರೋಧಿ ಚಟುವಟಿಕೆ ನಡೆಸಿರುವುದು, ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿರುವುದೂ ಸೇರಿದಂತೆ ಕೆಲವು ಮಾಹಿತಿ ಗಳನ್ನು ಖರ್ಗೆ ಅವರಿಗೆ ಶಿವಕುಮಾರ್ ನೀಡಿದ್ದಾರೆ.

ಮತ್ತೆ ವಿಧಾನಸೌಧಕ್ಕೆ ಬರಬಹುದು!

ಹೋರಾಟ ನಡೆಸಿ ಎನ್‌ಡಿಎ ಅಧಿಕಾರಕ್ಕೆ ತರುವುದೇ ನಮ್ಮ ಗುರಿ. ಈ ಗುರಿ ಸಾಧಿಸಲು ನಾವು ಒಗ್ಗಟ್ಟಿನಿಂದ ಕೆಲಸ ಮಾಡಬೇಕಿದೆ. ಅದನ್ನು ಮಾಡುತ್ತೇವೆ. ಅಧಿಕಾರ ಹಿಡಿದ ನಂತರ ಯಾರು ಮುಖ್ಯ ಮಂತ್ರಿ ಆಗಬೇಕು ಎಂಬುದನ್ನು ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ವರಿಷ್ಠರು ತೀರ್ಮಾನಿಸುತ್ತಾರೆ. ಇಂತಹ ಸನ್ನಿವೇಶದಲ್ಲಿ ಜನರ ಆಶೀರ್ವಾದ ಮತ್ತು ಭಗವಂತನ ಕೃಪೆ ಇದ್ದರೆ ಮತ್ತೆ ವಿಧಾನಸೌಧಕ್ಕೆ ಬರಬಹುದು ಎಂದರು.

500 ಎಕರೆ ಸೂಕ್ತ ಭೂಮಿ ಕಲ್ಪಿಸಲು ಸೂಚನೆ

ಹಬ್ ಅಭಿವೃದ್ಧಿಪಡಿಸುವುದು ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾಯಿತು. ನಂತರ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಎಂ.ಬಿ.ಪಾಟೀಲ್, ಇದಕ್ಕೆ ಕೇಂದ್ರ ಸಚಿವ ಕುಮಾರಸ್ವಾಮಿ ಒಪ್ಪಿಗೆಯೂ ಇದ್ದು, ಮಂಡ್ಯ ಜಿಲ್ಲೆಯಲ್ಲಿ ಸರಕಾರಿ ಅಥವಾ ಖಾಸಗಿ ಜಮೀನು ಗುರುತಿಸುವಂತೆ ವಿಶೇಷ ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ ಎಂದರು.

ವಾಹನಗಳ ಪರೀಕ್ಷೆ ನಡೆಸಿ, ಪ್ರಮಾಣಪತ್ರ ನೀಡುವ ಎಆರ್‌ಎಐ ಕೇಂದ್ರ ಸ್ಥಾಪನೆಗೆ ಮಂಡ್ಯ ಜಿಲ್ಲೆಯಲ್ಲಿ 100 ಎಕರೆ ಕೇಳಿದ್ದರು. ನಾವು ಬಸರಾಳು ಬಳಿ 105 ಎಕರೆ ತೋರಿಸಿದ್ದೆವು. ಇದು ಬಹುಮಟ್ಟಿಗೆ ಒಪ್ಪಿಗೆಯಾಗಿದೆ.

ಆದರೆ ಕೈಗಾರಿಕಾ ಹಬ್ ಅಭಿವೃದ್ಧಿ ಚಿಂತನೆ ಇದ್ದು ಪರ್ಯಾಯ ಜಾಗಕ್ಕೆ ಸಲಹೆ ನೀಡಲಾಗಿದೆ. ಬೆಂಗಳೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿಗೆ ಅಂಟಿಕೊಂಡಿರುವ ಬೆಳ್ಳೂರು ಬಳಿ 2021ರಲ್ಲಿ ಕೈಗಾರಿಕಾ ಉದ್ದೇಶಕ್ಕೆ 425 ಎಕರೆ ಸ್ವಾಧೀನ ಪಡಿಸಿಕೊಳ್ಳಲಾಗಿದ್ದು, ಪರಿಹಾರ ವಿತರಣೆ ಬಾಕಿ ಇದೆ. ಈ ಜಾಗವನ್ನೂ ಪರಿಶೀಲಿಸುವಂತೆ ಕೇಂದ್ರ ಸರ್ಕಾರಕ್ಕೆ ಕೋರಲಾಗಿದೆ. ಅಲ್ಲದೆ, ಮಂಡ್ಯ ಸಮೀಪದ ತೂಬಿನಕೆರೆ ಕೈಗಾರಿಕಾ ಪ್ರದೇಶಕ್ಕೆ ಹೊಂದಿಕೊಂಡಿರುವ ಪಾಂಡವಪುರ ಹಾಗೂ ಮಂಡ್ಯ ತಾಲೂಕುಗಳ ಅಂಚಿನಲ್ಲಿಯೂ ಕೈಗಾರಿಕಾ ಹಬ್ ಸ್ಥಾಪಿಸಬಹುದು ಎಂಬ ಸಲಹೆ ಸಭೆಯಲ್ಲಿ ವ್ಯಕ್ತವಾಗಿದೆ, ಭೂಮಿ ಲಭ್ಯತೆ ವರದಿ ಬಳಿಕ ಮತ್ತೊಂದು ಸುತ್ತಿನ ಸಭೆ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಕೈಗಾರಿಕಾ ಹಬ್ ಸ್ಥಾಪನೆಯಾದರೆ ಬಂಡವಾಳ ಹೂಡಿಕೆ, ಆರ್ಥಿಕ ವಹಿವಾಟು ಮತ್ತು ಉದ್ಯೋಗ ಸೃಷ್ಟಿ ಸಾಧ್ಯವಾಗುತ್ತದೆ. ಮಂಡ್ಯ ಜಿಲ್ಲೆಯಲ್ಲೇ ಉತ್ಪಾದನಾ ಘಟಕ ಸ್ಥಾಪಿಸಲು ಆಂಡ್ರ್ಯೂ ಲೂಯಿ ಕಂಪನಿ ಲಿಮಿಟೆಡ್ ಸಂಸ್ಥೆಗೆ (ಎಎಲ್‌ಸಿಎಲ್) 25 ರಿಂದ 50 ಎಕರೆ ಭೂಮಿ ಅಗತ್ಯವಿದೆ ಎಂಬುದನ್ನು ಗಮನಕ್ಕೆ ತರಲಾಗಿದೆ. ಕೈಗಾರಿಕೆಗಳಿಗೆ ಅಗತ್ಯವಿರುವ ಎಲೆಕ್ಟ್ರಿಕ್ ಸಾಧನಗಳು, ಬೃಹತ್ ಫ್ಯಾನುಗಳು, ವಿದ್ಯುತ್ ಪರಿವರ್ತಕ ಮುಂತಾದವನ್ನು ಈ ಸಂಸ್ಥೆ ತಯಾರಿಸುತ್ತದೆ, ಅಗತ್ಯ ಭೂಮಿ ಒದಗಿಸಲಾಗುವುದು.

ರಾಜ್ಯಕ್ಕೆ ಹೆಚ್ಚು ಉದ್ಯಮಗಳು ಬರಬೇಕು. ಇದಕ್ಕೆ ತಕ್ಕ ನೀತಿ ಮತ್ತು ಪರಿಸರ ನಮ್ಮಲ್ಲಿದೆ, ಹೊಸ ಕೈಗಾರಿಕಾ ನೀತಿಯಲ್ಲಿ ಇವುಗಳಿಗೆ ಒತ್ತು ಕೊಡಲಾಗಿದೆ ಎಂದರು. ಸಭೆಯಲ್ಲಿ ಶಾಸಕ ರವಿಕುಮಾರ್ ಗಣಿಗ, ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ, ಸೇರಿದಂತೆ ಕೇಂದ್ರ ಹಾಗೂ ರಾಜ್ಯ ಕೈಗಾರಿಕಾ ಇಲಾಖೆ ಅಧಿಕಾರಿಗಳು, ಮಂಡ್ಯ ಜಿಲ್ಲೆ ಅಧಿಕಾರಿಗಳು ಉಪಸ್ಥಿತರಿದ್ದರು.

> "ನಾನು ಕೂಡ ಭೂಮಿ ನೀಡುವ ಬಗ್ಗೆ ಸಚಿವರಿಗೆ ಒಂದು ಸಲಹೆ ನೀಡಿದ್ದೇನೆ. ಒಂದೆಡೆ 500 ಎಕರೆ ಸರ್ಕಾರಿ ಭೂಮಿ ಇದೆ. ಯಾರಾದರೂ ರೈತರು ಅನುಭೋಗದಲ್ಲಿದ್ದರೆ ಅವರಿಗೆ ಸೂಕ್ತ ಪರಿಹಾರ ನೀಡಿ ಭೂಮಿ ತೆಗೆದುಕೊಳ್ಳಬಹುದು. ಈ ಬಗ್ಗೆ ನಾನು ಆ ರೈತರ ಜೊತೆ ಒಮ್ಮೆ ಚರ್ಚಿಸಿದ್ದೇನೆ. ಅದಕ್ಕೆ ಅವರಿಂದ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿದೆ. ಅದೇ ರೀತಿ ಮುಂಗಡ ಪತ್ರದಲ್ಲಿ 100 ಎಕರೆ ಇರುವುದಾಗಿ ಸ್ವತಃ ಸಿಎಂ ಬಜೆಟ್‌ನಲ್ಲಿ ಘೋಷಿಸಿದ್ದರು.
> - ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ.

> "ಮಂಡ್ಯದ ಬಸರಾಳು ಬಳಿ ಎಆರ್‌ಎಐ (ಆಟೋಮೋಟಿವ್ ರೀಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ) ಸ್ಥಾಪನೆಗೆ ಮೊದಲು ಕೇಂದ್ರ ಸಚಿವ ಕುಮಾರಸ್ವಾಮಿ 100 ಎಕರೆ ಭೂಮಿ ಕೇಳಿದ್ದರು. ಆದರೆ, ಮಂಡ್ಯದಲ್ಲಿ ಕಾರ್ಖಾನೆ ನಿರ್ಮಿಸುವ ಬಗ್ಗೆ ಇಂದು ವಿಧಾನ ಸೌಧದಲ್ಲಿ ನಡೆದ ಸಭೆಯಲ್ಲಿ 500 ಎಕರೆ ಜಾಗ ಬೇಕೆಂದು ಬೇಡಿಕೆ ಮಂಡಿಸಿದ್ದಾರೆ. ಹಾಗಾಗಿ ಬಸರಾಳಿನಲ್ಲಿ ಕೈಗಾರಿಕೆ ಸ್ಥಾಪನೆ ಆಗುವುದಿಲ್ಲ.
> - ರವಿಕುಮಾರ್ ಗಣಿಗ, ಮಂಡ್ಯ ಶಾಸಕ.

'ಪಾರ್ಕಿಂಗ್ ಲಾಟ್' ನಿರ್ಧಾರ



ಸಾರ್ವಜನಿಕರಿಗೆ ತೀವ್ರ ತೊಂದರೆ ಎದುರಾಗುತ್ತಿದೆ. ಶಿವರಾಂ ಪೇಟೆ, ವಿನೋಬಾ ರಸ್ತೆ, ಕೃಷ್ಣವಿಲಾಸ ರಸ್ತೆಯಲ್ಲಿ ಬಹಳಷ್ಟು ಸ್ಥಳಗಳಲ್ಲಿ ನೋ ಪಾರ್ಕಿಂಗ್ ಫಲಕ ಹಾಕಲಾಗಿದೆ. ಇದರಿಂದ ವಾಹನ ನಿಲುಗಡೆಗೆ ಸ್ಥಳವಿಲ್ಲದೆ ವಾಹನ ಸವಾರರು ಪರದಾಡುತ್ತಿದ್ದಾರೆ. ತುರ್ತಾಗಿ ಹೋಗುವವರು ಅಡ್ಡಾ ದಿಡ್ಡಿಯಾಗಿ ಕಾರು, ಬೈಕ್, ಸ್ಕೂಟರ್ ಸೇರಿದಂತೆ ಇತರೆ ವಾಹನ ನಿಲ್ಲಿಸಿ ಹೋಗುತ್ತಾರೆ. ಇದರಿಂದ ಈ ರಸ್ತೆಗಳಲ್ಲಿ ಟ್ರಾಫಿಕ್ ಜಾಮ್ ದಿನ ನಿತ್ಯದ ಗೋಳಾಗಿದೆ.

ಈ ಹಿನ್ನೆಲೆಯಲ್ಲಿ ನಂಜರಾಜ ಬಹದ್ದೂರ್ ಛತ್ರದ ಹಿಂಭಾಗ ಖಾಲಿ ಇರುವ ಸ್ಥಳದಲ್ಲಿ ಪಾರ್ಕಿಂಗ್ ಲಾಟ್ ನಿರ್ಮಿಸಲು ಜಿಲ್ಲಾಡಳಿತ ನಿರ್ಧರಿಸಿದೆ. ಎರಡೂವರೆ ಎಕರೆ ಪ್ರದೇಶದಲ್ಲಿ ಪಾರ್ಕಿಂಗ್ ಲಾಟ್ ನಿರ್ಮಾಣ ಮಾಡಿದರೆ ದೇವರಾಜ ಅರಸ್ ರಸ್ತೆ, ಶಿವರಾಂ ಪೇಟೆ, ಕೃಷ್ಣವಿಲಾಸ ರಸ್ತೆ, ವಿನೋಬಾ ರಸ್ತೆ ಸೇರಿದಂತೆ ಇತರೆ ವಾಹನ ನಿಲುಗಡೆ ದಟ್ಟಣೆ ಕಡಿಮೆಯಾಗುತ್ತದೆ.

ಈ ಹಿನ್ನೆಲೆಯಲ್ಲಿ ನಂಜರಾಜ ಬಹದ್ದೂರ್ ಛತ್ರದ ಹಿಂಭಾಗದಲ್ಲಿ ಖಾಲಿ ಬಿದ್ದಿರುವ ಸ್ಥಳವನ್ನು ಸಾರ್ವಜನಿಕರ ವಾಹನ ನಿಲುಗಡೆಗೆ ಬಳಸಿಕೊಳ್ಳಲು ತೀರ್ಮಾನ ಮಾಡಲಾಗಿದೆ.

ಈ ಸಂಬಂಧ ಛತ್ರದ ಹಿಂಭಾಗ ಪಾರ್ಕಿಂಗ್ ಲಾಟ್‌ಗಾಗಿ ಜಾಗ ಗುರುತಿಸುವಿಕೆ, ವಾಹನಗಳನ್ನು ನಿಲುಗಡೆಯ ಸಾಮರ್ಥ್ಯ, ಎಷ್ಟು ಮೊತ್ತಕ್ಕೆ ಟೆಂಡರ್ ಮೊತ್ತ ನಮೂದಿಸಬೇಕು ಎಂಬುವ ವಿಚಾರಗಳ ಬಗ್ಗೆ ವರದಿ ನೀಡುವಂತೆ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಅವರು ಮುಜರಾಯಿ ಇಲಾಖೆ ವ್ಯಾಪ್ತಿಗೊಳಪಡುವ ನಂಜರಾಜ ಬಹದ್ದೂರ್ ಛತ್ರದ ಎಕ್ಸಿಕ್ಯೂಟಿವ್ ಆಫೀಸರ್ ರಘು ಅವರಿಗೆ ಸೂಚನೆ ನೀಡಿದ್ದಾರೆ. ರಘು ಅವರು ಈಗಾಗಲೇ ಅಧ್ಯಯನ ಪ್ರಕ್ರಿಯೆ ಆರಂಭಿಸಿದ್ದು, ಈ ವಾರದೊಳಗೆ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಅವರಿಗೆ ವರದಿ ನೀಡಲಿದ್ದಾರೆ. ತರುವಾಯ ಟೆಂಡರ್ ಕರೆಯುವ ಪ್ರಕ್ರಿಯೆ ಆರಂಭಿಸಲಾಗುತ್ತದೆ.

ಮಹಿಳೆಯರಿಗೆ ಶೇ. 33 ಮೀಸಲಾತಿ ನಾರಿ ಶಕ್ತಿ ಪ್ರತೀಕ



ಬೆಂಗಳೂರು, ಏ.13(ಕೆಎಂಶಿ)– ಮಹಿಳೆಯರಿಗೆ ಶೇ.33 ಮೀಸಲಾತಿ ನೀಡಬೇಕೆಂಬ ತೀರ್ಮಾನ ಸುವರ್ಣಾಕ್ಷರದಲ್ಲಿ ಬರೆದಿಡುವಂತಹ ಮಹತ್ವದ ಕ್ಷಣ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ಬಣ್ಣಿಸಿದ್ದಾರೆ. ದೆಹಲಿಯಲ್ಲಿ ನಡೆದ ನಾರಿ ಶಕ್ತಿ ವಂದನ ಸಮ್ಮೇಳನದ ನೇರಪ್ರಸಾರ ವೀಕ್ಷಣೆ ನಂತರ ಮಾತನಾಡಿದ ಅವರು, ದೇಶದ ನಾರಿಶಕ್ತಿ ಬಗ್ಗೆ ಮೋದಿ ಅವರು ಅಚಲ ವಿಶ್ವಾಸ ಇಟ್ಟುಕೊಂಡಿದ್ದಾರೆ ಎಂದರು. ರಾಷ್ಟ್ರ ನಿರ್ಮಾಣದಲ್ಲಿ ನಾರಿ ಶಕ್ತಿಯ ಪಾತ್ರದ ಮಹತ್ವವನ್ನು ದೇಶವಲ್ಲದೇ ಜಗತ್ತಿಗೇ ಪ್ರಧಾನಿ ಮೋದಿ ತಿಳಿ ಹೇಳಿದ್ದಾರೆ. ಭಾರತ 2047ರ ವೇಳೆಗೆ ಅಭಿವೃದ್ಧಿಶೀಲ ರಾಷ್ಟ್ರವಾಗಿ ಪರಿವರ್ತನೆ ಹೊಂದುವಲ್ಲಿ ಮಹಿಳೆಯರ ಪಾತ್ರ ಬಹಳ ಮಹತ್ವವಾದುದು, ಮಹಿಳಾ ಮೀಸಲಾತಿಯ ಹಲವು ದಶಕಗಳ ಕನಸು ನನಸಾಗುತ್ತಿದೆ. ಮಹಿಳಾ ಮೀಸಲಾತಿ ಅನುಷ್ಠಾನದಲ್ಲಿ ಎಲ್ಲ ರಾಜಕೀಯ ಪಕ್ಷಗಳ ಪಾತ್ರ ಇದೆ ಎಂಬುದನ್ನು ಪ್ರಧಾನಿ ಸ್ಮರಿಸಿದ್ದಾರೆ. ಮಹಿಳೆಯರಿಗೆ ಶೇ.33 ಮೀಸಲಾತಿಯ ದೃಢಸಂಕಲ್ಪದ ತೀರ್ಮಾನವನ್ನು ಎಲ್ಲರೂ ಸಂತೋಷದಿಂದ ಸ್ವಾಗತಿಸಬೇಕು ಎಂದರು.

ಶಿಕ್ಷಣದಿಂದ ಉತ್ತಮ ನಾಗರಿಕರಾಗಲು ಸಾಧ್ಯ

ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕ ಡಾ.ಡಿ.ಎಸ್.ಪ್ರತಿಮಾ ಅಭಿಮತ

ಮೈಸೂರು,ಏ.13(ಎಂಟಿವೈ)– ಶಿಕ್ಷಣ ಜ್ಞಾನ ವೃದ್ಧಿಯೊಂದಿಗೆ ತ್ಯಾಗ ಮತ್ತು ಸೇವಾಮನೋಭಾವ ಬೆಳೆಸುತ್ತದೆ ಎಂದು ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕರಾದ ಡಾ.ಡಿ.ಎಸ್.ಪ್ರತಿಮಾ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕುವೆಂಪುನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಗಣದಲ್ಲಿ ಸೋಮವಾರ ಅಯೋಜಿಸಿದ್ದ ಕ್ರೀಡಾ ಚಟುವಟಿಕೆ, ರೇಂಜರ್ಸ್ ಮತ್ತು ರೋವರ್ಸ್, ರೆಡ್‌ಕ್ರಾಸ್ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಗ್ರೇಡ್ ಮಾರ್ಕ್ಸ್ ನೀಡುವುದರಿಂದ ಅವರ ವಿದ್ಯಾಭ್ಯಾಸ ಉನ್ನತೀಕರಿಸಲು ಸಾಧ್ಯವಿಲ್ಲ. ಅರ್ಹತೆವುಳ್ಳವರು ಸಾಧನೆ ಮಾಡುತ್ತಾರೆ. ಕ್ರೀಡಾ ಸೌಲಭ್ಯಗಳು ದೊರಕಿದರೆ ಸಾಧನೆ ಮಾಡಲು ಸಾಧ್ಯ. ದೈಹಿಕವಾಗಿ ಸಾಮರ್ಥ್ಯವಿದ್ದಾಗ ಉತ್ತಮ ಆಲೋಚನೆ ಮಾಡಿ ಜೀವನದಲ್ಲಿ ಸಾಧನೆ ಮಾಡಬಹುದು. ಶಿಸ್ತು, ಸಂಯಮದಿಂದ ವಿದ್ಯಾರ್ಥಿಗಳು ಪಾಲಿಸಬೇಕು. ಶಿಕ್ಷಕರು ಹೇಳಿ ಕೊಡುವ ಪಾಠ ಆಲಿಸಬೇಕು. ವಿದ್ಯೆ ಕಲಿತ ನಂತರ ಜೀವನದಲ್ಲಿ ಉತ್ತಮ ನಾಗರಿಕರಾಗಲು ಸಾಧ್ಯ ಎಂದು ಹೇಳಿದರು.

ಶಿಕ್ಷಣ ಕ್ಷೇತ್ರ ಅಭಿವೃದ್ಧಿ ಹೊಂದಿದಾಗ ಮಾತ್ರ ಕ್ರೀಡಾ ಮತ್ತು ಕಲೆ, ಸಂಸ್ಕೃತಿ ಕ್ಷೇತ್ರ ಅಭಿವೃದ್ಧಿ ಸಾಧಿಸುತ್ತದೆ. ಈ ಎರಡು ಕ್ಷೇತ್ರಗಳು ಬೆಳವಣಿಗೆಯಾಗಬೇಕಾದರೆ ಶಾಲಾ–ಕಾಲೇಜುಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡೆ, ಕಲೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.



ಮೈಸೂರಿನ ಕುವೆಂಪುನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಸೋಮವಾರ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಸಮಾರೋಪ ಸಮಾರಂಭ ಜರುಗಿತು.

ಕರ್ನಾಟಕ ಸಂಘದ(ಮಂಡ್ಯ)ಅಧ್ಯಕ್ಷ ಪ್ರೊ.ಬಿ.ಜಯಪ್ರಕಾಶ್ ಗೌಡ ಮಾತನಾಡಿ, ವಿದ್ಯಾರ್ಥಿಗಳ ಏಳಿಗೆಗೆ ಪೋಷಕರು ಹಾಗೂ ಶಿಕ್ಷಕರು ಸಹಕರಿಸ ಬೇಕಾಗುತ್ತದೆ. ವಿದ್ಯಾರ್ಥಿಗಳು, ಪೋಷಕರು ಮತ್ತು ಶಿಕ್ಷಕರು ತಮ್ಮ ತಮ್ಮ ಪಾಲಿನ ಪಾತ್ರವನ್ನು ಪ್ರಾಮಾಣಿಕವಾಗಿ, ಜವಾಬ್ದಾರಿಯುತವಾಗಿ ಮಾಡಿದರೆ ಶಿಕ್ಷಣ ಕ್ಷೇತ್ರ ಬೆಳವಣಿಯಾಗುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಣ ಕ್ರೀಡಾ ಮತ್ತು ಕಲೆ ಸಾಂಸ್ಕೃತಿಕ ಕ್ಷೇತ್ರದ ಅಭಿವೃದ್ಧಿ ಗಾಗಿ ಪ್ರತಿಯೊಬ್ಬರು ಸಹಕರಿಸಬೇಕು ಎಂದರು

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಪ್ರೊ. ಬೆಟ್ಟೇಗೌಡ ಮಾತನಾಡಿ, ಜೀವನದಲ್ಲಿ ಗುರಿ ಮುಖ್ಯ ಗುರಿ ಮುಟ್ಟುವದಾರಿಯೂ ಮುಖ್ಯ. ಶ್ರಮವಿಲ್ಲದೆ ಫಲವಿಲ್ಲ. ಶ್ರಮಕ್ಕೆ ಪರ್ಯಾಯ ಮಾರ್ಗವಿಲ್ಲ. ಜೀವನ ಸಿದ್ಧತೆ ಬೇರೆ. ಪರೀಕ್ಷಾ ಸಿದ್ಧತೆಯೇ ಬೇರೆ. ವಿದ್ಯಾರ್ಥಿಗಳು ನೊಣಗಳಾಗಬಾರದು. ಜೇನು ನೊಣಗಳಾಗಬೇಕು. ಈ ನಿಟ್ಟಿನಲ್ಲಿ ಏಕಾಗ್ರತೆ ಯನ್ನು ಬೆಳೆಸಿಕೊಂಡು ಸಾಧನೆಯತ್ತ ಹೆಜ್ಜೆ ಇಡಬೇಕು. ಸಾಧಿಸುವುದು ಇನ್ನು ಇದೇ ಎಂಬ ಚಿಂತನೆ ನಿಮ್ಮನ್ನು ಕ್ರಿಯಾಶೀಲರನ್ನಾಗಿಸು ತ್ತದೆ. ಸಾಧನೆಗೆ ಶ್ರಮ, ಆತ್ಮವಿಶ್ವಾಸ, ಭರವಸೆ, ನಂಬಿಕೆಯೇ ಮೂಲವಾಗಿದೆ ಎಂದರು. ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ಪ್ರೊ ಸಂಗಪ್ಪ, ಪ್ರೊ.ವಾಸಯ್ಯ ಮತ್ತಿತರರು ಉಪಸ್ಥಿತರಿದ್ದರು.

ಕಳ್ಳತನ ಪ್ರಕರಣ; ಇಬ್ಬರು ಮಹಿಳೆಯರು ಸೇರಿ ಮೂವರ ಬಂಧನ

16.50 ಲಕ್ಷ ಮೌಲ್ಯದ 125 ಗ್ರಾಂ ಚಿನ್ನಾಭರಣ ವಶಕ್ಕೆ

ಮೈಸೂರು, ಏ.13(ಪಿಎಂ)– ಮೂರು ಕಳ್ಳತನ ಪ್ರಕರಣಗಳನ್ನು ಭೇದಿಸಿರುವ ಲಷ್ಕರ್ ಠಾಣೆ ಪೊಲೀಸರು, ಇಬ್ಬರು ಮಹಿಳೆಯರು ಸೇರಿದಂತೆ ಮೂವರನ್ನು ಬಂಧಿಸಿ, ಅವರಿಂದ ಅಂದಾಜು 16,50,000 ರೂ ಮೌಲ್ಯದ ಸುಮಾರು 125 ಗ್ರಾಂ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ.

ತಮಿಳನಾಡು ಮೂಲದ ಪಂಜವರ್ಣವಮ್, ಸುಮದಿ ಹಾಗೂ ರಘು ಬಂಧಿತರು. ರಘು ಎಂಬಾತನಿಗೆ ಪಂಜವರ್ಣಮ್ ಪತ್ನಿಯಾಗಿದ್ದು, ಈತನಿಗೆ ಸುಮದಿ ಸಂಬಂಧಿಯಾಗಿದ್ದಾಳೆ. ಈ ಮೂವರು ಸೇರಿ ಕಳ್ಳತನ ನಡೆಸುತ್ತಿದ್ದರು. ಇದೇ ಜ.24ರಂದು ಮೈಸೂರಿನ ಸಬ್‌ಅರ್ಬನ್ ಬಸ್ ನಿಲ್ದಾಣದಲ್ಲಿ ಗುಂಡ್ಲುಪೇಟೆ ತಾಲೂಕಿನ ರಾಘವಪುರದ ಮಹಿಳೆ ಚಂದ್ರಚೂಡ ಅವರ ಚಿನ್ನಾಭರಣವನ್ನು ಈ ಮೂವರು ಸೇರಿ ಕಳ್ಳತನ ಮಾಡಿದ್ದರು.

ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲು ಪತಿ ಹಾಗೂ ಪುತ್ರನೊಂದಿಗೆ ಮೈಸೂರಿಗೆ ಬಂದಿದ್ದ ಚಂದ್ರಚೂಡ ಅವರು ತಮ್ಮ ಊರಿಗೆ ಮರುಳಲು ಬಸ್ ಹತ್ತುವಾಗ ಜನದಟ್ಟಣೆ ನಡುವೆ ಈ ಖದೀಮರು ತಮ್ಮ ಕೈಚಳಕ ತೋರಿದ್ದರು. ಚಂದ್ರಚೂಡ ಅವರ 40 ಗ್ರಾಂನ ಎರಡು ಎಳೆ ಚಿನ್ನದ ಸರ, ಚಿನ್ನದ ತಾಳಿ, 2 ಚಿನ್ನದ ಗುಂಡು ಸೇರಿದಂತೆ ಒಟ್ಟು 47 ಗ್ರಾಂ ಚಿನ್ನಾ ಭರಣವನ್ನು ಅವರಿಂದ ಕದ್ದು ಕಾಲ್ಕಿತಿದ್ದರು.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಲಷ್ಕರ್ ಪೊಲೀಸ್ ಠಾಣೆ ಪೊಲೀಸರು, ತನಿಖೆ ಆರಂಭಿಸಿದ್ದರು. ಪ್ರಕರಣ ಭೇದಿಸಲು ನಗರ ಪೊಲೀಸ್ ಆಯುಕ್ತರು ರಚಿಸಿದ್ದ ವಿಶೇಷ ತಂಡ, ಈ ಖದೀಮರ ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಬಂಧಿತರಿಂದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ 47 ಗ್ರಾಂ ಚಿನ್ನಾಭರಣವನ್ನು ವಶಪಡಿಸಿಕೊಂಡಿದ್ದಾರೆ. ಅಲ್ಲದೆ, ಠಾಣಾ ವ್ಯಾಪ್ತಿಯ ಮತ್ತೆರಡು ಪ್ರಕರಣಗಳಲ್ಲಿ ಇವರು ಕೈಚಳಕ ತೋರಿರುವುದನ್ನು ಪೊಲೀಸರು ಪತ್ತೆ ಮಾಡಿದ್ದಾರೆ. ಮತ್ತೆರಡು ಪ್ರಕರಣಗಳ ಸಂಬಂಧ 22 ಗ್ರಾಂ ಚಿನ್ನದ ನೆಕ್ಲೇಸ್, 56 ಗ್ರಾಂ ಚಿನ್ನದ ಆಭರಣಗಳು ಸೇರಿದಂತೆ ಒಟ್ಟು 3 ಕಳ್ಳತನ ಪ್ರಕರಣಗಳಲ್ಲಿ ಬಂಧಿತರಿಂದ 16,50,000 ರೂ. ಮೌಲ್ಯದ ಒಟ್ಟು 125 ಗ್ರಾಂ ಚಿನ್ನಾಭರಣ ವಶಪಡಿಸಿಕೊಂಡಿರುವ ಪೊಲೀಸರು, ಆರೋಪಿಗಳನ್ನು ಕೋರ್ಟ್‌ಗೆ ಹಾಜರುಪಡಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಪೊಲೀಸ್ ಆಯುಕ್ತರಾದ ಸೀಮಾಲಾಟ್ಕರ್, ಡಿಸಿಪಿ ಸುಂದರರಾಜ್ ಮಾರ್ಗದರ್ಶನದಲ್ಲಿ ದೇವರಾಜ ಉಪವಿಭಾಗದ ಎಸಿಪಿ ಕೆ.ರಾಜೇಂದ್ರ ಉಸ್ತುವಾರಿಯಲ್ಲಿ ಲಷ್ಕರ್ ಠಾಣೆ ಇನ್ಸ್‌ಪೆಕ್ಟರ್ ಟಿ.ಎಸ್.ಲೋಲಾಕ್ಷಿ, ಪಿಎಸ್‌ಐಗಳಾದ ಎಂ.ರಾಧಾ, ಎನ್.ವಿ.ರಂಗಸ್ವಾಮಿ, ಸಿಬ್ಬಂದಿ ಸುರೇಶ, ರವಿಕುಮಾರ, ಮಂಜುನಾಥ, ಚೌಡಪ್ಪ ಪಾಸೀಗರ್, ಅಬ್ದುಲ್‌ರೆಹಮಾನ್, ಅಶ್ವಿನಿಹೆಳವರ್, ಸೆಲ್ನಕುಮಾರ್ ಈ ಪತ್ತೆ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

ಮೈಸೂರು ಮಿತ್ರ

ನರಸಿಂಹರಾಜ ಕ್ಷೇತ್ರದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಕಚೇರಿ ಆರಂಭ

ಗ್ಯಾರಂಟಿಗಳು ಜನರ ಬದುಕು ಗಟ್ಟಿಗೊಳಿಸಿವೆ: ತನ್ವೀರ್

ಮೈಸೂರು, ಏ.13(ಜಿಎ)–ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಜನರ ಬದುಕನ್ನು ಕಟ್ಟುತ್ತಿವೆ ಎಂದು ಶಾಸಕ ತನ್ವೀರ್ ಸೇಠ್ ಅಭಿಪ್ರಾಯಪಟ್ಟರು.

ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ–9ರ ಕಟ್ಟಡದಲ್ಲಿ ಮೈಸೂರಿನ ನರಸಿಂಹರಾಜ ಕ್ಷೇತ್ರದ ಗ್ಯಾರಂಟಿಗಳ ಅನುಷ್ಠಾನ ಸಮಿತಿ ಕಚೇರಿಯನ್ನು ಸೋಮವಾರ ಉದ್ಘಾಟಿಸಿ ಮಾತನಾಡಿದ ಅವರು, ಚುನಾವಣಾ ಪ್ರಣಾಳಿಕೆಯಲ್ಲಿ ತಿಳಿಸಿದಂತೆ ಕಾಂಗ್ರೆಸ್ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿ ನುಡಿದಂತೆ ನಡೆದಿದೆ ಎಂದರು.

ಪಂಚ ಗ್ಯಾರಂಟಿಗಳ ಉಸ್ತುವಾರಿಯನ್ನು ನೋಡಿಕೊಳ್ಳಲು ರಾಜ್ಯ ಮತ್ತು ಜಿಲ್ಲಾ ಮಟ್ಟದ ಸಮಿತಿಗಳನ್ನು ರಚನೆ ಮಾಡಲಾಗಿದೆ. ಪ್ರಮುಖವಾಗಿ ನಗರ ಪ್ರದೇಶದಲ್ಲಿ ಪಂಚ ಗ್ಯಾರಂಟಿಗೆ ಸಂಬಂಧಿಸಿದಂತೆ ಸಮಸ್ಯೆಗಳು ಹೆಚ್ಚಾದ ಹಿನ್ನೆಲೆಯಲ್ಲಿ ಮೊದಲು ಬೆಂಗಳೂರಿನ 28 ವಿಧಾನ ಸಭಾ ಕ್ಷೇತ್ರದಲ್ಲಿ ಅನುಷ್ಠಾನ ಸಮಿತಿಗಳ ರಚಿಸಲಾಯಿತು. ಈಗ ಮೈಸೂರು ಪಾಲಿಕೆ ವ್ಯಾಪ್ತಿಯ ವಿಧಾನ ಸಭಾ ಕ್ಷೇತ್ರಗಳಲ್ಲಿಯೂ ಗ್ಯಾರಂಟಿಗಳ ಅನುಷ್ಠಾನ ಸಮಿತಿ ರಚಿಸಲಾಗಿದೆ. ಮುಂದಿನ ದಿನಗಳಲ್ಲಿ ತಾಲೂಕು ಮಟ್ಟದಲ್ಲಿಯೂ ಸಮಿತಿ ಆರಂಭಿಸಲಾಗುವುದು ಎಂದು ತಿಳಿಸಿದರು.

ಯುವನಿಧಿಯನ್ನು ವಿದ್ಯಾರ್ಥಿಗಳು ಉತ್ತಮ ರೀತಿಯಲ್ಲಿ ಬಳಸಿಕೊಳ್ಳುತ್ತಿದ್ದಾರೆ. ನಮ್ಮ ಕ್ಷೇತ್ರದ ವ್ಯಾಪ್ತಿಯಲ್ಲಿ 52 ಸಾವಿರ ಗೃಹ ಲಕ್ಷ್ಮಿಯರು, 1.18 ಲಕ್ಷ ಗೃಹ ಜ್ಯೋತಿ, 1.21 ಲಕ್ಷ ಅನ್ನಭಾಗ್ಯ ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ. ಈ ಎಲ್ಲಾ ಗ್ಯಾರಂಟಿಗಳಿಗೆ ಸಂಬಂಧಿಸಿದಂತೆ ಮನೆಯ ಮುಖ್ಯಸ್ಥರು ನಿಧನರಾದಾಗ, ಸ್ಥಳಾಂತರವಾದಾಗ ಯಾವುದಾದರೂ ತಕರಾರು ಬಂದ ಸಂದರ್ಭದಲ್ಲಿ ಈ ಸಮಿತಿ ಅದನ್ನು ಬಗೆಹರಿಸುವ ಕೆಲಸ ಮಾಡುತ್ತದೆ. ವಿದ್ಯಾರ್ಥಿಗಳು ಯುವನಿಧಿ ನೋಂದಣಿ ಮಾಡಿಕೊಂಡಿಲ್ಲವಾದರೆ, ಇಲ್ಲಿ ನೊಂದಣಿ ಮಾಡಿಕೊಳ್ಳಬಹುದು ಎಂದರು.

ಪಕ್ಷದ ಸಂಘಟನೆಗೆ ಆದ್ಯತೆ ನೀಡಿ, ಜನರ ನಾಡಿ ಮಿಡಿತ ಅರಿತಿರುವ ಪಕ್ಷದ ಹಿರಿಯ ಮುಖಂಡರಾದ ಎಂ.ಎಸ್.ಮಹದೇವ ಅವರನ್ನು ನರಸಿಂಹರಾಜ ಕ್ಷೇತ್ರದ ಗ್ಯಾರಂಟಿಗಳ ಅನುಷ್ಠಾನ ಸಮಿತಿ ಅಧ್ಯಕ್ಷರನ್ನಾಗಿ ನೇಮಕಮಾಡಲಾಗಿದೆ ಅವರು ಉತ್ತಮ ಕೆಲಸ ಮಾಡುವ ವಿಶ್ವಾಸವಿದೆ ಎಂದು ಹೇಳಿದರು.

ಸಮಿತಿ: ಅಧ್ಯಕ್ಷ ಎಂ.ಎಸ್.ಮಹದೇವ, ಸದಸ್ಯರಾದ ಹೆಚ್.ಶಶಿಕುಮಾರ್, ಎನ್.ಸುರೇಂದ್ರ, ರಾಕೇಶ್ ಕುಮಾರ್, ಅಹ್ಮದ್ ಸಲೀಂ, ಸಿ.ವಿಜಯಲಕ್ಷ್ಮಿ, ಎನ್.ರೇಷ್ಮ, ಜಿ.ಪದ್ಮವತಿ, ಸೈಯದ್ ಸದ್ದಾಂ, ಎನ್.ಲೋಕೇಶ್.

ಕಾರ್ಯಕ್ರಮದಲ್ಲಿ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಮಾಜಿ ಮೇಯರ್‌ಗಳಾದ ಪುಷ್ಪಲತಾ ಜಗನ್ನಾಥ್, ಪುಷ್ಪಲತಾ ಚಿಕ್ಕಣ್ಣ, ಮಾಜಿ ಉಪಮೇಯರ್ ಪುಷ್ಪವಲ್ಲಿ, ಪಾಲಿಕೆ ಮಾಜಿ ಸದಸ್ಯ ಆರೀಫ್ ಹುಸೇನ್, ಆರ್.ಗಿರಿ, ಮಜೀದ್ ಅಹ್ಮದ್, ಅದ್ನಾನ್, ಸೈಯದ್ ಫಾರೂಕ್, ಅಬ್ದುಲ್ ವಸೀಂ, ಶೌಕತ್ ಅಲೀ ಖಾನ್, ಶ್ರೀನಿವಾಸ್, ಶೈನ್ ಶಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ–9ರ ಕಟ್ಟಡದಲ್ಲಿ ಮೈಸೂರಿನ ನರಸಿಂಹರಾಜ ಕ್ಷೇತ್ರದ ಗ್ಯಾರಂಟಿಗಳ ಅನುಷ್ಠಾನ ಸಮಿತಿ ಕಚೇರಿಯನ್ನು ಸೋಮವಾರ ಶಾಸಕ ತನ್ವೀರ್ ಸೇಠ್ ಉದ್ಘಾಟಿಸಿದರು.

ಪೊಲೀಸ್ ಠಾಣೆಗೆ ಹಗ್ಗಜಗ್ಗಾಟ

ನರಸಿಂಹರಾಜ ಕ್ಷೇತ್ರದಲ್ಲಿ ಮತ್ತೊಂದು ಪೊಲೀಸ್ ಠಾಣೆ ಬೇಕೆಂದು ಈ ಹಿಂದೆ ಮನವಿ ಮಾಡಲಾಗಿತ್ತು. ಅದರಂತೆ ಒಂದು ವರ್ಷದ ಹಿಂದೆ ಮಂಜೂರಾಗಿದೆ. ಆದರೆ, ಅದಕ್ಕೆ ಸ್ವಂತ ಜಾಗವಿಲ್ಲ ಎಂಬ ಕಾರಣಕ್ಕಾಗಿ ನಾನೇ ಒಂದು ಬಾಡಿಗೆ ಕಟ್ಟಡವನ್ನು ನೋಡಿ ಅದನ್ನು ನಮ್ಮ ಸುಪರ್ದಿಗೆ ಪಡೆದುಕೊಂಡಿದ್ದೇವೆ. ಸಿಬ್ಬಂದಿ ಬೇಕು ಎಂದು ಗೃಹಇಲಾಖೆಗೆ ಪತ್ರ ಬರೆಯಲಾಗಿತ್ತು. ಅದಕ್ಕೆ, ಉದಯಗಿರಿ ಠಾಣೆಯಲ್ಲಿರುವ ಸಿಬ್ಬಂದಿಯನ್ನು ವಿಂಗಡಣೆ ಮಾಡಿಕೊಳ್ಳಿ ಎಂದು ಹೇಳುತ್ತಿದ್ದಾರೆ. ಈ ವಿಷಯದ ಬಗ್ಗೆ ಗೃಹಮಂತ್ರಿಗಳೊಂದಿಗೆ ಚರ್ಚೆಯೂ ನಡೆದಿತ್ತು. ಅದಕ್ಕೆ ಇತ್ತೀಚೆಗೆ ಅವರು ಮೈಸೂರಿಗೆ ಬಂದಾಗ ಬೇಸರ ವ್ಯಕ್ತಪಡಿಸಿದ್ದರು. ಸದ್ಯದಲ್ಲಿಯೇ ಮತ್ತೆ ಬೆಂಗಳೂರಿಗೆ ಹೋಗಿ ಈ ವಿಚಾರವಾಗಿ ಚರ್ಚೆ ಮಾಡುತ್ತೇನೆ. ಏನಾಗುತ್ತದೋ ಕಾದು ನೋಡೋಣ.

ವ್ಯಕ್ತಿ ನಂಬಿ ನಾನು ರಾಜಕಾರಣ ಮಾಡುತ್ತಿಲ್ಲ! ಮುಂದಿನ ಸಚಿವ ಸಂಪುಟದ ಪಟ್ಟಿಯಲ್ಲಿ ನನ್ನ ಹೆಸರಿದೆ!!

ಮೈಸೂರು, ಏ.13(ಜಿಎ)–ಅಧಿಕಾರದ ಆಸೆ ಇಲ್ಲ ಅಂತ ನಾನು ಎಲ್ಲಿಯೂ ಹೇಳಿಲ್ಲ. ನಾನೇನು ರಾಜಕೀಯ ಸನ್ಯಾಸಿಯೂ ಅಲ್ಲ ಎಂದು ಹಿರಿಯ ಶಾಸಕ ತನ್ವೀರ್ ಸೇಠ್ ತಿಳಿಸಿದರು.

ಸಂಪುಟ ಪುನರ್ರಚನೆ ಸಂಬಂಧ ಶಾಸಕರ ದೆಹಲಿ ಪ್ರವಾಸ ಕುರಿತು ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಸಚಿವ ಸ್ಥಾನಕ್ಕೆ ಯಾವುದೇ ಲಾಬಿ ಮಾಡಿಲ್ಲ, ಯಾವ ಬುಲಾವ್ ಬಂದಿಲ್ಲ ವ್ಯಕ್ತಿಯನ್ನು ನಂಬಿ ನಾನು ರಾಜಕಾರಣ ಮಾಡುತ್ತಿಲ್ಲ. ಸಚಿವ ಸ್ಥಾನ ಕೇಳಲು ದೆಹಲಿಗೆ ಹೋಗುವುದು ತಪ್ಪಲ್ಲ ಎಂದು ಮುಖ್ಯಮಂತ್ರಿಗಳೇ ಹೇಳಿದ್ದಾರೆ ಎಂದರು.

ಸಂಪುಟ ಪುನರ್ರಚನೆ ಅವಶ್ಯಕತೆ ಬಗ್ಗೆ ರಾಜ್ಯದಲ್ಲಿ ಜನರು ಮಾತನಾಡುತ್ತಿದ್ದಾರೆ. ಜನರು ಕಾಂಗ್ರೆಸ್ ನಂಬಿ ಅಧಿಕಾರಕ್ಕೆ ತಂದಿದ್ದಾರೆ. ಅವರ ಆಶಯವನ್ನು ಸರ್ಕಾರ ಪೂರೈಸಬೇಕು. ಹೇಗೆ ಈ ಹಿಂದೆ ಒಬ್ಬರಿಗೆ ಎರಡೂವರೆ ವರ್ಷ ಎಂದು ಮಾತುಕತೆ ಆಗಿತ್ತೋ ಹಾಗೇ ವರಿಷ್ಠರು ನಡೆದುಕೊಳ್ಳಬೇಕು. ಈಗಾಗಲೇ ಹೊಸ ಪಟ್ಟಿ ಸಿದ್ಧವಾಗಿದೆ. ಅದರಲ್ಲಿ ನನ್ನ ಹೆಸರಿದೆ. ಆದರೆ, ನಾನು ಯಾರ ಬಳಿಯೂ ಹೋಗಿಲ್ಲ. ಹಾಗಂತ ಅಧಿಕಾರದ ಆಸೆ ಇಲ್ಲ ಅಂತ ಎಲ್ಲಿಯೂ ಹೇಳಿಲ್ಲ. ನಾನು ರಾಜಕೀಯ ಸನ್ಯಾಸಿಯೂ ಅಲ್ಲ. ಅವಕಾಶ ಬಂದಾಗ ಕೇಳುತ್ತೇನೆ. ಈಗ ಪಕ್ಷದ ಸಿದ್ಧಾಂತವನ್ನು ಎತ್ತಿ ಹಿಡಿಯಬೇಕಾದ ಕೆಲಸವಾಗಬೇಕು. ಆ ಸಿದ್ಧಾಂತ ಪಾಲಿಸುತ್ತೇನೆ. ಅಧಿಕಾರ ಸಿಕ್ಕಾಗ ಜನರ ಆಶಯಕ್ಕೆ ತಕ್ಕಂತೆ ಕೆಲಸ ಮಾಡಬೇಕು. ಮುಂದಿನ ಸಂಪುಟ ಸೇರುವ ವಿಶ್ವಾಸವಿದೆ ಎಂದು ತಿಳಿಸಿದರು.

ದಾವಣಗೆರೆ ದಕ್ಷಿಣ ಉಪಚುನಾವಣೆಯಲ್ಲಿ ಅಲ್ಪಸಂಖ್ಯಾತ ನಾಯಕರ ಬಗ್ಗೆ ಚರ್ಚೆ ಕುರಿತು ಪ್ರತಿಕ್ರಿಯಿಸಿ, ಅಲ್ಲಿ ನಡೆಯುತ್ತಿರುವುದು ಎಲ್ಲವೂ ಸರಿಯಲ್ಲ, ಎಲ್ಲವೂ ತಪ್ಪಲ್ಲ. ಯಾರೋ ಒಬ್ಬರ ಪ್ರಭಾವದಿಂದ ಈ ರಾಜ್ಯದ ಜನ ಕಾಂಗ್ರೆಸ್ ಜೊತೆ ಇಲ್ಲ. ಅಲ್ಪಸಂಖ್ಯಾತರು ಬೆಂಕಿ ಮತ್ತು ನೀರಿನ ಮಧ್ಯೆ ಇದ್ದಾರೆ. ಬೆಂಕಿಯಿಂದ ಈಗ ದೂರವಾಗಿ ನೀರಿಗೆ ಹತ್ತಿರ ಇದ್ದೇವೆ ಆ ನೀರು ಸಹ ನಮ್ಮನ್ನು ಈಜಲು ಅವಕಾಶ ನೀಡದೇ ಮುಳುಗಿಸಲು ಮುಂದಾದಾಗ ಬೇರೆ ದಾರಿ ನೋಡಿಕೊಳ್ಳಬೇಕು. ನಮಗೆ ಶಾಂತಿಯ ಬದುಕು ಬೇಕು. ನಮ್ಮ ಹೋರಾಟ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯಬೇಕು. ಆ ಕೆಲಸವನ್ನು ಯಾವ ಪಕ್ಷ ಮಾಡುತ್ತದೆ ಆ ಕಡೆ ನಾವು ಇರುತ್ತೇವೆ. ಅದಕ್ಕೆ ಈಗ ಕಾಂಗ್ರೆಸ್ ಪಕ್ಷದಲ್ಲಿದ್ದೇವೆ ಎಂದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಡಕಾಯಿಟ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಲವ್ ಮಾಕ್ಟೇಲ್–3 (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಗಾರ್ಡಿಯನ್ಸ್ (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಟೆರರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಧುರಂದರ್–2 (ಕ)	3 ಪ್ರದರ್ಶನಗಳು
ರಾಜಕಮಲ್	
ಲವ್ ಇನ್ಸೂರೆನ್ಸ್ ಕಂಪನಿ (ತ)	4 ಪ್ರದರ್ಶನಗಳು
ಸಂಗಂ	
ಟೆರರ್ (ಕ)	4 ಪ್ರದರ್ಶನಗಳು
ಲಿಡೋ	
ಗ್ಯಾಂಗ್ ಆಫ್ ಯುಕೆ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಕ್ಯಾಲೆಂಡರ್ (ಕ)	4 ಪ್ರದರ್ಶನಗಳು

ವಂಚನಾನಂದ ಶ್ರೀಗಳ ಉಚ್ಚಾಟನೆ


ದಾವಣಗೆರೆ: ಹರಿಹರ ಪಂಚಮಸಾಲಿ ಪೀಠದಲ್ಲಿ ಲೆಕ್ಕ ಕೊಡಿ ಅಭಿಯಾನ ತೀವ್ರಗೊಂಡ ಬೆನ್ನಲ್ಲೇ ವಚನಾನಂದ ಶ್ರೀಗಳನ್ನು ಪೀಠದಿಂದ ಉಚ್ಚಾಟನೆ ಮಾಡಲು ಟ್ರಸ್ಟಿಗಳು ಸಭೆಯಲ್ಲಿ ನಿರ್ಧರಿಸಿದ್ದಾರೆ. 10 ಕಾರಣಗಳನ್ನು ನೀಡಿ ಉಚ್ಚಾಟನೆ ಮಾಡಲಾಗಿದ್ದು, ಮಠದ ಕಚೇರಿಗೆ ಬೀಗ ಹಾಕಿ ಸೀಲ್ ಮಾಡಲಾಗಿದೆ.

ಸ್ವಾಮೀಜಿ ಶ್ವಾಸ ಪೀಠದಲ್ಲಿ ಇರಬೇಕು, ಇಲ್ಲವೇ ಹರಿಹರ ಪಂಚಮಸಾಲಿ ಪೀಠದಲ್ಲಿ ಇರಬೇಕು. ಆದರೆ ಎರಡೂ ಕಡೆ ಇರುವುದು ಸೂಕ್ತವಲ್ಲ. ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಲು ಈಗಾಗಲೇ ಮಾರ್ಚ್ 24ಕ್ಕೆ ಗಡುವು ನೀಡಿದ್ದೆವು. ಇದರ ಬಗ್ಗೆ ಯಾವುದೇ ಮಾಹಿತಿ ನೀಡದೇ, ಎರಡು ಕಡೆ ಇರುವುದರಿಂದ ತೆಗೆದುಹಾಕಲಾಗಿದೆ. ಸ್ವಾಮಿಜಿಗಳು ಗೌರವಯುತವಾಗಿ ಮಠವನ್ನು ಬಿಡಬೇಕು ಎಂದು ಮನವಿ ಮಾಡಲಾಗಿದೆ ಎಂದು ಪಂಚಮಸಾಲಿ ಗುರುಪೀಠದ ಟ್ರಸ್ಟಿ ಬಾವಿ ಬೆಟ್ಟಪ್ಪ ಹೇಳಿದ್ದಾರೆ.

ಭಕ್ತರ ಆರೋಪವೇನು: ಸರ್ಕಾರದಿಂದ ಬಂದ ಅನುದಾನ, ಭಕ್ತರ ದೇಣಿಗೆ ಹಣವನ್ನು ಟ್ರಸ್ಟಿಗಳು ಗೋಲ್‌ಮಾಲ್ ಮಾಡಿದ್ದಾರೆ ಎಂದು ಆರೋಪಿಸಿ ಭಕ್ತರು ಲೆಕ್ಕ ಕೊಡಿ ಅಭಿಯಾನ ನಡೆಸಿದ್ದರು. 2008ರಿಂದ ಬಂದ ಅನುದಾನ ಹಾಗೂ ದೇಣಿಗೆಯನ್ನು ಪೀಠದ ಪ್ರಧಾನ ಧರ್ಮದರ್ಶಿ ಉಮಾಪತಿ ಹಾಗೂ ಟ್ರಸ್ಟಿ ಚಂದ್ರಶೇಖರ್ ಪೂಜಾರ್ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಮಠದ ಭಕ್ತರು ಆರೋಪಿಸಿದ್ದಾರೆ.

ಭಕ್ತರ ಹೋರಾಟ ತೀವ್ರಗೊಳ್ಳುತ್ತಿದ್ದಂತೆ ಟ್ರಸ್ಟಿಗಳೇ ಸ್ವಾಮೀಜಿಗಳಿಗೆ ಗೇಟ್ ಪಾಸ್ ಕೊಟ್ಟಿದ್ದು, ತೀವ್ರ ಜಟಾ ಪಟಿಗೆ ಕಾರಣವಾಗಿದೆ. ಸ್ವಾಮೀಜಿಗಳ ಪದಚ್ಯುತಿ ಮಾಡುತ್ತಿದ್ದಂತೆ ಭಕ್ತರು ಟ್ರಸ್ಟಿಗಳಿಗೆ ಚಪ್ಪಲಿ ತೋರಿಸಿ ಆಕ್ರೋಶ ಹೊರಹಾಕಿದ್ದಾರೆ.

ಶ್ರೀಗಳು ಹೇಳಿದ್ದೇನು: ಈ ವೇಳೆ ಪ್ರತಿಕ್ರಿಯಿಸಿದ ಶ್ರೀಗಳು, ಗುರುಪೀಠದ ಟ್ರಸ್ಟಿಗಳೇ ಸಾಕಷ್ಟು ಅವ್ಯವಹಾರ ನಡೆಸಿದ್ದಾರೆ. ಸರ್ಕಾರದ 10 ಕೋಟಿ ರೂ. ಅನುದಾನದಲ್ಲೂ ಅವ್ಯವಹಾರ ಆಗಿದೆ. ಸರ್ಕಾರ ಕೊಟ್ಟ ಅನುದಾನ, ದೇಣಿಗೆ ಹಣ ಲೂಟಿಯಾಗಿದೆ. ಅವ್ಯವಹಾರ ಮರೆಮಾಚಲು ನನ್ನ ಉಚ್ಚಾಟನೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.



ಉಚ್ಚಾಟನೆಗೆ ಕಾರಣ

- ಬೆಂಗಳೂರಿನ 'ಶ್ವಾಸ ಕೇಂದ್ರ' ಆರಂಭಿಸಿ, ಹರಿಹರದ ಮಠದಿಂದ ದೂರ, ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದ್ದಾರೆ.
- ಪೀಠಕ್ಕೆ ಬರುವ ಗುರುಕಾಣಿಕೆ, ಭಕ್ತರ ಕಾಣಿಕೆ ಗೌಪ್ಯವಾಗಿ ಶ್ವಾಸಕೇಂದ್ರಕ್ಕೆ ಬಳಕೆ ಮಾಡುತ್ತಿದ್ದಾರೆ.
- ವೀರಶೈವ ಲಿಂಗಾಯತ ಸಂಪ್ರದಾಯ ಪಾಲಿಸದೆ, ಅಘೋರಿ, ವಾಮಾಚಾರ ಆಚರಣೆ ಮಾಡುತ್ತಿದ್ದಾರೆ.
- ಕಾವಿಧರಿಸಿಯೂ ಸಭೆಗಳಲ್ಲಿ ಅತ್ಯಂತ ಕೀಳು ಪದ ಬಳಕೆ ಮಾಡುತ್ತಾರೆ.
- ಮಕ್ಕಳಿಗೆ ಶೈಕ್ಷಣಿಕ, ಧಾರ್ಮಿಕ ಮಾರ್ಗದರ್ಶನ ಬದಲು ಮಸಾಜ್‌ಗೆ ಬಳಕೆ ಮಾಡಿಕೊಳ್ಳುತ್ತಾರೆ.
- ಭಕ್ತರ ಬದಲಿಗೆ ವಿಐಪಿಗಳಿಗಷ್ಟೇ ಸಮಯ ಕೊಡುತ್ತಾರೆ.
- ಟ್ರಸ್ಟ್ ವತಿಯಿಂದ ಪೂಜಾ ಕಾರ್ಯಗಳಿಗೆ ಉಚಿತವಾಗಿ ನಿಯೋಜಿತಗೊಂಡವರ ಜೊತೆ ಅನುಚಿತ ವರ್ತನೆ ಮಾಡುತ್ತಾರೆ.
- ಮಠದ ವಾಸ್ತವ್ಯ ಬದಲಿಗೆ ಐಷಾರಾಮಿ ನಗರಗಳ ಪಂಚತಾರಾ ಹೊಟೇಲ್‌ಗಳಲ್ಲಿ ವಾಸ್ತವ್ಯ ಮಾಡುತ್ತಾರೆ.
- ತಿಂಗಳುಗಟ್ಟಲೇ ವಿದೇಶ ಪ್ರವಾಸಕ್ಕೆ ತೆರಳುತ್ತಾರೆ.
- ಪರಿತ್ಯಾಗಿಗಳಾಗಿ ಅಧ್ಯಾತ್ಮಿಕ ಚಿಂತನೆ ಬದಲಿಗೆ ಸುಂದರವಾಗಿ ಕಾಣುವ ಹಂಬಲ ಅವರಿಗಿದೆ. ತಲೆ, ಗಡ್ಡಕ್ಕೆ ಬಣ್ಣ ಹಚ್ಚುತ್ತಾರೆ ಎಂದು ಆರೋಪಿಸಲಾಗಿದೆ.

ಗಾಂಜಾ ಮಾರಾಟ ಯತ್ನ; ಜಾರ್ಖಂಡ್ ಮೂಲದ ಯುವಕನ ಬಂಧನ

50 ಸಾವಿರ ರೂ. ಮೌಲ್ಯದ 1 ಕೆಜಿ 985 ಗ್ರಾಂ ಗಾಂಜಾ ಪೊಲೀಸ್ ವಶಕ್ಕೆ

ಮೈಸೂರು,ಏ.13(ಪಿಎಂ)– ಮಾದಕ ವಸ್ತು ಮಾರಾಟ–ಸಾಗಾಟದ ವಿರುದ್ಧ ಪೊಲೀಸರ ದಾಳಿ ಮುಂದುವರೆದಿದ್ದು, ಗಾಂಜಾ ಮಾರಾಟ ಮಾಡುತ್ತಿದ್ದ ಯುವಕನನ್ನು ಬಂಧಿಸಿರುವ ನರಸಿಂಹರಾಜ ಠಾಣಾ ಪೊಲೀಸರು, ಆತನಿಂದ 50 ಸಾವಿರ ರೂ. ಮೌಲ್ಯದ 1 ಕೆಜಿ 985 ಗ್ರಾಂ ಗಾಂಜಾ ಮತ್ತು ಮೊಬೈಲ್ ವೊಂದನ್ನು ವಶಪಡಿಸಿಕೊಂಡಿದ್ದಾರೆ.

ಜಾರ್ಖಂಡ್ ಮೂಲದ ಬೆಂಗಳೂರು ನಿವಾಸಿ ಚಂದನ್‌ಕುಮಾರ್ (23) ಬಂಧಿತ. ಬೆಂಗಳೂರಿನಲ್ಲಿ ತಳ್ಳುಗಾಡಿಯಲ್ಲಿ ಹಣ್ಣಿನ ವ್ಯಾಪಾರ ಮಾಡುತ್ತಿದ್ದ ಈತ, ಇದೇ ಏ.8ರಂದು ಮೈಸೂರಿನ ಪದ್ಮಶ್ರೀ ಕನ್ವೆನ್ಷನ್ ಹಾಲ್ ಪಕ್ಕದ ರಸ್ತೆಯಲ್ಲಿ ಗಾಂಜಾ ಮಾರಾಟಕ್ಕೆ ಪ್ರಯತ್ನಿಸುತ್ತಿದ್ದ. ಈ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ ಆತನನ್ನು ಬಂಧಿಸಿದ ಎನ್‌ಆರ್ ಠಾಣೆ ಪೊಲೀಸರು, ಈತನ ಬಳಿಯಿದ್ದ ಗಾಂಜಾ ಮತ್ತು ಮೊಬೈಲ್ ಫೋನ್ ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದು, ಅವನನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

ಡಿಸಿಪಿ ಕೆ.ಎಸ್.ಸುಂದರ್‌ರಾಜ್ ಮಾರ್ಗದರ್ಶನದಲ್ಲಿ ಲಷ್ಕರ್ ವಿಭಾಗದ ಎಸಿಪಿ ಮ್ಯಾಥ್ಯೂ ಥಾಮಸ್ ಅವರ ನೇತೃತ್ವದಲ್ಲಿ ಎನ್‌ಆರ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಕುಮಾರ, ಪಿಎಸ್‌ಐಗಳಾದ ನಾಗರಾಜ ನಾಯ್ಕ, ಎಸ್.ಪಿ.ಗೋಪಾಲ, ಸಿಬ್ಬಂದಿಯಾದ ನಿಂಗರಾಜು, ಅನಿಲ್ ಶಂಕಪಾಲ್, ರಮೇಶ್, ಸುರೇಶ್, ಜೀವನ್, ಹರೀಶ್, ಎಂ.ಅಭಿಷೇಕ್, ಮಾರುತಿ ಪವನ್, ರಾಜುಸಾಬ್ ಮುಲ್ಲಾ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು. ಈ ಪತ್ತೆ ಕಾರ್ಯವನ್ನು ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಶ್ಲಾಘಿಸಿದ್ದಾರೆ.

ನಗರದಲ್ಲಿ ಮಾದಕ ವಸ್ತು ಮಾರಾಟ, ಸಾಗಾಟ, ಸೇವನೆ ಸಂಬಂಧ ನಗರ ಪೊಲೀಸ್ ವತಿಯಿಂದ ಸ್ಥಾಪಿಸಿರುವ 'ವಿಮುಕ್ತಿ ಸಹಾಯವಾಣಿ ಸಂಖ್ಯೆ 82779 48080'ಗೆ ಮಾಹಿತಿಯನ್ನು ಸಾರ್ವಜನಕರು ಹಂಚಿಕೊಂಡು ಮೈಸೂರು ನಗರವನ್ನು ಮಾದಕ ವಸ್ತು ಮುಕ್ತಗೊಳಿಸಲು ಪೊಲೀಸರೊಂದಿಗೆ ಕೈ ಜೋಡಿಸಲು ಕೋರಲಾಗಿದೆ.

ಯೂರಿಯಾ ರಸಗೊಬ್ಬರ ಖರೀದಿಗೆ ಎಫ್‌ಐಡಿ ಕಡ್ಡಾಯ

ಮೈಸೂರು, ಏ.13– ಮೈಸೂರು ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರ ದುರ್ಬಳಕೆ ತಡೆಯಲು ರೈತರ ಎಫ್‌ಐಡಿಸಂಖ್ಯೆ ಆಧರಿಸಿ ಯೂರಿಯಾ ವಿತರಣೆ ಮಾಡುವ ವ್ಯವಸ್ಥೆಯನ್ನು ಕರ್ನಾಟಕ ಸರ್ಕಾರವು ಜಾರಿಗೆ ತಂದಿರುತ್ತದೆ. ಯೂರಿಯಾ ಖರೀದಿಗೆ ಇನ್ನು ಮುಂದೆ ರೈತರು ಕಡ್ಡಾಯವಾಗಿ ಗುರುತಿನ ಸಂಖ್ಯೆಯನ್ನು ಹೊಂದಿರಬೇಕು ಹಾಗೂ ಸದರಿ ಎಫ್‌ಐಡಿಯಲ್ಲಿರುವ ಜಮೀನಿನ ವಿಸ್ತೀರ್ಣಕ್ಕೆ ಅನುಗುಣವಾಗಿ ರಸಗೊಬ್ಬರ ಪ್ರಮಾಣವನ್ನು ನಿರ್ಧರಿಸಿ ವಿತರಿಸಲಾಗುವುದು. ಆದ್ದರಿಂದ, ರೈತರು ತಮ್ಮ ಹೆಸರಿನಲ್ಲಿರುವ ಎಲ್ಲಾ ಕೃಷಿ ಜಮೀನಿನ ಆರ್‌ಟಿಸಿ / ಪಹಣಿಗಳನ್ನು ಜೋಡಿಸುವುದು ಅವಶ್ಯಕವಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿರುತ್ತಾರೆ.

ಹೊಸ ಎಫ್‌ಐಡಿ ನೋಂದಣಿ ಹಾಗೂ ಆರ್‌ಟಿಸಿ ಜೋಡಣೆಗೆ ಅವಕಾಶ: ಎಫ್‌ಐಡಿ ಸಂಖ್ಯೆಯನ್ನು ಇದುವರೆಗೂ ಪಡೆಯದಿರುವ ರೈತರು ಕೂಡಲೇ ಹತ್ತಿರದ ರೈತ ಸಂಪರ್ಕ ಕೇಂದ್ರ/ ಕಂದಾಯ ಇಲಾಖೆ/ತೋಟಗಾರಿಕೆ ಇಲಾಖೆ/ರೇಷ್ಮೆ ಇಲಾಖೆ/ಪಶು ಸಂಗೋಪನೆ ಇಲಾಖೆಗಳನ್ನು ಸಂಪರ್ಕಿಸಿ ಆಧಾರ್, ಪಹಣಿ, ಬ್ಯಾಂಕ್ ಖಾತೆ ವಿವರಗಳನ್ನು ನೀಡಿ ಎಫ್‌ಐಡಿ ಪಡೆದುಕೊಳ್ಳಲು ಹಾಗೂ ಈಗಾಗಲೇ ಎಫ್‌ಐಡಿ ಪಡೆದಿರುವ ರೈತರು ತಮ್ಮ ಎಲ್ಲಾ ಕೃಷಿ ಜಮೀನಿನ ಆರ್‌ಟಿಸಿಗಳನ್ನು ಎಫ್‌ಐಡಿಗೆ ಜೋಡಿಸಲು ಅವಕಾಶ ನೀಡಲಾಗಿದ್ದು, ಎಲ್ಲಾ ರೈತ ಬಾಂಧವರು ಇದರ ಸದುಪಯೋಗ ಮಾಡಿಕೊಳ್ಳಲು ಕೋರಲಾಗಿದೆ.

ರಸಗೊಬ್ಬರ ಮಾರಾಟಗಾರರಿಗೆ ಸೂಚನೆ: ಅಧಿಕೃತ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಕೆ–ಕಿಸಾನ್ ತಂತ್ರಾಂಶದಲ್ಲಿ ರೈತರ ಎಫ್‌ಐಡಿ ಸಂಖ್ಯೆ ಬಳಸಿ ರಸಗೊಬ್ಬರ ಮಾರಾಟ ಮಾಡಬೇಕು. ಇದಕ್ಕೆ ಸಂಬಂಧಿಸಿದಂತೆ ಅಗತ್ಯ ಕಂಪ್ಯೂಟರ್/ ಮೊಬೈಲ್ ವ್ಯವಸ್ಥೆಗಳನ್ನು ಪೂರ್ವಭಾವಿಯಾಗಿ ಮಾಡಿಕೊಳ್ಳಬೇಕು. ಇಲಾಖಾಧಿಕಾರಿಗಳನ್ನು ಸಂಪರ್ಕಿಸಿ ತಂತ್ರಾಂಶದ ಬಳಕೆ ಬಗ್ಗೆ ಮಾಹಿತಿ ಪಡೆದುಕೊಳ್ಳುವುದು ಹಾಗೂ ಅಗತ್ಯ ಓ ಫಾರಂಗಳನ್ನು ಪರವಾನಗಿಯಲ್ಲಿ ಸೇರಿಸಿಕೊಳ್ಳಲು ಕ್ರಮ ವಹಿಸುವುದು. ಯೂರಿಯಾ ರಸಗೊಬ್ಬರವನ್ನು ಯಾವುದೇ ಕಾರಣಕ್ಕೂ ನಿಯಮ ಮೀರಿ ಹೆಚ್ಚಿನ ಬೆಲೆಗೆ ಅಥವಾ ಕೃಷಿಯೇತರ ಉದ್ದೇಶಕ್ಕೆ ನೀಡಿದರೆ ಪರವಾನಿಗೆ ರದ್ದುಪಡಿಸಿ ಕ್ರಿಮಿನಲ್ ಮೊಕದ್ದಮೆ ಹೂಡುವುದರೊಂದಿಗೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಯೂರಿಯ ದುರ್ಬಳಕೆ ಕಂಡು ಬಂದಲ್ಲಿ ಜಂಟಿ ಕೃಷಿ ನಿರ್ದೇಶಕರು, ಮೈಸೂರು ಜಿಲ್ಲೆ ಮೈಸೂರು– 8277933100, ಉಪ ಕೃಷಿ ನಿರ್ದೇಶಕರು–1, ಮೈಸೂರು–8277933101, ಉಪ ಕೃಷಿ ನಿರ್ದೇಶಕರು ಹುಣಸೂರು–8277933102, ಸಹಾಯಕ ಕೃಷಿ ನಿರ್ದೇಶಕರು, ಹೆಚ್.ಡಿ.ಕೋಟೆ–8277933117, ಸಹಾಯಕ ಕೃಷಿ ನಿರ್ದೇಶಕರು, ಹುಣಸೂರು–8277933127, ಸಹಾಯಕ ಕೃಷಿ ನಿರ್ದೇಶಕರು, ಕೆ.ಆರ್.ನಗರ–8277933146, ಸಹಾಯಕ ಕೃಷಿ ನಿರ್ದೇಶಕರು, ಮೈಸೂರು–8277933162, ಸಹಾಯಕ ಕೃಷಿ ನಿರ್ದೇಶಕರು, ನಂಜನಗೂಡು–8277933168, ಸಹಾಯಕ ಕೃಷಿ ನಿರ್ದೇಶಕರು, ಪಿರಿಯಾಪಟ್ಟಣ–8277933185, ಸಹಾಯಕ ಕೃಷಿ ನಿರ್ದೇಶಕರು ಟಿ.ನರಸೀಪುರ–8277933198 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಕೆ.ಹೆಚ್.ರವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಂಜನಗೂಡು ಯುವಕನ ಅಪಹರಿಸಿ ಮಂಗಳೂರಲ್ಲಿ ಮಂಗಳಮುಖಿ ಮಾಡಿದರು...!

ಭಿಕ್ಷಾಟನೆ ದಂಧೆಗಿಳಿಸಿದ ಆರೋಪ; ಲಷ್ಕರ್ ಠಾಣೆಯಲ್ಲಿ ದೂರು ದಾಖಲು



ಅನಿಲ್ ಕುಮಾರ್ ಅಲಿಯಾಸ್ ಅಕ್ಷತಾ

ದೂರುದಾರನ ವಿರುದ್ಧವೂ ವಂಚನೆ ಪ್ರತಿ ದೂರು

ಮೈಸೂರು, ಏ.13(ಬಿಎಲ್‌ಯು)– ತನ್ನನ್ನು ಕಿಡ್ನಾಪ್ ಮಾಡಿದ ಮಂಗಳಮುಖಿಯರ ಗುಂಪೊಂದು ಬಲವಂತವಾಗಿ ಮಂಗಳಮುಖಿ ವೇಷ ಹಾಕಿಸಿ, ಬಲವಂತದಿಂದ ತನ್ನಿಂದ ಭಿಕ್ಷೆ ಬೇಡಿಸುತ್ತಿದ್ದರು ಎಂದು ಆರೋಪಿಸಿ ನಂಜನಗೂಡಿನ ಯುವಕನೊಬ್ಬ ಮೈಸೂರಿನ ಲಷ್ಕರ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾನೆ.

ಮೈಸೂರು ಜಿಲ್ಲೆ ನಂಜನಗೂಡಿನ ತ್ಯಾಗರಾಜ ಕಾಲೋನಿಯ ಅನಿಲ್ ಕುಮಾರ್ ಅಲಿಯಾಸ್ ಅಕ್ಷತಾ ಪೊಲೀಸರಿಗೆ ದೂರು ನೀಡಿದ್ದು, ಕಳೆದ ಐದು ತಿಂಗಳ ಹಿಂದೆ ಕೆಲಸಕ್ಕಾಗಿ ನಾನು ಮೈಸೂರಿಗೆ ಬಂದಿದ್ದೆ. ಆದರೆ ಕೆಲಸ ಸಿಗದೆ ಊರಿಗೆ ವಾಪಸ್ಸಾಗಲು ಮೈಸೂರಿನ ಗ್ರಾಮಾಂತರ ಬಸ್ ನಿಲ್ದಾಣದ ಬಳಿ ನಿಂತಿದ್ದೆ. ಆ ವೇಳೆ ಅಲ್ಲಿಗೆ ಬಂದ ಮಂಗಳಮುಖಿಯರಾದ ಅನಿತಾ ಮತ್ತು ಅವರ ಸಹಚರರು ನನ್ನನ್ನು ಕಿಡ್ನಾಪ್ ಮಾಡಿದರು. ಮುಖಕ್ಕೆ ಮುಸುಕು ಹಾಕಿ ನಶೆ ಬರುವಂತೆ ಮಾಡಿ ಅಲ್ಲಿಂದ ಕಾರಿನಲ್ಲಿ ಅಪಹರಿಸಿ ಮಂಗಳೂರಿಗೆ ಕರೆದೊಯ್ದಿದ್ದರು ಎಂದು ಅನಿಲ್ ಕುಮಾರ್ ದೂರಿನಲ್ಲಿ ದೂರಿದ್ದಾನೆ.

ಅಲ್ಲಿ ಬಲವಂತವಾಗಿ ತನಗೆ ಮಂಗಳಮುಖಿ ವೇಷ ಹಾಕಿಸಿದರು. ತರುವಾಯ ಒತ್ತಾಯ ಪೂರ್ವಕವಾಗಿ ರಸ್ತೆ ರಸ್ತೆಗಳಲ್ಲಿ ಭಿಕ್ಷೆ ಬೇಡಿಸಿದರು. ದಿನಕ್ಕೆ 3 ರಿಂದ 4 ಸಾವಿರ ರೂಪಾಯಿ ಭಿಕ್ಷೆ ಬೇಡುವಂತೆ ಟಾರ್ಗೆಟ್ ಫಿಕ್ಸ್ ಮಾಡಿದರು. ಅವರ ಕಿರುಕುಳದಿಂದ ಅನಿವಾರ್ಯವಾಗಿ ಭಿಕ್ಷೆ ಬೇಡುತ್ತಿದ್ದೆ. ನಾನು ಭಿಕ್ಷೆ ಬೇಡುವ ಹಣವನ್ನೆಲ್ಲಾ ಕಸಿದುಕೊಂಡು ತಿಂಗಳಿಗೆ ಲಕ್ಷಾಂತರ ರೂಪಾಯಿ ಲಾಭ ಮಾಡಿಕೊಳ್ಳುತ್ತಿದ್ದರು. ಅಲ್ಲದೆ ಕೇರಳ ಸೇರಿದಂತೆ ಇತರೆಡೆ ಲೈಂಗಿಕ ಕ್ರಿಯೆಗೂ ಬಳಸಿಕೊಂಡಿದ್ದರು ಎಂದು ಆತ ಹೇಳಿದ್ದಾನೆ.

ನನ್ನ ಆಧಾರ್ ಕಾರ್ಡ್ ನಲ್ಲಿ ಟ್ರಾನ್ಸ್ ಜೆಂಡರ್ ಎಂದು ನಮೂದಿಸಿ ಸಮಾಜ ಕಲ್ಯಾಣ ಇಲಾಖೆಯಿಂದ ಅಧಿಕೃತ ಪ್ರಮಾಣ ಪತ್ರ ಪಡೆದಿದ್ದರು. ತರುವಾಯ ಮುಂಬೈಗೆ ಕರೆದೊಯ್ದು ಶಾಶ್ವತವಾಗಿ ಟ್ರಾನ್ಸ್ ಜೆಂಡರ್ (ಲಿಂಗ ಪರಿವರ್ತನೆ) ಆಗಿ ಮಾಡಲು ಯೋಜನೆ ರೂಪಿಸಿದ್ದರು. ಇದನ್ನು ವಿರೋಧಿಸಿದಾಗ ದೈಹಿಕವಾಗಿ ನನ್ನ ಮೇಲೆ ಹಲ್ಲೆ ಮಾಡಿದ್ದರು. ಮಾನಸಿಕವಾಗಿ ಕಿರುಕುಳ ನೀಡುತ್ತಿದ್ದರು. ಯಾವಾಗಲೂ ನನ್ನ ಹಿಂದೆ ಮುಂದೆಯೇ ಇರುತ್ತಿದ್ದ ಕಾರಣ ಪೊಲೀಸರಿಗೆ ದೂರು ನೀಡಲು ಅವಕಾಶ ಸಿಗಲಿಲ್ಲ ಎಂದು ದೂರಿದ್ದಾನೆ.

ಈಗ ಹೇಗೊ ಅಲ್ಲಿಂದ ತಪ್ಪಿಸಿಕೊಂಡು ಬಂದು ಇಲ್ಲಿ ದೂರು ನೀಡುತ್ತಿದ್ದೇನೆ ಎಂದು ಅನಿಲ್ ಕುಮಾರ್ ಅಲಿಯಾಸ್ ಅಕ್ಷತಾ ಪೊಲೀಸರಿಗೆ ದೂರಿನಲ್ಲಿ ತಿಳಿಸಿದ್ದಾನೆ.

ಈ ಪ್ರಕರಣದ ಬಗ್ಗೆ ಪೊಲೀಸರು ದೂರು ಸ್ವೀಕರಿಸಿ ಎನ್‌ಸಿಆರ್ ನೀಡಿದ್ದಾರೆಯೇ ಹೊರತು, ಎಫ್‌ಐಆರ್ ದಾಖಲಿಸಿಲ್ಲ. ಅನಿಲ್ ಕುಮಾರ್ ನೀಡಿರುವ ದೂರಿನ ಬಗ್ಗೆ ಲಷ್ಕರ್ ಪೊಲೀಸರು ಮಂಗಳೂರಿನ ಪೊಲೀಸರಿಂದ ಮಾಹಿತಿ ಪಡೆದಿದ್ದಾರೆ. ಅಲ್ಲದೆ ಅಲ್ಲಿನ ಆರೋಪಿತ ಮಂಗಳ ಮುಖಿಯರನ್ನು ಸಂಪರ್ಕಿಸಿ ಈ ಪ್ರಕರಣದ ಬಗ್ಗೆ ಪ್ರಾಥಮಿಕ ಹಂತದ ಮಾಹಿತಿ ಪಡೆದಿದ್ದಾರೆ.

ಅನಿಲ್‌ಕುಮಾರ್ ವಿರುದ್ಧವೇ ದೂರು: ಅನಿಲ್ ಕುಮಾರ್ ಮಂಗಳ ಮುಖಿ ಅಲ್ಲದಿದ್ದರೂ ಆಧಾರ್ ಕಾರ್ಡ್‌ನಲ್ಲಿ ಟ್ರಾನ್ಸ್ ಜೆಂಡರ್ ಎಂದು ನಮೂದಿಸಿ ತಮ್ಮ ವರ್ಗದ ಹೆಸರನ್ನು ದುರುಪಯೋಗ ಮಾಡಿಕೊಂಡಿದ್ದಾನೆ. ಈ ಹಿನ್ನೆಲೆಯಲ್ಲಿ ಇವನ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಅಲ್ಲಿನ ಮಂಗಳ ಮುಖಿಯರು ಮಂಗಳೂರಿನ ಕಂಕನವಾಡಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ ಎಂಬ ಮಾಹಿತಿ ಲಷ್ಕರ್ ಪೊಲೀಸರಿಗೆ ದೊರೆತಿದೆ.

ಆಧಾರ್ ಕಾರ್ಡ್ ನಲ್ಲಿ ಟ್ರಾನ್ಸ್ ಜೆಂಡರ್ ಎಂದು ನಮೂದಿಸಲು ನಾವು ಸಮಾಜ ಕಲ್ಯಾಣ ಇಲಾಖೆ ಮೇಲೆ ಒತ್ತಡ ಹೇರಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಆತ ನಕಲಿ ದಾಖಲೆ ಮೂಲಕ ನಮ್ಮ ವರ್ಗದ ಸ್ಥಾನಮಾನವನ್ನು ದುರುಪಯೋಗ ಮಾಡಿಕೊಂಡಿದ್ದಾನೆ ಎಂದು ಮಂಗಳೂರು ಮಂಗಳಮುಖಿಯರು ಮೈಸೂರು ಪೊಲೀಸರ ಬಳಿ ಆಪಾದಿಸಿದ್ದಾರೆ.

ಈ ಪ್ರಕರಣದ ಬಗ್ಗೆ ಸ್ಥಳೀಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಅಲ್ಲದೆ ಖುದ್ದು ಮೈಸೂರಿಗೆ ಬಂದು ಹೇಳಿಕೆ ನೀಡುವಂತೆ ಮಂಗಳೂರಿನಲ್ಲಿರುವ ಆರೋಪಿತ ಮಂಗಳಮುಖಿಯರಿಗೂ ತಾಕೀತು ಮಾಡಿದ್ದು, ಇಂದಲ್ಲ ನಾಳೆ ಮೈಸೂರಿಗೆ ಆಗಮಿಸಲಿದ್ದು, ಅವರು ನೀಡುವ ಹೇಳಿಕೆ ಆಧಾರದ ಮೇಲೆ ತನಿಖೆ ಮುಂದುವರೆಸುತ್ತೇವೆ ಎಂದು ಲಷ್ಕರ್ ಪೊಲೀಸ್ ಠಾಣೆಯವರು ತಿಳಿಸಿದ್ದಾರೆ.

ಭಾರತೀಯರ ಗುಣಮಟ್ಟದ ಜೀವನಕ್ಕೆ ಡಾ.ಅಂಬೇಡ್ಕರ್ ಸಂವಿಧಾನ ದಾರಿ ಮಾಡಿಕೊಟ್ಟಿದೆ

● ಸಂಸದ ಯದುವೀರ್ ಅಭಿಮತ ● ಡಾ.ಅಂಬೇಡ್ಕರ್ ಜಯಂತಿ ಅಂಗವಾಗಿ ವರ್ಣರಂಜಿತ ದೀಪಾಲಂಕಾರಕ್ಕೆ ಚಾಲನೆ

ಮೈಸೂರು, ಏ.13(ಎಸ್‌ಪಿಎನ್)– ಡಾ.ಬಿ.ಆರ್.ಅಂಬೇಡ್ಕರ್ ಅವರು, ಉತ್ತಮ ಸಂವಿಧಾನ ನೀಡಿದರ ಫಲವಾಗಿ ಇಂದು ಪ್ರತಿಯೊಬ್ಬ ಭಾರತೀಯ ಗುಣಮಟ್ಟದ ಜೀವನ ಕಟ್ಟಿಕೊಳ್ಳಲು ಸಾಧ್ಯವಾಗಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟರು.

ಅಶೋಕ ಯೂತ್ ಅಸೋಸಿಯೇಷನ್ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ 135ನೇ ಜಯಂತಿ ಅಂಗವಾಗಿ ಏರ್ಪಡಿಸಿದ್ದ ಬಲ್ಲಾಳ್ ವೃತ್ತದಿಂದ ಅಶೋಕಪುರಂ ಉದ್ಯಾನವನದವರೆಗಿನ ವರ್ಣರಂಜಿತ ದೀಪಾಲಂಕಾರಕ್ಕೆ ಚಾಲನೆ ನೀಡಿ ಅವರು, ಮಾತನಾಡಿದರು.

ಸ್ವಾತಂತ್ರ್ಯದ ನಂತರ ಭಾರತೀಯರ ಜೀವನಮಟ್ಟ ಸುಧಾರಣೆ, ಶಿಕ್ಷಣ, ಆರೋಗ್ಯ ಹಾಗೂ ದೇಶದ ಐಕ್ಯತೆಗೆ ಡಾ.ಬಿ.ಆರ್.ಅಂಬೇಡ್ಕರ್ ನೀಡಿದ ಸಂವಿಧಾನವೇ ಮೂಲ ಕಾರಣ. ಹಾಗಾಗಿ, ಇಂತಹ ಮಹನೀಯರ ಜನ್ಮ ದಿನವನ್ನು ಅದ್ಧೂರಿಯಾಗಿ ಆಚರಣೆ ಮಾಡುತ್ತಿರುವ ಅಶೋಕ ಯೂತ್ ಅಸೋಸಿಯೇಷನ್ ಪದಾಧಿಕಾರಿಗಳ ಕಾರ್ಯ ಶ್ಲಾಘನೀಯ ಎಂದರು.

ಉತ್ಕೃಷ್ಟ ಸಂವಿಧಾನ ರಚಿಸಿದ ಡಾ.ಬಿ.ಆರ್.ಅಂಬೇಡ್ಕರ್ ಅವರ ಜನ್ಮದಿನದಂದು ಹೆಲಿಕಾಪ್ಟರ್ ಮೂಲಕ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡುತ್ತಿರುವುದು ಸಂತೋಷದ ಸಂಗತಿ ಹಾಗೂ ಮೈಸೂರು ಸಂಸ್ಥಾನದ ಬೆಲೆಬಾಳುವ ಮರಮುಟ್ಟುಗಳಿಂದ ನಿರ್ಮಾಣವಾಗಿದ್ದ ಅರಮನೆ ಬೆಂಕಿಗಾಹುತಿ ಆದಾಗ ಅಶೋಕಪುರಂ ಜನತೆ ವಾರಗಟ್ಟಲೆ ಅರಮನೆಯೊಂದಿಗೆ ಗಟ್ಟಿಯಾಗಿ ನಿಂತು ಅರಮನೆ ಉಳಿಸಿದ ಕೀರ್ತಿ ಈ ಬಡಾವಣೆ ಜನರಿಗೆ ಸಲ್ಲುತ್ತದೆ. ಅವರ ಈ ಸಹಾಯವನ್ನು ಎಂದಿಗೂ ಮರೆಯುವುದಿಲ್ಲ ಎಂದರು.

ಅಶೋಕಪುರಂ ಉದ್ಯಾನವನ, ಬಲ್ಲಾಳ್ ವೃತ್ತ, ಪುರಭವನ ಆವರಣ ಹಾಗೂ ಕಲಾಮಂದಿರ ಸೇರಿದಂತೆ ನಗರದ ಎಲ್ಲೆಡೆ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸಿ, ನಾವೆಲ್ಲರೂ ಸಂಭ್ರಮಿಸುವ ದಿನ ಎಂದು ಅಭಿಪ್ರಾಯಪಟ್ಟರು.

ಈ ವೇಳೆ ಗೋಲ್ಡನ್ ಸಿಟಿ ಬಿಲ್ಡರ್ಸ್ ಚಿತ್ತಣ್ಣ, ಅಶೋಕ ಯೂತ್ ಅಸೋಸಿಯೇಷನ್ ಅಧ್ಯಕ್ಷ ಪಿ.ಟಿ.ಕೃಷ್ಣ, ಉಪಾಧ್ಯಕ್ಷ ಗುರುರಾಜ್, ಕಾರ್ಯದರ್ಶಿ ಸತೀಶ್, ಮುಖಂಡರಾದ ದೀಪಕ್ ಕುಮಾರ್, ಪ್ರಮೋದ್, ಶಶಿ, ಗೌತಮ್, ಪ್ರಜ್ವಲ್, ವಿಕಾಸ್, ಪವನ್, ರಾಘವ್, ಸಂಜಯ್, ಮಂಜುನಾಥ್, ಅಶೋಕ್, ಕಾರ್ತಿಕ್, ಗೋಪಿ, ರಾಮು ಸೇರಿದಂತೆ ಇತರರಿದ್ದರು.



ಡಾ.ಬಿ.ಆರ್.ಅಂಬೇಡ್ಕರ್ 135ನೇ ಜಯಂತಿ ಅಂಗವಾಗಿ ಏರ್ಪಡಿಸಿದ್ದ ಬಲ್ಲಾಳ್ ವೃತ್ತದಿಂದ ಅಶೋಕಪುರಂ ಉದ್ಯಾನವನದವರೆಗಿನ ದೀಪಾಲಂಕಾರ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಸಂಸದ ಯದುವೀರ್ ಪುಷ್ಪಾರ್ಚನೆ ಸಲ್ಲಿಸಿದರು.


14 APRIL
ವಿಶ್ವಜ್ಞಾನಿ, ಸಂವಿಧಾನ ಶಿಲ್ಪಿ, ಭಾರತ ರತ್ನ
ಡಾ. ಬಿ.ಆರ್ ಅಂಬೇಡ್ಕರ್ ರವರ
135ನೇ ಜನ್ಮದಿನದ ಹಾರ್ಧಿಕ ಶುಭಾಶಯಗಳು
ಶುಭಕೋರುವವರು
ನಾಗರಾಜು ಬಿ. (ಬಿಲ್ಲಯ್ಯ)
ಅಧ್ಯಕ್ಷರು, ಅಶೋಕಪುರಂ ಚಿಕ್ಕಗರಡಿ, ಉಪಾಧ್ಯಕ್ಷರು, ಬಿಜೆಪಿ ಕೆ.ಆರ್. ಕ್ಷೇತ್ರ


ವಿಶ್ವಜ್ಞಾನಿ, ಸಂವಿಧಾನಶಿಲ್ಪಿ ಬಾಬಾ ಸಾಹೇಬ್
ಡಾ.ಬಿ.ಆರ್. ಅಂಬೇಡ್ಕರ್
135ನೇ ಜಯಂತೋತ್ಸವದ
ಶುಭಾಶಯಗಳು
ಅಶೋಕಪುರಂ ಫ್ರೆಂಡ್ಸ್ ವತಿಯಿಂದ


ಚಾಮರಾಜ ಕ್ಷೇತ್ರ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷರು, ಸಂಜೀವಿನಿ ನಾಗರೀಕ ಹಿತರಕ್ಷಣಾ ಸಮಿತಿ ಅಧ್ಯಕ್ಷರು
ಹಾಗೂ ಜಿ.ಆರ್.ಎಸ್. ಕಾರ್ಮಿಕ ಸಂಘದ ಮುಖಂಡರು
ಶ್ರೀ ಎಂ.ಕುಮಾರ್ ಮಾದೇಗೌಡ (ಸಂಜೀವಿನ ಕುಮಾರ್)
ಅವರಿಗೆ ಜನ್ಮದಿನದ ಶುಭಾಶಯಗಳು
ಶುಭಕೋರುವವರು : ಎಂ.ಕುಮಾರ್ ಮಾದೇಗೌಡ (ಸಂಜೀವಿನ ಕುಮಾರ್) ಸ್ನೇಹಿತರ ಬಳಗ, ವಾರ್ಡ್ ನಂ4, ಲೋಕನಾಯಕ ನಗರ, ಹೆಬ್ಬಾಳ್